Volume : 9 | Issue : 195 | October : 23 : 2026 : Friday
ಸಂಪುಟ : 9 | ಸಂಚಿಕೆ : 195 | ಅಕ್ಟೋಬರ್ : 23 : 2026 : ಶುಕ್ರವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||

VIKRAMA VAHINI
PRGI NO: KARKAN/2018/78481





ದಸರಾ ಆಚರಣೆಯ ವೇಳೆ ಶಬ್ದಮಾಲಿನ್ಯ ಹಾಗೂ ಭಕ್ತಿಗೀತೆಗಳ ಬದಲು ಐಟಂ ಹಾಡುಗಳನ್ನು ಪ್ರಸಾರ ಮಾಡಿರುವುದಕ್ಕೆ ನಟಿ ರಮ್ಯಾ ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಿಯಮ ಉಲ್ಲಂಘಿಸುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ.

ಭಾರತದ ಯುವಜನತೆ ಅಪಾಯದಲ್ಲಿದೆಯೇ? ಪುಟ 2

26ರಂದು ಬೆಳಗಾವಿಯಲ್ಲಿ ಕಬ್ಬು ಬೆಳೆಗಾರರ ಸಭೆ ಪುಟ 3

# ನ.1ರಿಂದ ಆಸ್ಪತ್ರೆಗಳಲ್ಲಿ ದರಪಟ್ಟಿ ಕಡ್ಡಾಯ

● ವಿಕ್ರಮ ವಾಹಿನಿ । ಬೆಂಗಳೂರು

ಆಸ್ಪತ್ರೆಗಳಲ್ಲಿ ಚಿಕಿತ್ಸಾ ವೆಚ್ಚ ಮತ್ತು ಔಷಧಗಳ ದರದಲ್ಲಿ ಪಾರದರ್ಶಕತೆ ತರಲು ಆರೋಗ್ಯ ಇಲಾಖೆ ಮಹತ್ವದ ಕ್ರಮ ಕೈಗೊಂಡಿದೆ. ನವೆಂಬರ್ 1ರಿಂದ ರಾಜ್ಯದ ಸರ್ಕಾರಿ, ಖಾಸಗಿ ಹಾಗೂ ಟ್ರಸ್ಟ್ ಆಸ್ಪತ್ರೆಗಳು ಲಭ್ಯವಿರುವ ಚಿಕಿತ್ಸೆಗಳ ಅಧಿಕೃತ ದರಪಟ್ಟಿಯನ್ನು ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸುವುದು ಕಡ್ಡಾಯವಾಗಲಿದೆ. ಅಲ್ಲದೆ, ರೋಗಿಗಳಿಗೆ ನೀಡುವ ಔಷಧಗಳ ಬಿಲ್‌ನಲ್ಲಿ ಆಸ್ಪತ್ರೆಯ ಖರೀದಿ ಬೆಲೆ ಮತ್ತು ಗರಿಷ್ಠ ಚಿಲ್ಲರೆ ಬೆಲೆ (ಎಂಆರ್‌ಪಿ) ಎರಡನ್ನೂ ನಮೂದಿಸುವಂತೆ ಸೂಚಿಸಲಾಗಿದೆ.

ಆಸ್ಪತ್ರೆಯ ನೋಂದಣಿ ಕೌಂಟರ್ ಸೇರಿದಂತೆ ಸಾರ್ವಜನಿಕರಿಗೆ ಸುಲಭವಾಗಿ ಕಾಣುವ ಸ್ಥಳಗಳಲ್ಲಿ ಚಿಕಿತ್ಸೆಗಳ ವಿವರ ಹಾಗೂ ಅವುಗಳ ದರಪಟ್ಟಿಯನ್ನು ಪ್ರದರ್ಶಿಸಬೇಕು. ಇದರಿಂದ ರೋಗಿಗಳು ಚಿಕಿತ್ಸೆ ಪಡೆಯುವ ಮುನ್ನವೇ ವೆಚ್ಚದ ಬಗ್ಗೆ ಮಾಹಿತಿ ತಿಳಿದುಕೊಳ್ಳಲು ಸಾಧ್ಯವಾಗಲಿದೆ. ಚಿಕಿತ್ಸೆಯ ಹೆಸರಿನಲ್ಲಿ ಅನಿರೀಕ್ಷಿತವಾಗಿ ಹೆಚ್ಚುವರಿ ಹಣ ವಿಧಿಸುವುದನ್ನು ತಡೆಯುವುದು ಈ ಕ್ರಮದ ಉದ್ದೇಶವಾಗಿದೆ.

**ಔಷಧಗಳ ಸಂಪೂರ್ಣ ವಿವರ ಕಡ್ಡಾಯ:** ರೋಗಿಗಳಿಗೆ ನೀಡುವ ಬಿಲ್‌ನಲ್ಲಿ ಔಷಧದ ಹೆಸರು, ಬ್ರ್ಯಾಂಡ್, ಬ್ಯಾಚ್ ಸಂಖ್ಯೆ, ತಯಾರಿಕೆ ಮತ್ತು ಮುಕ್ತಾಯ ದಿನಾಂಕ, ಖರೀದಿ ಬೆಲೆ, ಎಂಆರ್‌ಪಿ ಹಾಗೂ ಅನ್ವಯಿಸುವ ತೆರಿಗೆಗಳ ವಿವರಗಳನ್ನು ಪ್ರತ್ಯೇಕವಾಗಿ ನಮೂದಿಸಬೇಕು. ಔಷಧಗಳ ಜತೆಗೆ ಸ್ಟಂಟ್‌ಗಳು, ವೈದ್ಯಕೀಯ ಉಪಕರಣಗಳು ಹಾಗೂ ಬಳಸಿ ಬಿಸಾಡುವ ವೈದ್ಯಕೀಯ ಸಾಮಗ್ರಿಗಳ ಬಿಲ್ಲಿಂಗ್‌ನಲ್ಲಿಯೂ ಪಾರದರ್ಶಕತೆ ಕಾಪಾಡುವಂತೆ ಸೂಚಿಸಲಾಗಿದೆ.




ಔಷಧಗಳ ಖರೀದಿ ಇನ್‌ವಾಯ್ಸ್‌ಗಳು, ಖರೀದಿ ದರ ಮತ್ತು ಮಾರಾಟದ ದಾಖಲೆಗಳನ್ನು ಕನಿಷ್ಠ ಮೂರು ವರ್ಷಗಳ ಕಾಲ ಸಂರಕ್ಷಿಸಬೇಕು. ಅಗತ್ಯವಿದ್ದಾಗ ಔಷಧ ನಿಯಂತ್ರಣ ಪ್ರಾಧಿಕಾರದ ಅಧಿಕಾರಿಗಳು ದಾಖಲೆಗಳನ್ನು ಪರಿಶೀಲಿಸಬಹುದು. ನಿಯಮ ಉಲ್ಲಂಘಿಸಿದರೆ ಸಂಬಂಧಿತ ಕಾನೂನುಗಳ ಅಡಿಯಲ್ಲಿ ಕ್ರಮ ಕೈಗೊಳ್ಳುವ ಎಚ್ಚರಿಕೆಯನ್ನೂ ನೀಡಲಾಗಿದೆ.

ಜಿಲ್ಲಾ ಆರೋಗ್ಯಾಧಿಕಾರಿಗಳು, ಮುಖ್ಯ ವೈದ್ಯಾಧಿಕಾರಿಗಳು ಹಾಗೂ ಔಷಧ ನಿಯಂತ್ರಣ ಪ್ರಾಧಿಕಾರದ ಅಧಿಕಾರಿಗಳು ನಿಯಮಗಳ ಅನುಷ್ಠಾನದ ಮೇಲ್ವಿಚಾರಣೆ ನಡೆಸಲಿದ್ದಾರೆ. ಚಿಕಿತ್ಸಾ ವೆಚ್ಚದ ಬಗ್ಗೆ ರೋಗಿಗಳಿಗೆ ಸ್ಪಷ್ಟ ಮಾಹಿತಿ ಒದಗಿಸಿ, ಬಿಲ್ಲಿಂಗ್‌ನಲ್ಲಿನ ಗೊಂದಲ ಕಡಿಮೆ ಮಾಡುವ ಉದ್ದೇಶ ಹೊಂದಿರುವ ಈ ಕ್ರಮಕ್ಕೆ ಖಾಸಗಿ ಆಸ್ಪತ್ರೆಗಳ ವಲಯದಿಂದ ವಿರೋಧ ವ್ಯಕ್ತವಾಗಿದೆ. ನವೆಂಬರ್ 1ರಿಂದ ನಿಯಮ ಜಾರಿಯಾದ ಬಳಿಕ ಅದರ ಅನುಷ್ಠಾನ ಹಾಗೂ ಉಲ್ಲಂಘನೆಗಳ ವಿರುದ್ಧ ಕೈಗೊಳ್ಳುವ ಕ್ರಮಗಳು ಮಹತ್ವ ಪಡೆಯಲಿವೆ.

## ಮುಖ್ಯಾಂಶಗಳು

- **ನ. 1ರಿಂದ ದರಪಟ್ಟಿ ಕಡ್ಡಾಯ:** ಆಸ್ಪತ್ರೆಗಳಲ್ಲಿ ಚಿಕಿತ್ಸೆಗಳ ಅಧಿಕೃತ ದರಪಟ್ಟಿ ಪ್ರದರ್ಶಿಸಬೇಕು.
- **ಔಷಧದ ದರ ವಿವರ:** ಬಿಲ್‌ನಲ್ಲಿ ಖರೀದಿ ಬೆಲೆ, ಎಂಆರ್‌ಪಿ ಹಾಗೂ ತೆರಿಗೆ ನಮೂದಿಸಬೇಕು.
- **ವೈದ್ಯಕೀಯ ಉಪಕರಣಗಳಿಗೂ ಅನ್ವಯ:** ಸ್ಟಂಟ್, ಉಪಕರಣಗಳು ಹಾಗೂ ವೈದ್ಯಕೀಯ ಸಾಮಗ್ರಿಗಳ ಬಿಲ್ಲಿಂಗ್‌ನಲ್ಲಿ ಪಾರದರ್ಶಕತೆ ಕಡ್ಡಾಯ.
- **ಮೂರು ವರ್ಷ ದಾಖಲೆ ಸಂರಕ್ಷಣೆ:** ಔಷಧ ಖರೀದಿ ಮತ್ತು ಮಾರಾಟದ ದಾಖಲೆಗಳನ್ನು ಕಾಪಾಡಬೇಕು.
- **ಉಲ್ಲಂಘನೆಗೆ ಕ್ರಮ:** ಅಧಿಕಾರಿಗಳಿಂದ ಪರಿಶೀಲನೆ; ನಿಯಮ ಮೀರಿದರೆ ಕಾನೂನು ಕ್ರಮ.
- **ಖಾಸಗಿ ಆಸ್ಪತ್ರೆಗಳ ವಿರೋಧ:** ಹೊಸ ನಿಯಮಗಳ ಅನುಷ್ಠಾನದ ಬಗ್ಗೆ ಕುತೂಹಲ.

## ■ ಸುದ್ದಿ ಚುಟುಕು

### ಮೇಲ್ಮನೆಯ ನಾಲ್ಕು ಸ್ಥಾನಗಳಿಗೆ ಇಂದು ಮತದಾನ

● ವಿಕ್ರಮ ವಾಹಿನಿ । ಬೆಂಗಳೂರು

ವಿಧಾನ ಪರಿಷತ್ತಿನ ಎರಡು ಶಿಕ್ಷಕರ ಹಾಗೂ ಎರಡು ಪದವೀಧರ ಕ್ಷೇತ್ರಗಳ ಚುನಾವಣೆಗೆ ಶುಕ್ರವಾರ ಮತದಾನ ನಡೆಯಲಿದ್ದು, ಚುನಾವಣಾ ಆಯೋಗ ಸಕಲ ಸಿದ್ಧತೆ ಮಾಡಿಕೊಂಡಿದೆ. ನಾಲ್ಕು ಕ್ಷೇತ್ರಗಳಲ್ಲಿ ಕಣದಲ್ಲಿರುವ ಒಟ್ಟು 43 ಅಭ್ಯರ್ಥಿಗಳ ಭವಿಷ್ಯವನ್ನು ಶಿಕ್ಷಕ ಹಾಗೂ ಪದವೀಧರ ಮತದಾರರು ನಿರ್ಧರಿಸಲಿದ್ದಾರೆ.

ಬೆಂಗಳೂರು ಶಿಕ್ಷಕರ, ಈಶಾನ್ಯ ಶಿಕ್ಷಕರ, ಪಶ್ಚಿಮ ಪದವೀಧರ ಹಾಗೂ ಆಗ್ನೇಯ ಪದವೀಧರ ಕ್ಷೇತ್ರಗಳ ವ್ಯಾಪ್ತಿಯ ತಾಲ್ಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಬೆಳಿಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದೆ. ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದು, ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಜೆಡಿಎಸ್ ಅಭ್ಯರ್ಥಿ ಹಾಗೂ ಉಳಿದ ಮೂರು ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ.

ಬೆಂಗಳೂರು ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಪುಟ್ಟಣ್ಣ ಮತ್ತು ಜೆಡಿಎಸ್‌ನ ಎ.ಪಿ. ರಂಗನಾಥ ಸೇರಿದಂತೆ ಆರು ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಶರಣಪ್ಪ ಮಟ್ಟೂರು, ಬಿಜೆಪಿಯ ಶಶೀಲ್ ಜಿ. ನಮೋಶಿ ಸೇರಿದಂತೆ 13 ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ. ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಶಶಿ ಹುಲಿಕುಂಟೆಮಠ್, ಬಿಜೆಪಿಯ ಕೆ.ಎಂ. ಸುರೇಶ್ ಸೇರಿದಂತೆ 10 ಅಭ್ಯರ್ಥಿಗಳು ಹಾಗೂ ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಮೋಹನ ಲಿಂಬಿಕಾಯಿ, ಬಿಜೆಪಿಯ ಸಂಕನೂರ ಎಸ್.ವಿ. ಸೇರಿದಂತೆ 14 ಅಭ್ಯರ್ಥಿಗಳು ಕಣದಲ್ಲಿದ್ದಾರೆ.

ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ. ಗೌಡ, ಸಂಕನೂರ ಎಸ್.ವಿ., ಶಶೀಲ್ ಜಿ. ನಮೋಶಿ ಹಾಗೂ ಪುಟ್ಟಣ್ಣ ಅವರು ನವೆಂಬರ್ 11ರಂದು ನಿವೃತ್ತರಾಗಲಿರುವ ಹಿನ್ನೆಲೆಯಲ್ಲಿ ತೆರವಾಗುವ ಸ್ಥಾನಗಳಿಗೆ ಚುನಾವಣೆ ನಡೆಯುತ್ತಿದೆ. ಅಕ್ಟೋಬರ್ 31ರೊಳಗೆ ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದ್ದು, ನೀತಿ ಸಂಹಿತೆ ಅಂತ್ಯಗೊಳ್ಳಲಿದೆ.

### ಮಾಂಜಾ ದಾರಕ್ಕೆ ಮತ್ತೊಂದು ಬಲಿ: ಮಹಿಳೆ ಸಾವು

● ವಿಕ್ರಮ ವಾಹಿನಿ । ಹುಬ್ಬಳ್ಳಿ

ಗಾಳಿಪಟ ಹಾರಿಸಲು ಬಳಸುವ ಅಪಾಯಕಾರಿ ಮಾಂಜಾ ದಾರ ಕುತ್ತಿಗೆಗೆ ಸಿಲುಕಿ ಸ್ಕೂಟಿಯಲ್ಲಿ ತೆರಳುತ್ತಿದ್ದ ಮಹಿಳೆಯೊಬ್ಬರು ಮೃತಪಟ್ಟಿರುವ ಘಟನೆ ಹುಬ್ಬಳ್ಳಿಯ ಶಿವಶಂಕರ ಕಾಲೋನಿಯಲ್ಲಿ ಗುರುವಾರ ನಡೆದಿದೆ.

ಮೃತರನ್ನು ಭರತ್ ನಗರದ ನಿವಾಸಿ ವಿದ್ಯಾ ಮಂಜುನಾಥ ಗೌಡರ (38) ಎಂದು ಗುರುತಿಸಲಾಗಿದೆ. ಅವರು ಲ್ಯಾಬ್ ತಂತ್ರಜ್ಞೆಯಾಗಿ ಕೆಲಸ ಮಾಡುತ್ತಿದ್ದರು. ಕೆಲಸಕ್ಕೆ ಸ್ಕೂಟಿಯಲ್ಲಿ ತೆರಳುತ್ತಿದ್ದಾಗ ಕಾರವಾರ ರಸ್ತೆಯ ಶಿವಶಂಕರ ಕಾಲೋನಿ ಸಮೀಪ ಕುತ್ತಿಗೆಗೆ ಮಾಂಜಾ ದಾರ ಸಿಲುಕಿದೆ. ಪರಿಣಾಮ ನಿಯಂತ್ರಣ ತಪ್ಪಿ ರಸ್ತೆಗೆ ಬಿದ್ದ ಅವರಿಗೆ ತೀವ್ರ ರಕ್ತಸ್ರಾವವಾಗಿದ್ದು, ಆಸ್ಪತ್ರೆಗೆ ಕರೆದೊಯ್ಯುವಷ್ಟರಲ್ಲಿ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಮಾಂಜಾ ದಾರ ಮಾನವ ಜೀವಕ್ಕೆ ಅಪಾಯಕಾರಿಯಾಗಿದ್ದು, ಅದನ್ನು ತಕ್ಷಣ ನಿಷೇಧಿಸಬೇಕು ಎಂದು ಮೃತರ ಸಂಬಂಧಿ ಮೋಹನ ಗೌಡರ ಆಗ್ರಹಿಸಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮಾಂಜಾ ದಾರ ಬಳಸಿ ಗಾಳಿಪಟ ಹಾರಿಸುವವರ ಹಾಗೂ ಅದನ್ನು ಮಾರಾಟ ಮಾಡುವವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹುಬ್ಬಳ್ಳಿ–ಧಾರವಾಡ ಪೊಲೀಸ್ ಆಯುಕ್ತ ಭೂಷಣ್ ಬೊರಸೆ ಎಚ್ಚರಿಕೆ ನೀಡಿದ್ದಾರೆ.

### ಚಿತ್ರದುರ್ಗದಲ್ಲಿ ಭೀಕರ ಅಪಘಾತ: ಚಾಲಕ, ಬಾಲಕ ಸಾವು

● ವಿಕ್ರಮ ವಾಹಿನಿ । ಚಿತ್ರದುರ್ಗ

ಜಿಲ್ಲೆಯ ಮಲ್ಲಾಪುರ ಗ್ರಾಮದ ಬಳಿ ಗುರುವಾರ ಕೆಎಸ್‌ಆರ್‌ಟಿಸಿ ಬಸ್ ಲಾರಿಗೆ ಡಿಕ್ಕಿ ಹೊಡೆದ ಪರಿಣಾಮ ಬಸ್ ಚಾಲಕ ಹಾಗೂ 14 ವರ್ಷದ ಬಾಲಕ ಮೃತಪಟ್ಟಿದ್ದು, 15ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದಾರೆ.

ಮೃತರನ್ನು ಬಸ್ ಚಾಲಕ ಬಾಪು ಪಾಟೀಲ್ (36) ಮತ್ತು ಪ್ರಯಾಣಿಕ ಗಗನ್ (14) ಎಂದು ಗುರುತಿಸಲಾಗಿದೆ. ಅಪಘಾತದಲ್ಲಿ ಗಾಯಗೊಂಡವರನ್ನು ಚಿತ್ರದುರ್ಗ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. 2ನೇ ಪುಟಕ್ಕೆ...

# ಬೆಂಗಳೂರಿನಲ್ಲಿ ಅಕ್ರಮ ಸಿಮ್ ಬಾಕ್ಸ್ ಜಾಲ ಪತ್ತೆ

**ಡಿಜಿಟಲ್ ಅರೆಸ್ಟ್ ಸೇರಿದಂತೆ ಸೈಬರ್ ವಂಚನೆಗಳಿಗೆ ಬಳಸುತ್ತಿದ್ದ ಅಕ್ರಮ ಸಿಮ್ ಬಾಕ್ಸ್ ಜಾಲವನ್ನು ಬೆಂಗಳೂರಿನಲ್ಲಿ ಸೈಬರ್ ಕಮಾಂಡ್ ಘಟಕ ಪತ್ತೆಹಚ್ಚಿದೆ. ಮಹಾರಾಷ್ಟ್ರದ ಇಬ್ಬರು ಅಪ್ರಾಪ್ತರು ಸೇರಿದಂತೆ ನಾಲ್ವರನ್ನು ವಶಕ್ಕೆ ಪಡೆಯಲಾಗಿದ್ದು, 10 ಸಿಮ್ ಬಾಕ್ಸ್‌ಗಳನ್ನು ಜಪ್ತಿ ಮಾಡಲಾಗಿದೆ. ಈ ಜಾಲದ ಮೂಲಕ ರೂ 100 ಕೋಟಿಗೂ ಅಧಿಕ ವಂಚನೆ ನಡೆದಿರುವ ಶಂಕೆಯಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ಡಿಜಿಟಲ್ ಅರೆಸ್ಟ್ ಸೇರಿದಂತೆ ವಿವಿಧ ಸೈಬರ್ ವಂಚನೆಗಳಿಗೆ ಬಳಸುತ್ತಿದ್ದ ಅಕ್ರಮ ಸಿಮ್ ಬಾಕ್ಸ್ ಜಾಲವನ್ನು ರಾಜ್ಯ ಸೈಬರ್ ಕಮಾಂಡ್ ಘಟಕ ಬಯಲಿಗೆಳೆದಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಾರಾಷ್ಟ್ರದ ಇಬ್ಬರು ಅಪ್ರಾಪ್ತರು ಸೇರಿದಂತೆ ನಾಲ್ವರನ್ನು ವಶಕ್ಕೆ ಪಡೆಯಲಾಗಿದ್ದು, 10 ಸಿಮ್ ಬಾಕ್ಸ್‌ಗಳು ಹಾಗೂ ಇತರ ಉಪಕರಣಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

ವೈಟ್‌ಫೀಲ್ಡ್ ಸೆನ್ ಠಾಣೆಗೆ ಏರ್‌ಟೆಲ್ ಅಧಿಕಾರಿಗಳು ನೀಡಿದ ದೂರಿನ ಆಧಾರದಲ್ಲಿ, ದೂರಸಂಪರ್ಕ ಇಲಾಖೆ ಸಹಯೋಗದೊಂದಿಗೆ ಪೊಲೀಸರು ಕಾರ್ಯಾಚರಣೆ ನಡೆಸಿದ್ದಾರೆ.

ಕಾಡುಗೋಡಿ ಹಾಗೂ ಪಟ್ಟಂದೂರು ಅಗ್ರಹಾರದಲ್ಲಿನ ಎರಡು ಬಾಡಿಗೆ ಮನೆಗಳ ಮೇಲೆ ದಾಳಿ ನಡೆಸಿದಾಗ ಅಕ್ರಮ ಜಾಲದ ಕಾರ್ಯಾಚರಣೆ ಬೆಳಕಿಗೆ ಬಂದಿದೆ. ಪ್ರತಿ ಸಿಮ್ ಬಾಕ್ಸ್‌ನಲ್ಲಿ 32 ಸಿಮ್‌ಗಳನ್ನು ಅಳವಡಿಸುವ ಸಾಮರ್ಥ್ಯವಿದ್ದು, ಒಟ್ಟು 320 ಸಿಮ್‌ಗಳನ್ನು ನಿರ್ವಹಿಸುವ ವ್ಯವಸ್ಥೆ ಮಾಡಲಾಗಿತ್ತು.

ಆರೋಪಿಗಳು ಮಹಾರಾಷ್ಟ್ರದಲ್ಲಿ ಏರ್‌ಟೆಲ್ ಸಿಮ್‌ಗಳನ್ನು ಖರೀದಿಸಿ, ಅವುಗಳನ್ನು ಇ–ಸಿಮ್‌ಗಳಾಗಿ ಪರಿವರ್ತಿಸಿ ವಂಚನೆಗೆ ಬಳಸುತ್ತಿದ್ದರು ಎನ್ನಲಾಗಿದೆ.

## ರಿಮೋಟ್ ಮೂಲಕ ಕಾರ್ಯಾಚರಣೆ

ಆರೋಪಿಗಳು ಐದು ತಿಂಗಳ ಹಿಂದೆ ಎರಡು ಮನೆಗಳನ್ನು ಬಾಡಿಗೆಗೆ ಪಡೆದು ಸಿಮ್ ಬಾಕ್ಸ್‌ಗಳನ್ನು ಅಳವಡಿಸಿದ್ದರು. ಬಳಿಕ ಮನೆಗಳಿಗೆ ಬೀಗ ಹಾಕಿ, ದೂರನಿಯಂತ್ರಣ ವ್ಯವಸ್ಥೆಯ ಮೂಲಕವೇ ಉಪಕರಣಗಳನ್ನು ನಿರ್ವಹಿಸುತ್ತಿದ್ದರು. ಯಾರಾದರೂ ಮನೆ ಪ್ರವೇಶಿಸಿದರೆ ಉಪಕರಣಗಳು ಸ್ವಯಂಚಾಲಿತವಾಗಿ ಸ್ಥಗಿತಗೊಳ್ಳುವಂತೆ ವ್ಯವಸ್ಥೆ ಮಾಡಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

ಈ ಜಾಲದ ಮೂಲಕ ದೇಶದ ವಿವಿಧೆಡೆ ಡಿಜಿಟಲ್ ಅರೆಸ್ಟ್ ಸೇರಿದಂತೆ ಆರ್ಥಿಕ ವಂಚನೆಗಳು ನಡೆದಿರುವ ಶಂಕೆಯಿದೆ. 100 ಕೋಟಿಗೂ ಅಧಿಕ ವಂಚನೆ ನಡೆದಿರುವ ಬಗ್ಗೆ ತನಿಖೆಯಲ್ಲಿ ಮಾಹಿತಿ ಲಭ್ಯವಾಗಿದ್ದು, ಆರೋಪಿಗಳ ವಿರುದ್ಧ ನೂರಾರು ಪ್ರಕರಣಗಳು ದಾಖಲಾಗಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಪ್ರಕರಣದ ಹಿಂದೆ ಕಾರ್ಯನಿರ್ವಹಿಸುತ್ತಿರುವ ಇತರರ ಪತ್ತೆಗೆ ತನಿಖೆ ಮುಂದುವರಿದಿದೆ.



ಇ–ಸಿಮ್ ಎಂದರೆ ಭೌತಿಕ ಸಿಮ್ ಕಾರ್ಡ್ ಬದಲಿಗೆ ಮೊಬೈಲ್‌ನಲ್ಲಿರುವ ಅಂತರ್ನಿರ್ಮಿತ ಚಿಪ್‌ನಲ್ಲಿ ಡಿಜಿಟಲ್ ರೂಪದಲ್ಲಿ ಕಾರ್ಯನಿರ್ವಹಿಸುವ ಸಿಮ್ ವ್ಯವಸ್ಥೆ. ಈ ತಂತ್ರಜ್ಞಾನವನ್ನು ಕಾನೂನುಬದ್ಧವಾಗಿ ಬಳಸಬಹುದಾದರೂ, ಅದನ್ನು ಸೈಬರ್ ವಂಚನೆಗೆ ದುರುಪಯೋಗಪಡಿಸಿಕೊಂಡಿರುವ ಆರೋಪ ಈ ಪ್ರಕರಣದಲ್ಲಿದೆ.

ವಿದೇಶದಲ್ಲಿರುವ ಕಿಂಗ್‌ಪಿನ್‌ಗಳ ಸೂಚನೆಯಂತೆ ಕಾರ್ಯನಿರ್ವಹಿಸುತ್ತಿದ್ದ ಆರೋಪಿಗಳಿಗೆ ಕಮಿಷನ್ ರೂಪದಲ್ಲಿ ಹಣ ಪಾವತಿಸಲಾಗುತ್ತಿತ್ತು ಎಂದು ಪೊಲೀಸರು ತಿಳಿಸಿದ್ದಾರೆ.

# ಸೌದಿ ವಿಮಾನ ನಿಲ್ದಾಣದ ಮೇಲೆ ದಾಳಿ: ಭಾರತೀಯ ಸಾವು

● ವಿಕ್ರಮ ವಾಹಿನಿ । ರಿಯಾದ್

ಸೌದಿ ಅರೇಬಿಯಾದ ದಮ್ಮಾಮ್‌ನ ಕಿಂಗ್ ಫಹದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಮೇಲೆ ನಡೆದ ದಾಳಿಯಲ್ಲಿ ಓರ್ವ ಭಾರತೀಯ ಪ್ರಜೆ ಮೃತಪಟ್ಟಿದ್ದು, ಇಬ್ಬರು ಭಾರತೀಯರು ಗಾಯಗೊಂಡಿದ್ದಾರೆ. ಘಟನೆಯಲ್ಲಿ ಸೌದಿ ಪ್ರಜೆ ಸೇರಿದಂತೆ ಒಟ್ಟು ಇಬ್ಬರು ಮೃತಪಟ್ಟಿದ್ದು, ಎಂಟು ಮಂದಿ ಗಾಯಗೊಂಡಿದ್ದಾರೆ ಎಂದು ಸೌದಿ ಅರೇಬಿಯಾದ ನಾಗರಿಕ ವಿಮಾನಯಾನ ಪ್ರಾಧಿಕಾರ ತಿಳಿಸಿದೆ.

ರಿಯಾದ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಈ ಕುರಿತು ಎಕ್ಸ್ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿದೆ. ಸೌದಿ ಅಧಿಕಾರಿಗಳ ಮಾಹಿತಿಯಂತೆ ಬುಧವಾರ ರಾತ್ರಿ ನಡೆದ ದಾಳಿಯಲ್ಲಿ ಭಾರತೀಯ ಪ್ರಜೆಯೊಬ್ಬರು ಮೃತಪಟ್ಟಿದ್ದು, ಇಬ್ಬರು ಭಾರತೀಯರು ಗಾಯಗೊಂಡಿದ್ದಾರೆ. ಘಟನೆಯ ಕುರಿತು ಹೆಚ್ಚಿನ ಮಾಹಿತಿ ಸಂಗ್ರಹಿಸಲಾಗುತ್ತಿದ್ದು, ಸಂತ್ರಸ್ತರ ಕುಟುಂಬಗಳನ್ನು ಸಂಪರ್ಕಿಸಲಾಗುತ್ತಿದೆ ಎಂದು ರಾಯಭಾರ ಕಚೇರಿ ತಿಳಿಸಿದೆ.

ದಾಳಿಯಲ್ಲಿ ಗಾಯಗೊಂಡವರಲ್ಲಿ ಇಬ್ಬರು ಭಾರತೀಯರು, ಇಬ್ಬರು ಯೆಮೆನ್ ಪ್ರಜೆಗಳು, ಇಬ್ಬರು ಬಾಂಗ್ಲಾದೇಶದವರು, ಓರ್ವ ನೇಪಾಳಿ ಹಾಗೂ ಓರ್ವ ಸೌದಿ ಪ್ರಜೆ ಸೇರಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ದಾಳಿಯಿಂದ ವಿಮಾನ ನಿಲ್ದಾಣದ ಆಸ್ತಿಪಾಸ್ತಿಗೂ ಹಾನಿಯಾಗಿದ್ದು, ನಷ್ಟದ ಪ್ರಮಾಣವನ್ನು ಅಂದಾಜಿಸಲಾಗುತ್ತಿದೆ.

ಪ್ರಯಾಣಿಕರು ಹಾಗೂ ವಿಮಾನ ನಿಲ್ದಾಣದ ಸಿಬ್ಬಂದಿಯ ಸುರಕ್ಷತೆ ಖಚಿತಪಡಿಸಲು ಮತ್ತು ಹಾನಿಯ ಪರಿಶೀಲನೆ ನಡೆಸಲು ಸಂಬಂಧಿತ ಭದ್ರತಾ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ನಾಗರಿಕ ವಿಮಾನಯಾನ ಪ್ರಾಧಿಕಾರ ತಿಳಿಸಿದೆ.

# ಬೀದಿನಾಯಿ ಹತ್ಯೆ: ಮೂವರು ವಶಕ್ಕೆ

● ವಿಕ್ರಮ ವಾಹಿನಿ । ಬೆಂಗಳೂರು

ಬೀದಿನಾಯಿಯನ್ನು ಮರಕ್ಕೆ ಕಟ್ಟಿ ಕ್ರೂರವಾಗಿ ಹಲ್ಲೆ ನಡೆಸಿ ಹತ್ಯೆ ಮಾಡಿದ ಆರೋಪದಡಿ ಮೂವರನ್ನು ವರ್ತೂರು ಠಾಣೆ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಗುಂಜೂರಿನ ಗ್ರೀನ್‌ವುಡ್ ಹೈಸ್ಕೂಲ್ ಸಮೀಪ ಈ ಘಟನೆ ನಡೆದಿದ್ದು, ನಾಯಿ ಹತ್ಯೆಯ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ ಬಳಿಕ ಶ್ವಾನಪ್ರಿಯೆ ನಿಶ್ಚಿಂತ ನರೇನ್ ಅವರು ಪೊಲೀಸರಿಗೆ ದೂರು ನೀಡಿದ್ದರು.

ದೂರಿನ ಆಧಾರದಲ್ಲಿ ಪ್ರಕರಣ ದಾಖಲಿಸಿಕೊಂಡ ಪೊಲೀಸರು ಪುನೀತ್, ಮುರಳಿ ಹಾಗೂ ಮುನಿಯಪ್ಪ ಅವರನ್ನು ವಶಕ್ಕೆ ಪಡೆದಿದ್ದಾರೆ. ನಾಯಿಯನ್ನು ಹತ್ಯೆ ಮಾಡಲು ಕಾರಣವೇನು ಎಂಬುದು ಇನ್ನೂ ತಿಳಿದುಬಂದಿಲ್ಲ. ವಿಚಾರಣೆ ಬಳಿಕ ಹೆಚ್ಚಿನ ಮಾಹಿತಿ ಲಭ್ಯವಾಗಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ಗುಂಡು ಹಾರಿಸಿ ಬೀದಿನಾಯಿ ಹತ್ಯೆ: ವ್ಯಕ್ತಿ ಬಂಧನ**

ಶಿವಮೊಗ್ಗ ಜಿಲ್ಲೆಯ ಸಾಗರ ತಾಲ್ಲೂಕಿನ ನಾಡವಳ್ಳಿ ಗ್ರಾಮದಲ್ಲಿ ಸಾಕು ನಾಯಿಯೊಂದಿಗೆ ಕಚ್ಚಾಡಿದ ಕಾರಣಕ್ಕೆ ಬೀದಿನಾಯಿಗೆ ಗುಂಡು ಹಾರಿಸಿ ಕೊಂದ ಆರೋಪದಡಿ ಲಿಂಗಮೂರ್ತಿ ಎಂಬಾತನನ್ನು ಕಳೆದ ಆಗಸ್ಟ್‌ನಲ್ಲಿ ಪೊಲೀಸರು ಬಂಧಿಸಿದ್ದರು. ನಾಡ ಬಂದೂಕಿನಿಂದ ಗುಂಡು ಹಾರಿಸಿದ ಪರಿಣಾಮ ನಾಯಿ ಮೃತಪಟ್ಟಿತ್ತು. ಆರೋಪಿ ಬಳಿ ಬಂದೂಕಿನ ಪರವಾನಗಿ ಇಲ್ಲದಿರುವುದು ತನಿಖೆಯಲ್ಲಿ ತಿಳಿದುಬಂದಿತ್ತು. ಆತನ ವಿರುದ್ಧ ಪ್ರಾಣಿಗಳ ಮೇಲಿನ ಕ್ರೌರ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿತ್ತು.



# ಸಚಿವರನ್ನು ತಡೆದದ್ದು ಖಂಡನೀಯ: ಪ್ರದೀಪ್ ಈಶ್ವರ್

● ವಿಕ್ರಮ ವಾಹಿನಿ । ಚಿಕ್ಕಬಳ್ಳಾಪುರ

ಮೈಸೂರು ದಸರಾ ಮಹೋತ್ಸವದ ವೇಳೆ ದಲಿತ ಸಮುದಾಯದ ಮೂವರು ಸಚಿವರನ್ನು ಪೊಲೀಸ್ ಅಧಿಕಾರಿ ತಡೆದಿರುವ ಘಟನೆಗೆ ಚಿಕ್ಕಬಳ್ಳಾಪುರ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಂಬಂಧಪಟ್ಟ ಪೊಲೀಸ್ ಅಧಿಕಾರಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರ ಮತ್ತು ಮುಖ್ಯಮಂತ್ರಿ ಅವರನ್ನು ಒತ್ತಾಯಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ಹಿರಿಯ ಸಚಿವರಾದ ನರೇಂದ್ರಸ್ವಾಮಿ, ಶಿವರಾಜ್ ತಂಗಡಗಿ ಹಾಗೂ ಬಸವಂತಪ್ಪ ಅವರನ್ನು ದಸರಾ ಕಾರ್ಯಕ್ರಮದ ವೇಳೆ ತಡೆದಿರುವುದು ಬೇಸರದ ಸಂಗತಿ. ಈ ನಡೆಯನ್ನು ತೀವ್ರವಾಗಿ ಖಂಡಿಸುತ್ತೇನೆ ಎಂದು ಹೇಳಿದ್ದಾರೆ.

ದಲಿತ ಸಮುದಾಯವು ನಾಡು ಮತ್ತು ದೇಶಕ್ಕೆ ಮಹತ್ವದ ಕೊಡುಗೆ ನೀಡಿದೆ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಅನುಯಾಯಿಯಾಗಿ ದಲಿತರ ಪರವಾಗಿ ಧ್ವನಿ ಎತ್ತುತ್ತಿದ್ದು, ಘಟನೆಗೆ ಸಂಬಂಧಿಸಿದ ಅಧಿಕಾರಿಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಪ್ರದೀಪ್ ಈಶ್ವರ್ ಆಗ್ರಹಿಸಿದ್ದಾರೆ.

# ಯತೀಂದ್ರ ಫೋಟೋ ನಾಪತ್ತೆ: ಕಾಂಗ್ರೆಸ್ ಪ್ರತಿಭಟನೆ

● ವಿಕ್ರಮ ವಾಹಿನಿ । ಮೈಸೂರು

ಮೈಸೂರು ದಸರಾ ಮಹೋತ್ಸವದ ಬಳಿಕ ವಾರ್ತಾ ಇಲಾಖೆ ಪ್ರಕಟಿಸಿದ ಸರ್ಕಾರಿ ಜಾಹೀರಾತಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರ ಭಾವಚಿತ್ರ ಕಾಣಿಸದಿರುವುದು ವಿವಾದಕ್ಕೆ ಕಾರಣವಾಗಿದೆ. ಇದನ್ನು ಖಂಡಿಸಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಅಹಿಂದ ಒಕ್ಕೂಟದ ಪದಾಧಿಕಾರಿಗಳು ನಗರದ ರಾಮಸ್ವಾಮಿ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸರ್ಕಾರಿ ಜಾಹೀರಾತಿನಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಭಾವಚಿತ್ರ ಇರಬೇಕಿದ್ದರೂ ಅದನ್ನು ಕೈಬಿಟ್ಟಿರುವುದು ಶಿಷ್ಟಾಚಾರದ ಉಲ್ಲಂಘನೆ ಎಂದು ಪ್ರತಿಭಟನಾಕಾರರು ಆರೋಪಿಸಿದ್ದಾರೆ. ಸಚಿವರನ್ನು ಉದ್ದೇಶಪೂರ್ವಕವಾಗಿ ಕಡೆಗಣಿಸಲಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿ, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಅಹಿಂದ ಮುಖಂಡ ಕೆ.ಎಸ್. ಶಿವರಾಮು ಸೇರಿದಂತೆ ಹಲವು ನಾಯಕರು ದಸರಾ ಸಂದರ್ಭದಲ್ಲಿ ದಲಿತ ಹಾಗೂ ಹಿಂದುಳಿದ ವರ್ಗಗಳ ಸಚಿವರನ್ನು ಕಡೆಗಣಿಸಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ದಸರಾ ಪೂಜೆಯ ವೇಳೆ ಸಚಿವರಾದ ಶಿವರಾಜ್ ತಂಗಡಗಿ, ಪಿ.ಎಂ. ನರೇಂದ್ರಸ್ವಾಮಿ ಮತ್ತು ಕೆ.ಎಸ್. ಬಸವಂತಪ್ಪ ಅವರನ್ನು ಪೊಲೀಸರು ತಡೆದಿದ್ದ ಘಟನೆಯನ್ನೂ ಉಲ್ಲೇಖಿಸಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪ್ರತಿಭಟನಾಕಾರರು ಮಾತನಾಡಿ, ಸರ್ಕಾರಿ ಕಾರ್ಯಕ್ರಮಗಳು ಹಾಗೂ ಪ್ರಕಟಣೆಗಳಲ್ಲಿ ಜನಪ್ರತಿನಿಧಿಗಳಿಗೆ ಸೂಕ್ತ ಗೌರವ ನೀಡುವುದು ಆಡಳಿತದ ಜವಾಬ್ದಾರಿಯಾಗಿದೆ. ಇಂತಹ ಘಟನೆಗಳು ಕಾರ್ಯಕರ್ತರಲ್ಲಿ ಅಸಮಾಧಾನ ಮೂಡಿಸುತ್ತವೆ.

ಜಾಹೀರಾತಿನಲ್ಲಿ ಸಚಿವರ ಭಾವಚಿತ್ರ ಕೈಬಿಟ್ಟಿರುವುದಕ್ಕೆ ಸಂಬಂಧಿಸಿದಂತೆ ವಾರ್ತಾ ಇಲಾಖೆ ಸ್ಪಷ್ಟನೆ ನೀಡಬೇಕು ಹಾಗೂ ಲೋಪಕ್ಕೆ ಕಾರಣವೇನು ಎಂಬುದನ್ನು ಬಹಿರಂಗಪಡಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಈ ವಿಚಾರದಲ್ಲಿ ಸರ್ಕಾರ ಸೂಕ್ತ ಕ್ರಮ ಕೈಗೊಂಡು, ಸರ್ಕಾರಿ ಪ್ರಕಟಣೆಗಳಲ್ಲಿ ಶಿಷ್ಟಾಚಾರ ಪಾಲನೆಯಾಗುವಂತೆ ನೋಡಿಕೊಳ್ಳಬೇಕು ಎಂದು ಮನವಿ ಮಾಡಿದರು.

# ಭಾನುವಾರವಾದರೂ ಶಾಲೆಗಳಲ್ಲಿ ಕನ್ನಡ ರಾಜ್ಯೋತ್ಸವ ಕಡ್ಡಾಯ



● ವಿಕ್ರಮ ವಾಹಿನಿ । ಬೆಂಗಳೂರು

ನವೆಂಬರ್ 1ರಂದು ಭಾನುವಾರವಾದರೂ ರಾಜ್ಯದ ಎಲ್ಲ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಶಾಲೆಗಳಲ್ಲಿ ಕನ್ನಡ ರಾಜ್ಯೋತ್ಸವವನ್ನು ಕಡ್ಡಾಯವಾಗಿ ಆಚರಿಸುವಂತೆ ಶಿಕ್ಷಣ ಇಲಾಖೆ ಸೂಚಿಸಿದೆ. ಕನ್ನಡ ನಾಡು, ನುಡಿ, ಭಾಷೆ, ಸಂಸ್ಕೃತಿ ಮತ್ತು ಪರಂಪರೆಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಉದ್ದೇಶದಿಂದ ಶಾಲೆಗಳಲ್ಲಿ ವಿಶೇಷ ಕಾರ್ಯಕ್ರಮಗಳಿಗೆ ಸಿದ್ಧತೆ ನಡೆಯುತ್ತಿದೆ.

ರಾಜ್ಯೋತ್ಸವದ ಅಂಗವಾಗಿ ವಿದ್ಯಾರ್ಥಿಗಳು ಕನ್ನಡದ ಅಸ್ಮಿತೆಯನ್ನು ಬಿಂಬಿಸುವ ವಿಶೇಷ ಉಡುಗೆಗಳನ್ನು ಧರಿಸಿ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಶಾಲೆಗಳು ಪ್ರೋತ್ಸಾಹಿಸುತ್ತಿವೆ. ಕೆಲವು ಶಾಲೆಗಳಲ್ಲಿ ಒಂದು ವಾರದ ಕಾಲ ಕರ್ನಾಟಕದ ಸಂಸ್ಕೃತಿ ಮತ್ತು ಪರಂಪರೆಯನ್ನು ಪ್ರತಿಬಿಂಬಿಸುವ ಉಡುಗೆಗಳನ್ನು ಧರಿಸಿ ಬರುವಂತೆ ಯೋಜನೆ ರೂಪಿಸಲಾಗಿದೆ. ಈ ಸಂಬಂಧ ಪೋಷಕರ ಸಹಕಾರವನ್ನೂ ಕೋರಲಾಗುತ್ತಿದೆ.

ರಾಜ್ಯೋತ್ಸವವನ್ನು ಧ್ವಜಾರೋಹಣ ಮತ್ತು ಭಾಷಣಕ್ಕೆ ಸೀಮಿತಗೊಳಿಸದೆ, ಕನ್ನಡ ನಾಡಿನ ಇತಿಹಾಸ, ಏಕೀಕರಣದ ಹೋರಾಟ, ಭಾಷೆಯ ಹಿರಿಮೆ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಪರಿಚಯಿಸುವ ಕಾರ್ಯಕ್ರಮಗಳನ್ನು ಆಯೋಜಿಸಲು ಶಾಲೆಗಳು ಮುಂದಾಗಿವೆ.

ಮಕ್ಕಳಲ್ಲಿ ಕನ್ನಡ ಭಾಷೆಯ ಬಗ್ಗೆ ಅಭಿಮಾನ ಮೂಡಿಸುವುದು ಮತ್ತು ನಾಡಿನ ನೆಲ, ಜಲ, ಭಾಷೆ ಹಾಗೂ ಸಂಸ್ಕೃತಿಯ ಕುರಿತು ಹೆಮ್ಮೆ ಬೆಳೆಸುವುದು ಈ ಆಚರಣೆಯ ಉದ್ದೇಶವಾಗಿದೆ. ಒಂದು ದಿನದ ಸಂಭ್ರಮಕ್ಕೆ ಸೀಮಿತವಾಗದೆ, ಒಂದು ವಾರದ ಕಾಲ ವಿವಿಧ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಲ್ಲಿ ಕನ್ನಡಾಭಿಮಾನ ಬೆಳೆಸಲು ಶಾಲೆಗಳು ಯೋಜಿಸಿವೆ ಎಂದು ಖಾಸಗಿ ಶಾಲೆಗಳ ಒಕ್ಕೂಟದ ಕಾರ್ಯದರ್ಶಿ ಶಶಿಕುಮಾರ್ ತಿಳಿಸಿದ್ದಾರೆ.

ಶಾಲೆಗಳಲ್ಲಿ ಕನ್ನಡ ಗೀತೆಗಳ ಗಾಯನ, ನಾಡಿನ ಮಹನೀಯರ ಜೀವನ ಪರಿಚಯ, ಕನ್ನಡ ಸಾಹಿತ್ಯ ಮತ್ತು ಜನಪದ ಕಲೆಗಳಿಗೆ ಸಂಬಂಧಿಸಿದ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಮಕ್ಕಳಲ್ಲಿ ಭಾಷಾ ಪ್ರೇಮ ಬೆಳೆಸಲು ಒತ್ತು ನೀಡಲಾಗುತ್ತಿದೆ. ಇಂತಹ ಚಟುವಟಿಕೆಗಳು ವಿದ್ಯಾರ್ಥಿಗಳಿಗೆ ಕರ್ನಾಟಕದ ಇತಿಹಾಸ ಮತ್ತು ಸಾಂಸ್ಕೃತಿಕ ವೈವಿಧ್ಯವನ್ನು ತಿಳಿಯಲು ಸಹಕಾರಿಯಾಗಲಿದ್ದು, ದೈನಂದಿನ ಜೀವನದಲ್ಲೂ ಕನ್ನಡ ಭಾಷೆಯ ಬಳಕೆಗೆ ಪ್ರೇರಣೆ ನೀಡಲಿವೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

## ಸವಿ ವಾಹಿನಿ

ಮುಂದಿರುವ ಹುಣ್ಣಿಮೆಯ ಸೊಬಗನ್ನು ಸವಿಯದೆ ಮುಂಬರಲಿರುವ ಅಮಾವಾಸ್ಯೆಯನ್ನು ನೆನೆದು ಕೊರಗುವುದು ವಿವೇಕವೆನ್ನಿಸದು.

## ದಿನ ಪಂಚಾಂಗ

ಅಕ್ಟೋಬರ್, 23-2026, ಶುಕ್ರವಾರ ಶರದ್ ಋತು, ಆಶ್ವಯುಜ ಮಾಸ, ಶುದ್ಧ ಪಕ್ಷ
ದ್ವಾದಶಿ ತಿಥಿ ಬೆ.11:43
ಪೂರ್ವಾಭಾದ್ರ ನಕ್ಷತ್ರ ರಾ.7:35
ರಾಹುಕಾಲ ಬೆ 10:35-12:03
ದ್ವಿದಳ ವ್ರತಾರಂಭ, ಹೊರನಾಡು ಅನ್ನಪೂರ್ಣೇಶ್ವರಿ ಚಂಡೀಹೋಮ, ಪ್ರದೋಷ, ಮುನಿವಳ್ಳಿ ಕೈವಲ್ಯಾಶ್ರಮ ಸ್ವಾಮಿ ಆರಾಧನೆ, ಸೊರಬ ಗೊಗ್ಗೀಹಳ್ಳಿ ಲಿಂ. ಶ್ರೀ ನಿಜಗುಣ ಶಿವಾಚಾರ್ಯ ಸ್ವಾಮಿ ಪಂಚ ಮಠ ಸಂಸ್ತಾನ ಪುಣ್ಯಸ್ಮರಣೆ, ಕುಷ್ಟಗಿ। ಮನ್ನೇರಾಳ ಚಂದಾಲಿಂಗೇಶ್ವರ ರಥ, ಖಾನಾಪುರ ಶ್ರೀರಾಜೋಟೇಶ್ವರ ಪುಣ್ಯತಿಥಿ

## ಆರೋಗ್ಯ

# ಶಮೊಂಡಾ ವೈರಸ್: ಹರಡುವಿಕೆ, ಲಕ್ಷಣಗಳೇನು?

● ವಿಕ್ರಮ ವಾಹಿನಿ । ಪ್ಯಾರಿಸ್

ಸಾಮಾನ್ಯವಾಗಿ ಜಾನುವಾರುಗಳಲ್ಲಿ ಕಾಣಿಸಿಕೊಳ್ಳುವ ಶಮೊಂಡಾ ವೈರಸ್ (Shamonda virµ) ಮಾನವನಲ್ಲಿ ಪತ್ತೆಯಾದ ಮೊದಲ ಪ್ರಕರಣ ಫ್ರಾನ್ಸ್‌ನಲ್ಲಿ ವರದಿಯಾಗಿದೆ. ತೀವ್ರವಾಗಿ ರೋಗನಿರೋಧಕ ಶಕ್ತಿ ಕುಂದಿದ್ದ ವ್ಯಕ್ತಿಯೊಬ್ಬರಲ್ಲಿ ಸೋಂಕು ಪತ್ತೆಯಾಗಿದ್ದು, ಅವರು ಅಕ್ಟೋಬರ್‌ನಲ್ಲಿ ಮೃತಪಟ್ಟಿದ್ದಾರೆ. ಈ ಸಾವು ಮತ್ತು ವೈರಸ್ ಸೋಂಕಿನ ನಡುವಿನ ಸಂಬಂಧದ ಕುರಿತು ಆರೋಗ್ಯ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.



ಪ್ರಾಥಮಿಕ ಮಾಹಿತಿಯ ಪ್ರಕಾರ, ಸೋಂಕಿತ ವ್ಯಕ್ತಿಯಲ್ಲಿ ನರಮಂಡಲಕ್ಕೆ ಸಂಬಂಧಿಸಿದ ತೊಂದರೆಗಳು ಕಾಣಿಸಿಕೊಂಡಿದ್ದವು. ಆದರೆ, ವೈರಸ್ ಸೋಂಕೇ ಸಾವಿಗೆ ನೇರ ಕಾರಣ ಎಂಬುದು ಇನ್ನೂ ದೃಢಪಟ್ಟಿಲ್ಲ. ಸದ್ಯದ ಮಾಹಿತಿಯಂತೆ, ಸಾರ್ವಜನಿಕರಿಗೆ ವ್ಯಾಪಕ ಆರೋಗ್ಯದ ಅಪಾಯವಿದೆ ಎಂಬುದಕ್ಕೆ ಯಾವುದೇ ಪುರಾವೆ ಲಭ್ಯವಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಶಮೊಂಡಾ ವೈರಸ್ ಆರ್ಥೋಬುನ್ಯಾವೈರಸ್ ಗುಂಪಿಗೆ ಸೇರಿದ್ದು, ಮುಖ್ಯವಾಗಿ ದನಗಳಲ್ಲಿ ಕಂಡುಬರುತ್ತದೆ. ಕುರಿ, ಮೇಕೆ ಸೇರಿದಂತೆ ಇತರ ಪ್ರಾಣಿಗಳಲ್ಲಿಯೂ ಇದರ ಇರುವಿಕೆ ವರದಿಯಾಗಿದೆ. 1960ರ ದಶಕದಲ್ಲಿ ನೈಜೀರಿಯಾದಲ್ಲಿ ಮೊದಲ ಬಾರಿಗೆ ಗುರುತಿಸಲಾದ ಈ ವೈರಸ್, ಆಫ್ರಿಕಾ ಮತ್ತು ಏಷ್ಯಾದ ಕೆಲವು ಪ್ರದೇಶಗಳಲ್ಲಿ ಪ್ರಾಣಿಗಳಲ್ಲಿ ಪತ್ತೆಯಾಗಿದೆ.

**ಕೀಟಗಳ ಮೂಲಕ ಹರಡುವಿಕೆ:** ಸೋಂಕಿತ ಪ್ರಾಣಿಗಳಲ್ಲಿ ವೈರಸ್ ಹರಡುವಿಕೆಗೆ ಮಿಡ್ಜ್‌ಗಳು ಎಂದು ಕರೆಯಲಾಗುವ ಸಣ್ಣ ಕಚ್ಚುವ ಕೀಟಗಳು ಪ್ರಮುಖ ಪಾತ್ರ ವಹಿಸುತ್ತವೆ. ಫ್ರಾನ್ಸ್‌ನಲ್ಲಿ ಸೋಂಕಿಗೆ ಒಳಗಾದ ವ್ಯಕ್ತಿಗೆ ಕೀಟದ ಕಡಿತದ ಮೂಲಕ ವೈರಸ್ ತಗುಲಿರಬಹುದು ಎಂದು ಶಂಕಿಸಲಾಗಿದೆ. ಆದರೆ, ಮಾನವರಲ್ಲಿ ಸೋಂಕು ಹೇಗೆ ಪರಿಣಾಮ ಬೀರುತ್ತದೆ ಮತ್ತು ಒಬ್ಬರಿಂದ ಮತ್ತೊಬ್ಬರಿಗೆ ಹರಡುವ ಸಾಧ್ಯತೆ ಇದೆಯೇ ಎಂಬುದರ ಕುರಿತು ಹೆಚ್ಚಿನ ಅಧ್ಯಯನ ಅಗತ್ಯವಿದೆ.

**ಲಕ್ಷಣಗಳ ಬಗ್ಗೆ ಸೀಮಿತ ಮಾಹಿತಿ:** ಪ್ರಾಣಿಗಳಲ್ಲಿ ಈ ವೈರಸ್ ಸೋಂಕಿನಿಂದ ಜ್ವರ, ಅತಿಸಾರ ಮತ್ತು ಆಯಾಸದಂತಹ ಲಕ್ಷಣಗಳು ಕಾಣಿಸಿಕೊಳ್ಳಬಹುದು. ಆದರೆ, ಮಾನವರಲ್ಲಿ ಇದರ ಲಕ್ಷಣಗಳ ಕುರಿತು ಸಾಕಷ್ಟು ಮಾಹಿತಿ ಲಭ್ಯವಿಲ್ಲ. ಫ್ರಾನ್ಸ್‌ನಲ್ಲಿ ವರದಿಯಾದ ಪ್ರಕರಣದಲ್ಲಿ ನರಮಂಡಲದ ತೊಂದರೆಗಳು ಕಂಡುಬಂದಿದ್ದರೂ, ಅವುಗಳಿಗೆ ವೈರಸ್ ಸೋಂಕೇ ಕಾರಣ ಎಂಬುದನ್ನು ಖಚಿತಪಡಿಸಲು ಹೆಚ್ಚಿನ ಪರಿಶೀಲನೆ ಅಗತ್ಯವಾಗಿದೆ.

ಯುರೋಪಿಯನ್ ರೋಗ ತಡೆ ಮತ್ತು ನಿಯಂತ್ರಣ ಕೇಂದ್ರ (ECDC) ಪರಿಸ್ಥಿತಿಯನ್ನು ಗಮನಿಸುತ್ತಿದೆ ಎಂದು ವರದಿಯಾಗಿದೆ. ಸಾರ್ವಜನಿಕರು ಸದ್ಯಕ್ಕೆ ಆತಂಕಪಡುವ ಅಗತ್ಯವಿಲ್ಲವಾದರೂ, ಕೀಟಗಳ ಕಡಿತದಿಂದ ರಕ್ಷಣೆ ಪಡೆಯುವುದು ಮತ್ತು ಜಾನುವಾರುಗಳಲ್ಲಿ ಅಸಾಮಾನ್ಯ ಕಾಯಿಲೆಯ ಲಕ್ಷಣಗಳು ಕಂಡುಬಂದರೆ ಪಶುವೈದ್ಯರನ್ನು ಸಂಪರ್ಕಿಸುವುದು ಸೂಕ್ತ. ಈ ಅಪರೂಪದ ಮಾನವ ಸೋಂಕಿನ ಪರಿಣಾಮಗಳು ಹಾಗೂ ಹರಡುವಿಕೆಯ ಸಾಧ್ಯತೆಗಳ ಕುರಿತು ಹೆಚ್ಚಿನ ವೈಜ್ಞಾನಿಕ ಅಧ್ಯಯನಗಳು ಅಗತ್ಯವಾಗಿವೆ.

# ಚಿತ್ರದುರ್ಗದಲ್ಲಿ ಭೀಕರ ಅಪಘಾತ: ಬಾಲಕ, ಬಾಲಕ ಸಾವು

1ನೇ ಪುಟದಿಂದ

ಗಂಭೀರವಾಗಿ ಗಾಯಗೊಂಡಿರುವ ಪ್ರಯಾಣಿಕ ರಾಜು ನಾಯ್ಕ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ದಾವಣಗೆರೆಯ ಖಾಸಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಅಪಘಾತದ ಮಾಹಿತಿ ತಿಳಿದು ಸ್ಥಳಕ್ಕೆ ಸಿಪಿಐ ಬಾಲಚಂದ್ರ ನಾಯ್ಕ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಸಂಬಂಧ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜಂತರ್ ಮಂತರ್ ಪ್ರಕರಣ: ಸಿಜೆಪಿ ನಾಯಕರ ಬಿಡುಗಡೆ, ಕ್ರೈಂ ಬ್ರಾಂಚ್ ಸಮನ್ಸ್

● ವಿಕ್ರಮ ವಾಹಿನಿ । ನವದೆಹಲಿ

ಜಂತರ್ ಮಂತರ್‌ನಲ್ಲಿ ನಡೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಜೆಪಿ ನಾಯಕರಾದ ಸೌರವ್ ದಾಸ್ ಮತ್ತು ಅಶುತೋಷ್ ರಂಕಾ ಅವರನ್ನು ವಿಶೇಷ ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಬುಧವಾರ ಬಿಡುಗಡೆ ಮಾಡಿದೆ. ಇನ್ನು ಮುಂದೆ ಶಾಂತಿಭಂಗ ಉಂಟುಮಾಡುವುದಿಲ್ಲ ಎಂದು ಲಿಖಿತ ಭರವಸೆ ನೀಡಿದ ಹಿನ್ನೆಲೆಯಲ್ಲಿ ಈ ಆದೇಶ ಹೊರಬಿದ್ದಿದೆ. ನ್ಯಾಯಾಲಯದ ಸೂಚನೆಯಂತೆ ವೈಯಕ್ತಿಕ ಹಾಗೂ ತಲಾ 50,000 ಮೊತ್ತದ ಭದ್ರತಾ ಬಾಂಡ್ ಸಲ್ಲಿಸಿದ ಬಳಿಕ ಇಬ್ಬರೂ ತಿಹಾರ್ ಜೈಲಿನಿಂದ ಬಿಡುಗಡೆಯಾದರು.

ಇಬ್ಬರ ಬಿಡುಗಡೆಯ ಬೆನ್ನಲ್ಲೇ ದೆಹಲಿ ಕ್ರೈಂ ಬ್ರಾಂಚ್ ಪೊಲೀಸರು ಸೌರವ್ ದಾಸ್, ಅಶುತೋಷ್ ರಂಕಾ ಮತ್ತು ಅಜಿಂಕ್ಯ ಶಿಂಧೆ ಅವರಿಗೆ ಪ್ರಕರಣದ ವಿಚಾರಣೆಗೆ ಹಾಜರಾಗುವಂತೆ ಸಮನ್ಸ್ ಜಾರಿ ಮಾಡಿದ್ದಾರೆ. ಮತ್ತೊಂದೆಡೆ, ಸಿಜೆಪಿ ನಾಯಕರ ಬಿಡುಗಡೆಯನ್ನು ಪಕ್ಷದ ಮುಖಂಡರು ಸ್ವಾಗತಿಸಿದ್ದು, ಆಮ್ ಆದ್ಮಿ ಪಕ್ಷದ ಸಂಚಾಲಕ ಅರವಿಂದ್ ಕೇಜ್ರಿವಾಲ್ ಕೂಡ ನ್ಯಾಯಾಲಯದ ಆದೇಶವನ್ನು ಸ್ವಾಗತಿಸಿದ್ದಾರೆ.

# ಭಾರತದ ಯುವಜನತೆ ಅಪಾಯದಲ್ಲಿದೆಯೇ?

**ಇರಾನ್‌ನ ತೈಲ ರಾಷ್ಟ್ರೀಕರಣದ ಹಿನ್ನೆಲೆಯಲ್ಲಿ ಮೊಹಮ್ಮದ್ ಮೊಸಾದೆಗ್ ಅವರ ಸರ್ಕಾರ ಪತನಗೊಂಡ ಇತಿಹಾಸದಿಂದ ಆರಂಭವಾಗುವ ಈ ಲೇಖನ, ವಿದೇಶಿ ಹಸ್ತಕ್ಷೇಪ, ರಾಜಕೀಯ ಅಸ್ಥಿರತೆ ಮತ್ತು ಜನಾಭಿಪ್ರಾಯ ರೂಪಿಸುವ ಪ್ರಯತ್ನಗಳ ಕುರಿತು ವಿಶ್ಲೇಷಿಸುತ್ತದೆ. ಬಾಂಗ್ಲಾದೇಶ ಮತ್ತು ನೇಪಾಳದಲ್ಲಿ ನಡೆದ ರಾಜಕೀಯ ಬೆಳವಣಿಗೆಗಳನ್ನು ಉಲ್ಲೇಖಿಸಿ, ಭಾರತದಲ್ಲಿನ ಯುವಜನರ ಪ್ರತಿಭಟನೆಗಳು, ಮಾದಕ ದ್ರವ್ಯಗಳ ಜಾಲ, ಸಾಮಾಜಿಕ ಮಾಧ್ಯಮಗಳಲ್ಲಿನ ಪ್ರಚಾರ ಹಾಗೂ ಸಾಂವಿಧಾನಿಕ ಸಂಸ್ಥೆಗಳ ಮೇಲಿನ ಸಾರ್ವಜನಿಕ ನಂಬಿಕೆಯ ವಿಚಾರಗಳನ್ನು ಪ್ರಸ್ತಾಪಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ವಿರುದ್ಧ ನಡೆಯುವ ರಾಜಕೀಯ ವಿರೋಧ ಮತ್ತು ಪ್ರತಿಭಟನೆಗಳ ಹಿಂದೆ ವಿದೇಶಿ ಶಕ್ತಿಗಳ ಕೈವಾಡವಿದೆ ಎಂಬ ಲೇಖಕರ ಆರೋಪಗಳನ್ನೂ ಒಳಗೊಂಡಿದೆ. ದೇಶದ ಯುವಜನತೆ ಸುಳ್ಳು ಮಾಹಿತಿ, ಪ್ರಚೋದನೆ ಮತ್ತು ರಾಜಕೀಯ ಹಿತಾಸಕ್ತಿಗಳ ಪ್ರಭಾವಕ್ಕೆ ಒಳಗಾಗದೆ, ಯಾವುದೇ ಬೆಳವಣಿಗೆಯನ್ನು ಸಾಕ್ಷ್ಯಾಧಾರಗಳೊಂದಿಗೆ ಪರಿಶೀಲಿಸಿ ವಿವೇಚನೆಯಿಂದ ನಡೆದುಕೊಳ್ಳಬೇಕು ಎಂಬ ಎಚ್ಚರಿಕೆಯನ್ನು ಲೇಖನ ನೀಡುತ್ತದೆ.**



ಇರಾನಿಯನ್ನರು ಅಮೆರಿಕವನ್ನು "ರಾಕ್ಷಸರ ನಾಡು" ಕರೆಯುತ್ತಾರೆ. ಯಾಕೆಂದು ಗೊತ್ತೇನು? ಒಂದು ಕಾಲದಲ್ಲಿ, ಇರಾನಿನ ತೈಲ ಸಂಪನ್ಮೂಲದ ಮೇಲೆ ಬ್ರಿಟನ್ ಸಂಪೂರ್ಣ ಹಿಡಿತವನ್ನು ಹೊಂದಿತ್ತು. ಎಷ್ಟೆಂದರೆ, ಲಾಭದ ಶೇಕಡಾ 84ರಷ್ಟು ಬ್ರಿಟನ್ನಿಗೆ ಮತ್ತು ಕೇವಲ ಶೇಕಡಾ 16ರಷ್ಟು ಇರಾನಿಗೆ ಹೋಗುತ್ತಿತ್ತು. 1951ರಲ್ಲಿ ಮೊಹಮ್ಮದ್ ಮೊಸಾದೆಗ್ ಎಂಬ ನಿಜವಾದ ದೇಶಭಕ್ತ ಇರಾನಿನ ಪ್ರಧಾನ ಮಂತ್ರಿಯಾದರು. ಇರಾನಿನ ತೈಲ ಸಂಪನ್ಮೂಲಗಳ ಮೇಲೆ ವಿದೇಶಿ ಕಂಪನಿಗಳ ನಿಯಂತ್ರಣವಿರುವುದು ಅವರಿಗೆ ಇಷ್ಟವಾಗಲಿಲ್ಲ. ಅದನ್ನು ಅವರು ಒಪ್ಪಲಿಲ್ಲ. ಮಾರ್ಚ್ 15, 1951ರಂದು ಮೊಸಾದೆಗ್ ತೈಲ ಉದ್ಯಮವನ್ನು ರಾಷ್ಟ್ರೀಕರಣಗೊಳಿಸುವ ಮಸೂದೆಯನ್ನು ಮಂಡಿಸಿದರು. ಆ ಮಸೂದೆ ಬಹುದೊಡ್ಡ ಬಹುಮತದೊಂದಿಗೆ ಅಂಗೀಕರಿಸಲ್ಪಟ್ಟಿತು. 'ಟೈಮ್' ನಿಯತಕಾಲಿಕವು ಅವರನ್ನು 1951ರ "ಮ್ಯಾನ್ ಆಫ್ ದಿ ಇಯರ್" (ವರ್ಷದ ವ್ಯಕ್ತಿ) ಎಂದು ಹೆಸರಿಸಿತು ಕೂಡ!

ಆದರೆ ಈ ನಿರ್ಧಾರವು ಬ್ರಿಟನ್ನಿನ ಹಿತಾಸಕ್ತಿಗಳಿಗೆ ಧಕ್ಕೆ ತಂದಿತು. ಲಂಚ, ಹತ್ಯೆಯ ಪ್ರಯತ್ನಗಳು ಮತ್ತು ಮಿಲಿಟರಿ ದಂಗೆಗಳ ಮೂಲಕ ಮೊಸಾದೆಗ್ ಅವರನ್ನು ಪದಚ್ಯುತಗೊಳಿಸಲು ಅವರು ಪ್ರಯತ್ನಿಸಿದರು, ಆದರೆ ಇರಾನಿನ ದೂರದೃಷ್ಟಿ ಮತ್ತು ಜನಪ್ರಿಯತೆಯು ಆ ಯೋಜನೆಗಳನ್ನು ವಿಫಲಗೊಳಿಸಿತು. ಬ್ರಿಟನ್ ತಾನು ವಿಫಲವಾದಾಗ ತನಗೆ ಸಹಾಯ ಮಾಡುವಂತೆ ಅಮೆರಿಕದ ಮೊರೆ ಹೋಯಿತು. ಮೊಸಾದೆಗ್ ಅವರನ್ನು ಉರುಳಿಸಲು ಸಿಐಎ (CIA- CIVILIAN FOREIGN INTELLIGENCE SERVICE OF THE UNITED STATES GOVERNMENT) 1 ಮಿಲಿಯನ್ ಡಾಲರ್ (48 ಟಚಿಇಖು) ಅನುದಾನ ನೀಡಿತು. ಸಾರ್ವಜನಿಕ ಅಸಮಾಧಾನವನ್ನು ಸೃಷ್ಟಿಸುವುದು, ಮಾಧ್ಯಮ ಮತ್ತು ಧಾರ್ಮಿಕ ಮುಖಂಡರಿಗೆ ಹಣ ನೀಡಿ ತಮ್ಮ ಪರ ಟಿಟಟಣತಚಿಖಣಜ ಮಾಡಿಕೊಳ್ಳುವುದು ಮತ್ತು ಅಂತಿಮವಾಗಿ ಭ್ರಷ್ಟ ಸಂಸದರ ಮೂಲಕ ಸರ್ಕಾರವನ್ನು ಉರುಳಿಸುವುದು ಈ ಯೋಜನೆಯ ಭಾಗವಾಗಿತ್ತು.

ಮೊಸಾದೆಗ್ ವಿರೋಧಿ ವಾತಾವರಣವನ್ನು ಸೃಷ್ಟಿಸಲು ಪತ್ರಕರ್ತರು, ಸಂಪಾದಕರು ಮತ್ತು ಧರ್ಮಗುರುಗಳಿಗೆ 631 ಮಿಲಿಯನ್ ಡಾಲರ್ ಸುಮಾರು 300 ಕೋಟಿಗಳಿಗಿಂತಲೂ ಹೆಚ್ಚು ನೀಡಲಾಯಿತು. ನಕಲಿ ಪ್ರತಿಭಟನೆಗಳಲ್ಲಿ ಭಾಗವಹಿಸಲು ಸಾವಿರಾರು ಜನರಿಗೆ ಹಣ ಪಾವತಿಸಲಾಯಿತು. ಜಾಗತಿಕ ಮಾಧ್ಯಮಗಳು ಕೂಡ ಅಮೆರಿಕವನ್ನು ಬೆಂಬಲಿಸಲು ಪ್ರಾರಂಭಿಸಿದವು. ಇಂದು ಮೋದಿಯವರ ವೈಯಕ್ತಿಕ ಜೀವನದ ಮೇಲೆ ನಡೆಯುವ ದಾಳಿಗಳಂತೆಯೇ, ಮೊಸಾದೆಗ್ ಅವರ ಮೇಲೂ ವೈಯಕ್ತಿಕ ವ್ಯಂಗ್ಯಚಿತ್ರಗಳ ಮೂಲಕ ದಾಳಿ ನಡೆಸಲಾಯಿತು. ಮೊಸಾದೆಗ್ ಅವರನ್ನು ಸರ್ವಾಧಿಕಾರಿ ಎಂದು ಕರೆಯಲಾಯಿತು. ಸಂಸತ್ತಿನ ಮೂಲಕ ತಮ್ಮ ಸರ್ಕಾರವನ್ನು ಉರುಳಿಸಲಾಗುವುದು ಎಂದು ಅರಿವಾದಾಗ, ಮೊಸಾದೆಗ್ ಅವರು ಸಂಸತ್ತನ್ನು ವಿಸರ್ಜಿಸಿಬಿಟ್ಟರು. ಮೊಸಾದೆಗ್ ಅವರನ್ನು ಪದಚ್ಯುತಗೊಳಿಸುವಂತೆ ಅಮೆರಿಕವು ಷಾ (ಇರಾನಿನ ಅಂದಿನ ದೊರೆ) ಮೇಲೆ ಬಲವಾದ ಒತ್ತಡ ಹೇರಿತು. ಮತ್ತು ನಕಲಿ ಪ್ರತಿಭಟನೆಗಳ ಅನಂತರ, ಮೊಸಾದೆಗ್ ಶರಣಾದರು. ಅವರನ್ನು ಜೈಲಿನಲ್ಲಿ ಇರಿಸಲಾಯಿತು ಮತ್ತುಆನಂತರ ಗೃಹಬಂಧನದಲ್ಲಿಡಲಾಯಿತು.

ಆನಂತರ, ಇರಾನಿನ ತೈಲವನ್ನು ಅಮೆರಿಕ (40%), ಇಂಗ್ಲೆಂಡ್ (40%) ಮತ್ತು ಇತರ ಯುರೋಪಿಯನ್ ದೇಶಗಳ (20%) ನಡುವೆ ಹಂಚಿಕೊಳ್ಳಲಾಯಿತು. ತೀವ್ರಗಾಮಿ ಖೊಮೇನಿ ಅಧಿಕಾರಕ್ಕೆ ಬಂದಮೇಲೆ ಸಾಮಾನ್ಯ ಇರಾನಿಯನ್ನರ ಸ್ಥಿತಿ ಮತ್ತಷ್ಟು ಹದಗೆಟ್ಟಿತು. ಇರಾನಿನ ಸಂಪನ್ಮೂಲಗಳ ಮೇಲೆ ವಿದೇಶಿಯರ ಬದಲಿಗೆ ಸ್ವದೇಶಿ ಕಂಪನಿಗಳ ನಿಯಂತ್ರಣವಿರಬೇಕೆಂದು ಬಯಸಿದ್ದೇ ಮೊಸಾದೆಗ್ ಮಾಡಿದ 'ಅಪರಾಧ'ವಾಗಿತ್ತು. ಒಂದು ವೇಳೆ ಮೊಸಾದೆಗ್‌ಗೆ ಬೆಂಬಲ ಸಿಕ್ಕಿದ್ದರೆ, 1955ರ ವೇಳೆಗೆ ಇರಾನ್ ಸಂಪೂರ್ಣ ಪ್ರಜಾಪ್ರಭುತ್ವ ರಾಷ್ಟ್ರವಾಗಬಹುದಿತ್ತು. ಆದರೆ ಪತ್ರಕರ್ತರು, ಸಂಪಾದಕರು, ಸಂಸದರು ಮತ್ತು ಪ್ರತಿಭಟನಾಕಾರರು ಹಣಕ್ಕಾಗಿ ತಮ್ಮ ದೇಶದ ಭವಿಷ್ಯವನ್ನೇ ಮಾರಾಟ ಮಾಡಿಕೊಂಡರು. ಅದಕ್ಕಾಗಿಯೇ ಅಮೆರಿಕನ್ನರನ್ನು "ರಾಕ್ಷಸರ ನಾಡು" (LAND OF THE DEVILS) ಎಂದು ಕರೆಯಲಾಗುತ್ತದೆ.

ಅಮೆರಿಕಾದ ದೂರ್ತತನವೇ ಜಗತ್ತಿನ ಹಲವು ರಾಷ್ಟ್ರಗಳನ್ನು ಬರ್ಬಾದು ಮಾಡಿದೆ. ರಾಷ್ಟ್ರಗಳ ನಾಗರಿಕತೆ, ಸಂಸ್ಕೃತಿಯನ್ನು ನಾಶಗೊಳಿಸಿದ ಅಮೆರಿಕಕ್ಕೆ ಈಗ ಭಾರತದ ಮೇಲೆ ಕಣ್ಣು ಬಿದ್ದಿದೆ. ಭಾರತವನ್ನು ತನ್ನ ನಿಯಂತ್ರಣಕ್ಕೆ ತಂದುಕೊಳ್ಳುವುದಕ್ಕಾಗಿ ಅದು ಯಾವ ಹಂತಕ್ಕೂ ಇಳಿಯುತ್ತದೆಂಬುದನ್ನು ಅದು ಇರಾನಿನ ಮೇಲೆ ಮಾಡಿದ, ಮಾಡುತ್ತಿರುವ ವಿಧ್ವಂಸಕ ಕೃತ್ಯಗಳನ್ನು ಜಗತ್ತು ನೋಡುತ್ತಿದೆ. ಜಗತ್ತಿನ ಯಾವುದೋ ಮೂಲೆಯಲ್ಲಿ ಏನಾದರೂ ಸಂಭವಿಸಿದರೆ ಅದು ಭಾರತಕ್ಕಂತೂ ಸಮಸ್ಯೆಯಾಗುತ್ತದೆ ಎಂಬುದು ಅಷ್ಟು ಸುಲಭವಾಗಿ ಅರ್ಥವಾಗುವುದಿಲ್ಲ.

ಪಕ್ಕದ ಬಾಂಗ್ಲಾದೇಶದಲ್ಲಿ ಆದ ರಾಜಕೀಯ ತಲ್ಲಣಗಳು, ಆಡಳಿತ ಯಂತ್ರದ ಪತನ ಜಗತ್ತನ್ನು ಬೆಚ್ಚಿಬೀಳಿಸಿತು. ಆದರೆ, ಅದನ್ನು ಸೂಕ್ಷ್ಮವಾಗಿಸಿಕೊಂಡರೆ, ಅದರ ಹಿಂದೆ ನರೇಟಿವ್ ಬಿಲ್ಡ್ ಆಗಿರುವ ರೀತಿ ಮತ್ತು ಸಂಸ್ಥೆಗಳ ಮೇಲಿನ ಕುಸಿತದ ಮಾದರಿಗಳು ಕಾಣುತ್ತವೆ. ಸಾರ್ವಜನಿಕ ಸೇವಾ ಮೀಸಲಾತಿಯ ವಿರೋಧದಿಂದಿಗೆ ಆರಂಭವಾದ ಪ್ರತಿಭಟನೆ ಗಿಂತ ಮುಂಚೆ ಚುನಾವಣಾ ಆಯೋಗದ ಮೇಲೆ ಪಾರದರ್ಶಕತೆಯ ಮೇಲೆ ಸತತವಾಗಿ ಪ್ರಶ್ನೆಗಳನ್ನು ಎತ್ತಲಾಗಿತ್ತು. ಚುನಾವಣೆಗಳು ಅಕ್ರಮ ಎಂಬುದನ್ನು ಜನರಲ್ಲಿ ಹರಡಲಾಯಿತು. ಸರ್ಕಾರದ ವಿರುದ್ಧ ಜೆನ್ ಝೀ ಸಮುದಾಯವನ್ನು ಬೀದಿಗೆ ತರಲಾಯಿತು. ಚುನಾವಣಾ ಆಯೋಗದೊಳಗಿನ ಭಿನ್ನಾಭಿಪ್ರಾಯಗಳನ್ನು ಮಾಧ್ಯಮಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಬಿಂಬಿಸಿ ಆಯೋಗವನ್ನೇ ಅನುಮಾನಿಸುವಂತೆ ಮಾಡಿ ಅರಾಜಕತೆಯನ್ನು ಹುಟ್ಟಿಸಿ ಆಗಬಾರದ್ದು ಆಗಿಹೋಯಿತು. ಕಡಿವಾಣವಿಲ್ಲದ ಹುಚ್ಚು ಕುದುರೆಯಂತಾಗಿ ಜೆನ್ ಝೀ ಯುವ ಸಮುದಾಯ ದೇಶವನ್ನು ಬರ್ಬಾದುಗೊಳಿಸಿತು.

ಸದ್ಯ ಭಾರತವೂ ಅಂಥದ್ದೇ ಒಂದು ನಿರ್ಣಾಯಕ ಘಟ್ಟದಲ್ಲಿದೆ. ನೇಪಾಳ ಮತ್ತು ಬಾಂಗ್ಲಾದಲ್ಲಿ ಆದ ರಾಜಕೀಯ ದೊಂಬಿ, ರೈತರ ಪ್ರತಿಭಟನೆ, ಸರ್ಜಿಕಲ್ ಸ್ಟ್ರೈಕ್, ಏರ್ ಸ್ಟ್ರೈಕ್, ತ್ರಿವಳಿ ತಲಾಖ್ ನಿಷೇಧ, ಮಣಿಪುರ ದಂಗೆ, ನೋಟು ಬ್ಯಾನ್, ಗೋಹತ್ಯೆ ನಿಷೇಧ, ಆಪರೇಷನ್ ಸಿಂಧೂರ್ ಅವಹೇಳನ, ಪ್ರಧಾನಿ ನಿಂದನೆ, ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶದ ಮಾನ ಹರಾಜು ಹಾಕಲು ಪ್ರಯತ್ನಿಸಿದ ನೀಟ್ ವಿಚಾರಕ್ಕೆ ಸಂಬಂಧಿಸಿದ ಜಿರಳೆ ಚೀರಾಟ, ನಕಲಿ ವಿಷಯಗಳ ಪ್ರಚಾರ, ಸುಳ್ಳು ಚಳವಳಿಗಳು, ತಪ್ಪಾದ ಅಂಕಿಅಂಶಗಳು, ಜಾತಿ ಹಾಗೂ ಧರ್ಮದ ಆಧಾರದ ಮೇಲೆ ಜನರನ್ನು ವಿಭಜಿಸುವುದು, ತುಷ್ಟೀಕರಣದ ರಾಜಕೀಯ, ಜಾತಿ ರಾಜಕೀಯ, ಹಿಂದು ಅವಹೇಳನ, ಸಾಂಸ್ಥಿಕ ಸಂಸ್ಥೆಗಳ ಅವಹೇಳನ ಮತ್ತು ಅವುಗಳ ಬಗ್ಗೆ ಜನರಲ್ಲಿರುವ ನಂಬಿಕೆಯನ್ನು ನಾಶಗೊಳಿಸುವ ಯತ್ನ, ವಿದೇಶಿ ದುಷ್ಟರೊಂದಿಗೆ ಸೇರಿಕೊಂಡು ದೇಶದಲ್ಲಿ ಆಂತರಿಕ ದೊಂಬಿಯೆಬ್ಬಿಸಲು ನಿರಂತರ ಪ್ರಯತ್ನ.. ಒಂದೇ ಎರಡೇ..? ನೂರಾರು ದೇಶವಿರೋಧಿ ಕುಕೃತ್ಯಗಳು ಮೋದಿ ಪ್ರಧಾನಿಯಾದಂದಿನಿಂದ ನಡೆಯುತ್ತಲೇ ಇವೆ. ಒಂದೋ, ಆಡಳಿತ ಯಂತ್ರವನ್ನು ತಮಗೆ ಬೇಕಾದಂತೆ ನಿಯಂತ್ರಿಸುವ ಹುನ್ನಾರ ಅಥವಾ ಮೋದಿ ನೇತೃತ್ವದ ಬಿಜೆಪಿ ಸರ್ಕಾರವನ್ನು ಕಿತ್ತೊಗೆದು ಅರಾಜಕತೆಯನ್ನು ಹುಟ್ಟಿಸುವುದು– ಇದು ಪಬ್ಲಿಕ್ ಸೀಕ್ರೆಟ್ಟು.




ಇದು ಕೇವಲ ನೇಹಾ ಬೋರಾ ಅಥವಾ ಸಿಜೆಪಿ ಅಥವಾ ಇನ್ಯಾವುದೋ ವಿದ್ಯಾರ್ಥಿ ಯುವ ಸಮುದಾಯದ ಕಥೆಯಲ್ಲ, ಇದರ ಹಿಂದೆ ಬೇರೆಯದೇ ಆದ ಕಥೆಯಿದೆ! ಅದ್ಯಾವುದು ಗೊತ್ತೇನು? 2014ರಲ್ಲಿ ಮೋದಿ ಪ್ರಧಾನಿಯಾದ ದಿನಗಳಲ್ಲೇ ಅದಾನಿ ಪೋರ್ಟ್‌ನಲ್ಲಿ ಸರಿಸುಮಾರು 3000 ಕೋಟಿ ಬೆಲೆಬಾಳುವ ಅತಿದೊಡ್ಡ ಡ್ರಗ್ ಬಸ್ಟ್ ನಡೆಯುತ್ತದೆ. ಭಾರತೀಯ ನೌಕಾಪಡೆಯ ಪೋಲೀಸರು ಇದರ ಮೂಲದ ತನಿಖೆ ಆರಂಭಿಸುತ್ತಾರೆ. ಆಗ ಸಿಕ್ಕಿದ ಸತ್ಯವೇನೆಂದರೆ, ಪಾಕಿಸ್ತಾನ ಮೂಲದಿಂದ ಪಂಜಾಬ್ ಮೂಲಕ ಇಡೀ ದೇಶದ ಯುವಕರನ್ನು ಅಮಲಿನಲ್ಲಿ ತೇಲಿಸುವ ಮಾಸ್ಟರ್ ಪ್ಲಾನ್ ಅದಾಗಿತ್ತು ಎಂಬುದು!

ಇದಾದ ಅನಂತರ 2014ರಿಂದ ಇಲ್ಲಿಯವರೆಗೆ ಸುಮಾರು 71600 ಕೋಟಿಯಷ್ಟು ಡ್ರಗ್ಸನ್ನು ಭಾರತ ಸರ್ಕಾರ ಸೀಜ್ ಮಾಡದೇ ಇದ್ದಿದ್ದರೆ ಇವತ್ತು ಎಷ್ಟೋ ಲಕ್ಷಾಂತರ ಯುವಕರ ಪ್ರಾಣಕ್ಕೆ ಸಂಚಕಾರವಿತ್ತು. ಅದರಲ್ಲಿ ಎಂಟು ಮೇಜರ್ ಡ್ರಗ್ ಬಸ್ಟ್ ಗಳಿದ್ದವು. ಕಾಂಗ್ರೆಸ್ ಕಾಲದಲ್ಲಿ ಇಂಥ ಸುದ್ದಿ ಎಂದಾದರೂ ಕೇಳಿದ್ದೀರ? ಸಾಧ್ಯವೇ ಇಲ್ಲ. ಅಂದರೆ ಆಗಿನ ಆಡಳಿತ ಹಾಗಿತ್ತು. ಉತ್ತರ ಪ್ರದೇಶದ ಅತೀಕ್ ಅಹ್ಮದ್ ಎಂಬವನು ಡ್ರಗ್ ಹಾಗೂ ಖೋಟಾನೋಟಿನ ದಂಧೆಯನ್ನ ರಾಜಾರೋಷವಾಗಿಯೇ ನಡೆಸುತ್ತಿದ್ದ. ಕೊನೆಯಲ್ಲಿ ಅವನನ್ನು ಮುಗಿಸಿಬಿಟ್ಟವು ಕಾಣದ ಕೈಗಳು.

ಯಾವಾಗ ಮೋದಿ ಸರ್ಕಾರ ಡ್ರಗ್ಸ್ ದಂಧೆಯ ವಿಚಾರದಲ್ಲಿ ಗಟ್ಟಿ ನಿರ್ಧಾರ ತೆಗೆದುಕೊಂಡು ಭಾರತಕ್ಕೆ ಡ್ರಗ್ಸ್ ವಿದೇಶದಿಂದ ಬರುವುದನ್ನ ತಡೆಹಿಡಿಯಿತೋ, ಅಲ್ಲಿಂದಲೇ ನೇಹಾ ಬೋರಾಳಂಥ ಯುವ ಸಮುದಾಯಕ್ಕೆ ತಳಮಳ ಶುರುವಾಯಿತು. ಇಷ್ಟಕ್ಕೆ ನಿಂತಿದ್ದರೆ ಹೇಗೋ ಗಾಂಜಾದಿಂದ ಮ್ಯಾನೇಜ್ ಮಾಡಬಹುದಿತ್ತೇನೋ, ಆದರೆ, ಕೇಂದ್ರ ಸರ್ಕಾರ ಅದೇನೋ ಕಠಿಣ ತಿದ್ದುಪಡಿ ತಂದು 1985ರ NDPS (nacrotic drugs and psychotropic substances- ಮಾದಕ ದ್ರವ್ಯಗಳು ಮತ್ತು ಮನೋವಿಕೃತ ಪದಾರ್ಥಗಳ ಕಾಯಿದೆ) ಕಾಯ್ದೆಯನ್ನು ಇನ್ನಷ್ಟು ಕಠಿಣವಾಗಿಸಿತು. ಇದರಲ್ಲಿ ಗಾಂಜಾ ಕೂಡ ಕೊಕೇನ್, ಚರಸ್‌ಗಳ ಗುಂಪಿಗೆ ಸೇರಿತು. ಕೇವಲ ಸರಬುರಾಜು ಮಾಡುವವನು ಮಾತ್ರವಲ್ಲ ಸೇವಿಸುವವನು– ಇಬ್ಬರೂ ಸಮಾನ ತಪ್ಪಿತಸ್ಥರು. ಅಲ್ಲಿಗೆ ಯುವ ಸಮುದಾಯದ ಅಮಲಿಗೆ ಅಮಲೇರಿ ಬಿಟ್ಟಿತು!

ಇಂಥ ಪ್ರತಿಭಟನೆಗಳೆಲ್ಲ ಕೇವಲ ವಿದ್ಯಾರ್ಥಿಗಳಿಗೆ ಅಂತ ಅಂದುಕೊಳ್ಳುವುದೇ ಮೂರ್ಖತನ. ಭಾರತವನ್ನು ನಾಶಮಾಡುವ ಅಂತಾರಾಷ್ಟ್ರೀಯ ಮಟ್ಟದ ಬಹುದೊಡ್ಡ ಅಜೆಂಡಾ ಇದರ ಹಿಂದಿದೆ. ಈ ಪ್ರತಿಭಟನೆಯಲ್ಲಿ ಭಾಗವಹಿಸುವವರೆಲ್ಲರೂ ಬಹುಪಾಲು ಯುವ ಸಮುದಾಯಕ್ಕೆ ಸೇರಿದವರು. ಮಾದಕ ವ್ಯಸನದ ಅಮಲಿನಲ್ಲಿ ದೊಂಬಿಯೆಬ್ಬಿಸಿ ಹೇಗಾದರೂ ಮಾಡಿ ಒತ್ತಡ ತಂದು ಈ ಸರ್ಕಾರವನ್ನು ಕಿತ್ತೊಗೆದು, ೦೦ಕ ಅಥವಾ ಕಾಂಗ್ರೆಸ್ಸನ್ನು ಅಧಿಕಾರಕ್ಕೆ ತಂದರೆ ಪಂಜಾಬಿನ ಮೂಲಕ ಡ್ರಗ್ ಸರಬುರಾಜನ್ನು ಸುಲಭಗೊಳಿಸಿಕೊಳ್ಳುವ ದುಷ್ಟ ಉಪಾಯವಿದೆ. FCRA ಬಿಲ್ ಜಾರಿಯಾದರೆ ಫಾರಿನ್ ಫಂಡ್ ನಿಲ್ಲುತ್ತೆ ಅನ್ನೋ ಕಾರಣಕ್ಕೆ ಇವರೆಲ್ಲ ರೊಚ್ಚಿಗೆದ್ದಿದ್ದಾರೆ ಎಂಬುದು ಸುಳ್ಳು. ದೇಶದಲ್ಲಿ ದೊಡ್ಡಮಟ್ಟದ ಅರಾಜಕತೆಯನ್ನು ಎಬ್ಬಿಸುವ ವಿದೇಶಿ ಕೈವಾಡವಿದೆ. ಮಾದಕ ವಸ್ತುಗಳಿಂದ ದೇಶದ ಯುವ ಸಮುದಾಯವನ್ನ ಅಮಲಲ್ಲಿ ತೇಲಿಸಿ ದೇಶಕ್ಕೆ ಬೆಂಕಿ ಹಚ್ಚುವ ಅಜೆಂಡಾವೂ ದೊಡ್ಡಾಗಿಯೇ ಇದೆ. ಇದಕ್ಕೆ ಅಮೆರಿಕಾ, ಚೀಣಾ, ಪಾಕ್, ಬಾಂಗ್ಲಾದೇಶಗಳ ಸಂಪೂರ್ಣ ಮಸಲತ್ತಿದೆ. ಕಾರಣವಿಷ್ಟೆ: 2029ರಲ್ಲಿ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಬಹುಮತದಲ್ಲಿ ಗೆಲ್ಲುತ್ತದೆಂಬ ಸಮೀಕ್ಷೆ. ಅದನ್ನು ಹೇಗಾದರೂ ಮಾಡಿ ತಡೆಯಬೇಕು. ಅದಕ್ಕಾಗಿ ಆಡಳಿತ ವಿರೋಧಿ ಅಲೆಯನ್ನು ದೇಶಾದ್ಯಂತ ಇಂಥ ದೊಂಬಿಗಳ ಮೂಲಕ ಪ್ರಚಾರ ಮಾಡುವುದು. ವಿದ್ಯಾರ್ಥಿ, ಚುನಾವಣಾ ಆಯೋಗ, ಎಸ್ ಐ ಆರ್, ಸುಪ್ರೀಂಕೋರ್ಟ್, ನ್ಯಾಯಾಲಯ, ನ್ಯಾಯಾಧೀಶರು, ಕಾನೂನು, ಸಂವಿಧಾನ– ಇವೆಲ್ಲ ಇಂಥ ಅರಾಜಕತೆಯನ್ನು ಸೃಷ್ಟಿಸುವಲ್ಲಿ ಬಳಸುವ ಗುರಾಣಿಗಳು.

ಈ ಕಾಲಘಟ್ಟದಲ್ಲಿ ದೇಶದ ಜನತೆ ತುಂಬಾ ಜಾಗರೂಕರಾಗಿರಬೇಕು. ಭ್ರಷ್ಟ ಮಾಧ್ಯಮಗಳ ಅಪಪ್ರಚಾರಕ್ಕೆ ಬಲಿಯಾಗಬಾರದು. ಪ್ರತಿಯೊಬ್ಬ ದೇಶಭಕ್ತರೂ ಪ್ರಧಾನಿ ನರೇಂದ್ರ ಮೋದಿ ಸರ್ಕಾರದೊಂದಿಗೆ ದೃಢವಾಗಿ ನಿಲ್ಲಬೇಕು. ಇಲ್ಲದಿದ್ದರೆ, ಭಾರತವೂ ಇರಾನಿನಂತಹ ದುಃಸ್ಥಿತಿಯನ್ನು ಎದುರಿಸಬೇಕಾಗುತ್ತದೆ. ಇಂದು, ಅನೇಕ ಜಾಗತಿಕ ಗುಪ್ತಚರ ಸಂಸ್ಥೆಗಳು ಮೋದಿ ಸರ್ಕಾರವನ್ನು ಉರುಳಿಸಲು ಭಾರತೀಯ ರಾಜಕಾರಣಿಗಳನ್ನು ತಮ್ಮ ಏಜೆಂಟರನ್ನಾಗಿ ನೇಮಿಸಿಕೊಳ್ಳಲು ಪ್ರಯತ್ನಿಸುತ್ತಿವೆ. ಯಾವ್ಯಾವುದೋ ಮಾರ್ಗದಲ್ಲಿ ದೇಶ ನಾಶಕ್ಕೆ ಇಳಿದಿದೆ. ಅಪ್ರತಿಮವಾಗಿ ಭಾರತ ಅಭಿವೃದ್ಧಿ ಹೊಂದುತ್ತಿರುವುದು ಅಮೆರಿಕಾ, ಚೀಣಾ, ಪಾಕ್ ನಂಥ ದೇಶಗಳಿಗೆ ಸಹಿಸಲಾಗುತ್ತಿಲ್ಲ. ನಮ್ಮ ಭವಿಷ್ಯವನ್ನು ನಾವೇ ರೂಪಿಸಿಕೊಳ್ಳಬೇಕಷ್ಟೆ. 'ನ್ಯೂಯಾರ್ಕ್ ಟೈಮ್ಸ್' ಮಹಮ್ಮದ್ ಮೊಸಾದೆಗ್ ಅವರನ್ನು ಸರ್ವಾಧಿಕಾರಿ ಎಂದು ಕರೆದಿತ್ತು. ಭಾರತದ ದೂರದೃಷ್ಟಿಯ ನಾಯಕ, ಸ್ವದೇಶಿ ಚಿಂತಕ ಮೋದಿಯವರನ್ನು 'ಟೈಮ್' ಮ್ಯಾಗಜಿನ್ "ವಿಭಜಕ" (DIVIDER-IN-CHIEF) ಎನ್ನುತ್ತಿದೆ. ಇದು ಕಾಕತಾಳೀಯವಲ್ಲ! ಇದೊಂದು ಕುತಂತ್ರಗಾರಿಕೆ.

ಇಂಥ ಯಾವ ಕುತಂತ್ರಕ್ಕೂ ದೇಶದ ಯುವಜನತೆ ಬಲಿಯಾಗದಂತೆ ಎಚ್ಚರವಹಿಸಬೇಕು. ದೇಶದ ಬೇರೆ ಬೇರೆ ಭಾಗಗಳಲ್ಲಿ ನಡೆದ, ನಡೆಯುವ ಜೆನ್ ಝೀ ಪ್ರತಿಭಟನೆಗಳು ಭಾರತದ ಯುವಜನತೆ ಅಪಾಯದಲ್ಲಿದೆ ಎಂಬುದನ್ನು ಸಾಬೀತು ಮಾಡುತ್ತಿದೆ. ಯಾರದ್ದೋ ಅಜೆಂಡಾ ಹಾವಿನ ಹುನ್ನಾರಕ್ಕೆ ಬಿದ್ದು ಯವ್ವನದ ಹುಮ್ಮಸ್ಸಿನಲ್ಲಿ ಮಾಡಬಾರದ್ದನ್ನು ಮಾಡಿ ಹೆತ್ತವರಿಗೆ ನೋವುಂಟು ಮಾಡಿ ಜೀವನಪರ್ಯಂತ ದುಃಖಿಸುವಂತಾಗಬಾರದು ಎಂಬ ಎಚ್ಚರದಲ್ಲಿ ಯುವಜನತೆ ತಮ್ಮ ಬದುಕನ್ನು ಕಾಪಾಡಿಕೊಳ್ಳಬೇಕು. ಇಂಥ ದೇಶವಿರೋಧಿ ಪ್ರತಿಭಟನೆಗಳು ದೇಶದ್ರೋಹ ಎಂಬುದು ಅರಿವಾಗಬೇಕು.

ಪ್ರತಿಯೊಬ್ಬ ಭಾರತೀಯನೂ ಅರ್ಥ ಮಾಡಿಕೊಳ್ಳಬೇಕಾದ ಸಂಗತಿಯೇನೆಂದರೆ, ಬಿಜೆಪಿ ಸುಮಾರು ಮೂವತ್ತು ವರ್ಷಗಳ ಕಾಲ ವಿಪಕ್ಷದ ಸ್ಥಾನದಲ್ಲಿತ್ತು. ಆದರೆ, ಯಾವುದೇ ಸಂದರ್ಭದಲ್ಲಿ ವಿದೇಶಿ ದುಷ್ಟ ಕೂಟಗಳೊಂದಿಗೆ ಸೇರಿಕೊಂಡು ಭಾರತದ ರಾಜಕೀಯದಲ್ಲಿ ಹಸ್ತಕ್ಷೇಪ ಮಾಡಲಿಲ್ಲ. ಆಫ್ ಕೋರ್ಸ್ ಮಾಡುವುದೂ ಇಲ್ಲ. ಬಿಜೆಪಿ ಎಂದಿಗೂ ಸೇನೆಯನ್ನು ಅವಮಾನಿಸಲಿಲ್ಲ. ಅವರೆಂದಿಗೂ ಅಧಿಕಾರ ರಾಜಕೀಯದಲ್ಲಿ ದೇಶದ್ರೋಹದ ಕೆಲಸ ಮಾಡಲಿಲ್ಲ. ಮತ್ತು ಚೀನಾ, ಅಮೆರಿಕಾ, ಪಾಕಿಸ್ಥಾನ, ಬಾಂಗ್ಲಾದಂಥ ದೇಶಗಳನ್ನು ಹೊಗಳಲಿಲ್ಲ. ಬಿಜೆಪಿಯ ಪಾಲಿಗೆ ದೇಶಭಕ್ತಿ ಎಂಬುದು ಒಂದು ವಿದೇಶಿ ಪ್ರಾಯೋಜಿತ ಕೋರ್ಸಲ್ಲ. ಅದು ರಕ್ತಗತವಾಗಿರಬೇಕಾದ ವಂಶವಾಹಿನಿ. ಆ ವಂಶವಾಹಿನಿ ಇಲ್ಲದವರು ಅನ್ನದ್ರೋಹದ ಇಂಥ ಪ್ರತಿಭಟನೆಗಳಿಗೆ ಕುಮ್ಮಕ್ಕು ಕೊಡುತ್ತಾರೆ. ಬೆಂಬಲ ಕೊಡುತ್ತಾರೆ. ಇವರಿಗೆ, ದೇಶದ ಅಭಿವೃದ್ಧಿ ಬೇಡ. ದೇಶದ ಪ್ರಗತಿಯಲ್ಲಿ ಎಲ್ಲರ ಹಿತವಿದೆ. ದೇಶದ ಅವನತಿಯಲ್ಲಿ ಎಲ್ಲರ ಅವನತಿಯಿದೆ ಎಂಬುದು ಇವರಿಗೆ ಗೊತ್ತಿಲ್ಲದ ಸಂಗತಿಯೇನಲ್ಲ. ಆದರೂ ದೇಶದ ಯುವಜನತೆಯನ್ನು ಅಪಾಯದ ಕೂಪಕ್ಕೆ ತಳ್ಳುತ್ತಿರುವುದೇಕೆ? ನಿನ್ನೆ ದೆಹಲಿಯ ಹೈಕೋರ್ಟ್ " ನೀವು ಜೆನ್ ಝೀಗಳೇ ಅಲ್ಲ. ನೀವು ಯುವಜನರನ್ನು ದಾರಿತಪ್ಪಿಸುವಿರೇಕೆ?" ಎಂದು ಜಿರಳೆಗಳಿಗೆ ಪ್ರಶ್ನಿಸಿದೆ.

# ಬ್ಲೂ ಲೈನ್ ಮೆಟ್ರೋ ಕಾಮಗಾರಿ ತ್ವರಿತಗೊಳಿಸಿ: ಕೃಷ್ಣ ಬೈರೇಗೌಡ

● ವಿಕ್ರಮ ವಾಹಿನಿ । ಬೆಂಗಳೂರು

ಈಗಾಗಲೇ ಒಂದು ವರ್ಷ ವಿಳಂಬವಾಗಿರುವ ಕೆ.ಆರ್.ಪುರದಿಂದ ಹೆಬ್ಬಾಳ ಮಾರ್ಗದ ಬ್ಲೂ ಲೈನ್ ಮೆಟ್ರೋ ಕಾಮಗಾರಿಯನ್ನು ತ್ವರಿತಗೊಳಿಸಿ, ಅಕ್ಟೋಬರ್ ಅಂತ್ಯದೊಳಗೆ ಪ್ರಾಯೋಗಿಕ ಸಂಚಾರ ಆರಂಭಿಸುವಂತೆ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಗುರುವಾರ ಕಾಮಗಾರಿ ಸ್ಥಳ ಪರಿಶೀಲನೆ ನಡೆಸಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ ಮಾತನಾಡಿದ ಅವರು, ಮರ ತೆರವು ವಿಚಾರದ ನ್ಯಾಯಾಲಯದ ತಡೆಯಾಜ್ಞೆ, ಕಾವೇರಿ ನೀರು ಮತ್ತು ಒಳಚರಂಡಿ ಪೈಪ್‌ಲೈನ್‌ಗಳ ಸ್ಥಳಾಂತರ ಹಾಗೂ ಹೊರವರ್ತುಲ ರಸ್ತೆಯ ವಾಹನ ದಟ್ಟಣೆಯಿಂದ ಕಾಮಗಾರಿ ವಿಳಂಬವಾಗಿದೆ ಎಂದು ತಿಳಿಸಿದರು.



ಕೆ.ಆರ್.ಪುರದಿಂದ ಮಾರತ್‌ಹಳ್ಳಿವರೆಗೆ ನವೆಂಬರ್ ಮೊದಲ ವಾರದಲ್ಲಿ ಹಂತ ಹಂತವಾಗಿ ರೈಲು ಪರೀಕ್ಷೆ ನಡೆಸಿ, ಮುಂದಿನ ವರ್ಷದ ಮಧ್ಯಭಾಗದ ವೇಳೆಗೆ ವಾಣಿಜ್ಯ ಸಂಚಾರ ಆರಂಭಿಸುವ ಗುರಿ ಹೊಂದಲಾಗಿದೆ. ಹೆಬ್ಬಾಳದಿಂದ ವಿಮಾನ ನಿಲ್ದಾಣದವರೆಗಿನ ಮಾರ್ಗದಲ್ಲೂ ಮುಂದಿನ ವರ್ಷದ ಅಕ್ಟೋಬರ್-ನವೆಂಬರ್ ವೇಳೆಗೆ ರೈಲು ಸಂಚಾರ ಆರಂಭಿಸಲು ಸೂಚಿಸಲಾಗಿದೆ.

ಇದೇ ವೇಳೆ, ಕಾಳೇನ ಅಗ್ರಹಾರದಿಂದ ತಾವರೆಕೆರೆವರೆಗಿನ ಪಿಂಕ್ ಲೈನ್‌ನ 7.5 ಕಿ.ಮೀ. ಎತ್ತರದ ಮಾರ್ಗದಲ್ಲಿ ಪರೀಕ್ಷೆಗಳು ಪೂರ್ಣಗೊಂಡಿದ್ದು, ಮುಂದಿನ ನಾಲ್ಕೈದು ದಿನಗಳಲ್ಲಿ ಕಾರ್ಯಾಚರಣೆಗೆ ಅನುಮತಿ ಸಿಗುವ ನಿರೀಕ್ಷೆಯಿದೆ. ಕಾಮಗಾರಿ ಪೂರ್ಣಗೊಂಡ ಸ್ಥಳಗಳಲ್ಲಿನ ಅನಗತ್ಯ ಬ್ಯಾರಿಕೇಡ್‌ಗಳನ್ನು ತೆರವುಗೊಳಿಸಿ ವಾಹನ ಸಂಚಾರಕ್ಕೆ ಅವಕಾಶ ನೀಡುವಂತೆಯೂ ಸೂಚಿಸಲಾಗಿದೆ.

ಬೆಂಗಳೂರು ಸುತ್ತಮುತ್ತ 148 ಕಿ.ಮೀ. ವ್ಯಾಪ್ತಿಯ ಉಪನಗರ ರೈಲು ಯೋಜನೆಯನ್ನು 2030ರ ಏಪ್ರಿಲ್ ವೇಳೆಗೆ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಬಿಎಂಟಿಸಿಗೆ ಹೆಚ್ಚುವರಿಯಾಗಿ 4,500 ವಿದ್ಯುತ್ ಬಸ್‌ಗಳನ್ನು ಖರೀದಿಸಲು ಅನುಮೋದನೆ ನೀಡಲಾಗಿದ್ದು, ಮೆಟ್ರೋ, ಉಪನಗರ ರೈಲು ಮತ್ತು ಸಾರ್ವಜನಿಕ ಸಾರಿಗೆ ವಿಸ್ತರಣೆಯಿಂದ ನಗರದ ಸಂಚಾರ ದಟ್ಟಣೆ ಕಡಿಮೆಯಾಗಲಿದೆ ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

# ತಮಿಳುನಾಡು, ಪುದುಚೇರಿ, ಕೇರಳದಲ್ಲಿ ಭಾರೀ ಮಳೆ ಎಚ್ಚರಿಕೆ

● ವಿಕ್ರಮ ವಾಹಿನಿ । ಚೆನ್ನೈ

ತಮಿಳುನಾಡು, ಪುದುಚೇರಿ ಮತ್ತು ಕೇರಳದಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಭಾರತೀಯ ಹವಾಮಾನ ಇಲಾಖೆ ನೀಡಿದೆ. ಮಳೆಯ ಹಿನ್ನೆಲೆಯಲ್ಲಿ ಪುದುಚೇರಿ ಮತ್ತು ಕಾರೈಕಲ್‌ನ ಶಾಲೆಗಳಿಗೆ ಗುರುವಾರ ರಜೆ ಘೋಷಿಸಲಾಗಿದೆ.

ತಮಿಳುನಾಡಿನ ಹಲವು ಜಿಲ್ಲೆಗಳಲ್ಲಿ ನಿರಂತರ ಮಳೆಯಿಂದ ಜನಜೀವನ ಅಸ್ತವ್ಯಸ್ತಗೊಂಡಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ. ಅಕ್ಟೋಬರ್ 25ರವರೆಗೆ ಕೆಲವು ಪ್ರದೇಶಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ.

ಇತ್ತ, ಕೇರಳದ ಪರಸಾಲ ರೈಲು ನಿಲ್ದಾಣದ ಸಮೀಪ ಭೂಕುಸಿತದಿಂದ ಬಿಲಾಸ್‌ಪುರ-ತಿರುನಲ್ವೇಲಿ ಎಕ್ಸ್‌ಪ್ರೆಸ್ ರೈಲಿನ ಎಂಜಿನ್ ಹಳಿ ತಪ್ಪಿದೆ. ಇದರಿಂದ ರೈಲು ಸಂಚಾರಕ್ಕೆ ಅಡಚಣೆಯಾಗಿದ್ದು, ಆರು ಪ್ರಯಾಣಿಕ ರೈಲುಗಳನ್ನು ರದ್ದುಗೊಳಿಸಲಾಗಿದೆ. ಪ್ರಯಾಣಿಕರ ಅನುಕೂಲಕ್ಕಾಗಿ ಬಸ್ ವ್ಯವಸ್ಥೆ ಕಲ್ಪಿಸಲಾಗಿದ್ದು, ಹಾನಿಗೊಳಗಾದ ಮಾರ್ಗದಲ್ಲಿ ದುರಸ್ತಿ ಕಾರ್ಯ ಕೈಗೊಳ್ಳಲಾಗಿದೆ.

## ನಂದಿಧ್ವಜ ಪೂಜೆಗೆ ಸಚಿವರಿಗೆ ನಿರ್ಬಂಧ: ವಿಚಾರಣೆಗೆ ಸಿಎಂ ಆದೇಶ

● ವಿಕ್ರಮ ವಾಹಿನಿ । ಬೆಂಗಳೂರು

ಮೈಸೂರು ಅರಮನೆ ಆವರಣದಲ್ಲಿ ನಡೆದ ನಂದಿಧ್ವಜ ಪೂಜೆಯ ಸಂದರ್ಭದಲ್ಲಿ ಸಚಿವರಾದ ಬಾಲಕೃಷ್ಣ, ನರೇಂದ್ರ ಸ್ವಾಮಿ ಹಾಗೂ ಬಸವಂತಪ್ಪ ಅವರಿಗೆ ಪೂಜಾ ಸ್ಥಳಕ್ಕೆ ಪ್ರವೇಶಿಸಲು ನಿರ್ಬಂಧ ವಿಧಿಸಿದ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಈ ಕುರಿತು ವಿಚಾರಣೆ ನಡೆಸಿ ವರದಿ ಸಲ್ಲಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಸೂಚಿಸಿದ್ದಾರೆ.

ಮಂತ್ರಿಗಳನ್ನೇ ನಿರ್ಬಂಧಿಸುವ ಮೂಲಕ ಪೊಲೀಸ್ ಅಧಿಕಾರಿಗಳು ಉದ್ಧಟತನದಿಂದ ವರ್ತಿಸಿರುವುದು ಕಂಡುಬಂದಿದೆ. ತಕ್ಷಣವೇ ಮಧ್ಯಪ್ರವೇಶಿಸಿ ಸಚಿವರ ಪ್ರವೇಶಕ್ಕೆ ಅನುವು ಮಾಡಿಕೊಡಲಾಗಿದೆ. ಆದರೂ ಅಧಿಕಾರಿಗಳ ಉಡಾಫೆ ವರ್ತನೆಯನ್ನು ಸಹಿಸಲು ಸಾಧ್ಯವಿಲ್ಲ ಎಂದು ಸಿಎಂ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಘಟನೆಗೆ ಹೊಣೆಗಾರರಾದ ಅಧಿಕಾರಿಗಳು ಯಾರು ಎಂಬುದನ್ನು ವಿಚಾರಣೆ ನಡೆಸಿ ವರದಿ ನೀಡುವಂತೆ ಮುಖ್ಯ ಕಾರ್ಯದರ್ಶಿಗೆ ಆದೇಶಿಸಲಾಗಿದೆ. ವರದಿ ಬಂದ ಬಳಿಕ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಂದಿಧ್ವಜ ಪೂಜೆಯಂತಹ ಸಾಂಪ್ರದಾಯಿಕ ಹಾಗೂ ಧಾರ್ಮಿಕ ಮಹತ್ವ ಹೊಂದಿರುವ ಕಾರ್ಯಕ್ರಮಗಳಲ್ಲಿ ಶಿಷ್ಟಾಚಾರ ಪಾಲನೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಜನಪ್ರತಿನಿಧಿಗಳಿಗೆ ಅಗತ್ಯ ಗೌರವ ನೀಡುವುದರ ಜತೆಗೆ, ಭದ್ರತಾ ವ್ಯವಸ್ಥೆ ಮತ್ತು ಪ್ರವೇಶ ನಿರ್ವಹಣೆಯಲ್ಲಿ ಸಮನ್ವಯದಿಂದ ಕಾರ್ಯನಿರ್ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡುವ ಅಗತ್ಯವಿದೆ ಎಂದು ಸರ್ಕಾರದ ಮೂಲಗಳು ತಿಳಿಸಿವೆ.

# 26ರಂದು ಬೆಳಗಾವಿಯಲ್ಲಿ ಕಬ್ಬು ಬೆಳೆಗಾರರ ಸಭೆ: ಸಿಎಂ

● ವಿಕ್ರಮ ವಾಹಿನಿ । ಬೆಂಗಳೂರು

"ಅಕ್ಟೋಬರ್ 26 ರಂದು ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆ ಮಾಲೀಕರ ಸಭೆ ಬೆಳಗಾವಿಯಲ್ಲಿ ನಿಗದಿಯಾಗಿದೆ. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಕಾರಣಾಂತರಗಳಿಂದ ಭಾಗವಹಿಸುತ್ತಿಲ್ಲ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ದೆಹಲಿಗೆ ತೆರಳುವ ಮುನ್ನ ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು.

"ಸಭೆಯನ್ನು ಮೊದಲು ನೀವು ಮಾಡಿ, ನಂತರ ನಾವು ಸಭೆ ಮಾಡುತ್ತೇವೆ ಎಂದು ಜೋಶಿಯವರು ಹೇಳಿದ್ದಾರೆ. ಕಬ್ಬು ಬೆಳೆಗಾರರ ಸಮಸ್ಯೆ ಕೇವಲ ಕರ್ನಾಟಕದ ಮಾತ್ರವಲ್ಲದೆ ಇಡೀ ದೇಶಕ್ಕೆ ಸಂಬಂಧಿಸಿದ ವಿಚಾರ. ಈ ಕುರಿತು ಕೇಂದ್ರ ಮಟ್ಟದಲ್ಲಿ ಅಧಿಕಾರಿಗಳ ಜೊತೆ ಪ್ರತ್ಯೇಕ ಸಭೆ ನಡೆಸಿ ಪರಿಹಾರ ಕಂಡುಕೊಳ್ಳಲಾಗುವುದು" ಎಂದರು.

"ಅರಣ್ಯ ಭೂಮಿ ವಿವಾದಗಳಿಗೆ ಸಂಬಂಧಪಟ್ಟ ಕೇಂದ್ರ ಸಚಿವರ ಜೊತೆ ಚರ್ಚೆ ನಡೆಸಲಾಗುತ್ತದೆ. ಗೋವಾದಲ್ಲಿ ಚುನಾವಣೆ ಇರುವ ಕಾರಣ ಮಹದಾಯಿ ಕುರಿತು ತೀರ್ಮಾನ ಕೈಗೊಳ್ಳುವುದು ಸ್ವಲ್ಪ ಕಷ್ಟವಾಗಬಹುದು.

ತುಂಗಭದ್ರಾ ನೀರಿನ ವಿಚಾರವಾಗಿ ಆಂಧ್ರಪ್ರದೇಶದ ಮುಖ್ಯಮಂತ್ರಿಗಳೊಂದಿಗೆ ಪರಸ್ಪರ ಭೇಟಿಯಾಗಿ ಚರ್ಚಿಸಲು ಮನವಿ ಮಾಡಲಾಗಿದೆ. ಆಂಧ್ರ ಅಥವಾ ದೆಹಲಿಯಲ್ಲಿ ಈ ಭೇಟಿ ನಡೆಸಲಾಗುವುದು. ತುಂಗಭದ್ರಾ ಜಲಾಶಯದಲ್ಲಿ ನೀರಿನ ಕೊರತೆ ತೀವ್ರವಾಗಿದ್ದು, ರೈತರಿಂದ ನೀರಿನ ಬೇಡಿಕೆ ವಿಪರೀತವಾಗಿದೆ. ಮಳೆಯಿಲ್ಲದ ಕಾರಣ ಮುಂದಿನ ಕಾರ್ಯತಂತ್ರ ರೂಪಿಸಬೇಕಿದೆ. ಬರಗಾಲದ ಕುರಿತು ರಾಜ್ಯದ ಬೇಡಿಕೆಗಳನ್ನು ಸಲ್ಲಿಸಲು ಪ್ರಧಾನಮಂತ್ರಿ ಹಾಗೂ ಗೃಹಸಚಿವರನ್ನು ಭೇಟಿ ಮಾಡಿ ಚರ್ಚಿಸಲಾಗುವುದು. ಈ ವಿಚಾರಗಳ ಚರ್ಚೆಗೆ ಪ್ರತ್ಯೇಕ ತಂಡಗಳನ್ನು ರಚಿಸಲಾಗಿದೆ. ಅಧಿಕಾರಿಗಳನ್ನೂ ನಿಯೋಜಿಸಲಾಗಿದೆ" ಎಂದರು.

ಮತ್ಯಾವ ಕೇಂದ್ರ ಸಚಿವರನ್ನು ಭೇಟಿ ಮಾಡಲಾಗುವುದು ಎಂದು ಕೇಳಿದಾಗ, "ಐಟಿಐ ವಿಚಾರಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅವರ ಸಮಯ ಕೋರಲಾಗಿದೆ.

ದಸರಾ ಕಾರ್ಯ ನಿಮಿತ್ತ ಅವರಿಗೂ ಬಿಡುವಿಲ್ಲದ ಕಾರಣ, ಸಮಯ ಸಿಕ್ಕ ಕೂಡಲೇ ಈ ಕುರಿತು ಚರ್ಚಿಸಲಾಗುವುದು.

ಪೋಲೆಂಡ್ ಪ್ರಧಾನಿಗಳು ಶುಕ್ರವಾರ ಭೇಟಿ ನೀಡುವ ಕಾರಣಕ್ಕೆ ಇಂದೇ ರಾಜ್ಯಕ್ಕೆ ತೆರಳಲಿದ್ದೇನೆ. ರಾಜ್ಯದ ವಿಚಾರಗಳ ಚರ್ಚೆಗೆ ಮತ್ತೊಂದು ಸೂಕ್ತ ದಿನದಂದು ದೆಹಲಿಗೆ ಭೇಟಿ ನೀಡಲಾಗುವುದು" ಎಂದು ತಿಳಿಸಿದರು.

**ವಿಶ್ವವಿಖ್ಯಾತ ಮೈಸೂರು ದಸರಾ ಯಶಸ್ಸು; ಅನ್ಯ ರಾಜ್ಯಗಳ ಸಿಎಂಗಳ ಮೆಚ್ಚುಗೆ:**

"ಬುಧವಾರ ನಡೆದ ದಸರಾ ಜಂಬೂಸವಾರಿ ಅತ್ಯಂತ ಯಶಸ್ವಿಯಾಗಿ ನೆರವೇರಿದೆ. ಇಡೀ ಭಾರತದ ವೈಭವವನ್ನು ಸಾರುವಂತಹ ಪಂಜಿನ ಕವಾಯತು ಹಾಗೂ ಸ್ತಬ್ಧಚಿತ್ರಗಳು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿವೆ. ಕೇರಳ ಹಾಗೂ ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳು ಕೂಡ ದಸರೆಗೆ ಬಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಮುಂದಕ್ಕೂ ಅವರ ರಾಜ್ಯಗಳ ಕಲಾತಂಡಗಳನ್ನು ಕಳುಹಿಸಿಕೊಡುವುದಾಗಿ ತಿಳಿಸಿದ್ದಾರೆ" ಎಂದರು.

"ಸಚಿವ ಕೆ.ಜೆ. ಜಾರ್ಜ್ ಅವರು ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಹಾಗೂ ಬಸವರಾಜ ರಾಯರೆಡ್ಡಿ ಸೇರಿದಂತೆ ವಿವಿಧ ಜವಾಬ್ದಾರಿಗಳನ್ನು ವಹಿಸಿಕೊಂಡಿದ್ದ ಸಚಿವರು ಹಾಗೂ ಅಧಿಕಾರಿಗಳು ದಸರಾವನ್ನು ಯಶಸ್ವಿಗೊಳಿಸಲು ಶ್ರಮಿಸಿದ್ದಾರೆ. ರಾಯರೆಡ್ಡಿ ಅವರು ವಿದೇಶಿ ರಾಯಭಾರಿಗಳಿಗೆ ಅಚ್ಚುಕಟ್ಟಾಗಿ ಆತಿಥ್ಯ ನೀಡಿದರು. ಪರಿಷತ್ ಚುನಾವಣೆ ಇದ್ದ ಕಾರಣಕ್ಕೆ ಒಂದಷ್ಟು ಜನ ಸಚಿವರಿಗೆ ವಿನಾಯಿತಿ ನೀಡಲಾಗಿತ್ತು.



ಡಿಸಿಎಂ ಪರಮೇಶ್ವರ್ ಅವರು ತುಮಕೂರು ದಸರಾದಲ್ಲಿ ಭಾಗಿಯಾಗಿದ್ದರು. ಜಯಮಾಲಾ, ರಾಕ್ ಲೈನ್ ವೆಂಕಟೇಶ್ ನೇತೃತ್ವದ ಚಲನಚಿತ್ರ ವಾಣಿಜ್ಯ ಮಂಡಳಿ ತಂಡ, ಪ್ರಸಿದ್ಧ ಕ್ರೀಡಾಪಟುಗಳು, ಭಾರತೀಯ ಸೇನೆ, ವಾಯುಪಡೆ, ಹೆಚ್ ಎಎಲ್, ಹೆಚ್ ಎಂಟಿ ಮುಂತಾದ ಕೇಂದ್ರ ಸಂಸ್ಥೆಗಳು ತಮ್ಮ ಟ್ಯಾಬ್ಲೋಗಳ ಮೂಲಕ ಮೆರುಗು ತಂದವು. ಅವರಿಗೂ ನನ್ನ ಕೃತಜ್ಞತೆಗಳು. ಡ್ರೋಣ್ ಪ್ರದರ್ಶನ ಹೊಸ ದಾಖಲೆ ಬರೆದಿದೆ" ಎಂದು ಹೇಳಿದರು.

**ಮುಖ್ಯ ಕಾರ್ಯದರ್ಶಿಗಳಿಂದ ತನಿಖೆ:**

ಪೂಜೆ ವೇಳೆ ಸಚಿವರಿಗೆ ಅಡ್ಡಿ ಪಡಿಸಿದ ವಿಚಾರ ಕೇಳಿದಾಗ, "ಇದು ಅಧಿಕಾರಿಗಳ ಅಚಾತುರ್ಯ. ನಂಧಿ ಧ್ವಜಕ್ಕೆ ಪೂಜೆ ಮಾಡಲು ಹೋಗುವಾಗ ಈ ರೀತಿ ಆಗಿದೆ. ನಾನೇ ಸಚಿವರನ್ನು ಬಿಡಿಸಿದೆ. ಈ ಬಗ್ಗೆ ಮುಖ್ಯ ಕಾರ್ಯದರ್ಶಿಗಳು ಪರಿಶೀಲನೆ ಹಾಗೂ ತನಿಖೆ ನಡೆಸುತ್ತಿದ್ದಾರೆ. ಇದೆಲ್ಲ ಹೊರತಾಗಿ ಪೊಲೀಸ್ ಸಿಬ್ಬಂದಿ, ಅಧಿಕಾರಿ ವರ್ಗ ಸಾಕಷ್ಟು ದುಡಿದಿದ್ದಾರೆ. ಅವರಿಗೆ ಕೈ ಮುಗಿದು ಧನ್ಯವಾದ ಹೇಳುತ್ತೇನೆ" ಎಂದರು.

ಶಿವಮೊಗ್ಗ ದಸರಾದಲ್ಲಿ ದುರ್ಘಟನೆ ನಡೆದಿದ್ದರ ಬಗ್ಗೆ ಕೇಳಿದಾಗ, "ಇಂತಹ ಘಟನೆಗಳು ನಡೆಯುತ್ತವೆ ಎನ್ನುವ ಅರಿವು ನನಗೆ ಇದ್ದ ಕಾರಣಕ್ಕೆ ಅರಣ್ಯ ಸಚಿವರಾದ ರಾಮಲಿಂಗಾರೆಡ್ಡಿ ಅವರ ನೇತೃತ್ವದಲ್ಲಿ ಸಭೆ ನಡೆಸಿ ಮೈಸೂರು ದಸರಾದಲ್ಲಿ ಎಚ್ಚರಿಕೆ ತೆಗೆದುಕೊಳ್ಳಲಾಗಿತ್ತು. ಅಂಬಾರಿ ಹೊರಲು ಬೇರೆ ಆನೆ ಆಯ್ಕೆ ಮಾಡಲಾಗಿತ್ತು. ಕೊನೆಗೆ ಪ್ರಶಾಂತನನ್ನು ಆಯ್ಕೆ ಮಾಡಲಾಯಿತು" ಎಂದರು.

"ಶಿವಮೊಗ್ಗದಲ್ಲಿ ಸ್ವಲ್ಪ ಯಾಮಾರಿದ್ದಾರೆ. ಮುಂದಿನ ಬಾರಿ ಇನ್ನಷ್ಟು ಎಚ್ಚರಿಕೆ ವಹಿಸಲಾಗುವುದು. ನಮಗಿದು ಎಚ್ಚರಿಕೆ ಘಂಟೆ. ಅದೃಷ್ಟವಶಾತ್ ಯಾರಿಗೂ ಯಾವುದೇ ತೊಂದರೆಯಾಗಿಲ್ಲ" ಎಂದು ಹೇಳಿದರು.

# ಬೆಂಗಳೂರಿನ ಆರು ಪ್ರಮುಖ ಯೋಜನೆಗಳಿಗೆ ಮರು ಟೆಂಡರ್

● ವಿಕ್ರಮ ವಾಹಿನಿ । ಬೆಂಗಳೂರು

**ಟೆಂಡರ್ ನಿಯಮಗಳ ಪಾಲನೆಗೆ ಸಂಬಂಧಿಸಿದ ಆಕ್ಷೇಪಗಳ ಹಿನ್ನೆಲೆಯಲ್ಲಿ 2,564 ಕೋಟಿ ವೆಚ್ಚದ ಬೆಂಗಳೂರಿನ ಆರು ಪ್ರಮುಖ ಮೇಲ್ಸೇತುವೆ ಹಾಗೂ ಎಲಿವೇಟೆಡ್ ಕಾರಿಡಾರ್ ಯೋಜನೆಗಳಿಗೆ ಮರು ಟೆಂಡರ್ ಕರೆಯಲಾಗಿದೆ. ಸ್ಥಳೀಯರ ವಿರೋಧವೂ ಯೋಜನೆಗಳ ಅನುಷ್ಠಾನಕ್ಕೆ ಸವಾಲಾಗಿದೆ.**

ನಗರದ ಸಂಚಾರ ದಟ್ಟಣೆ ನಿವಾರಣೆಗೆ ಉದ್ದೇಶಿಸಿರುವ ಆರು ಪ್ರಮುಖ ಮೇಲ್ಸೇತುವೆ ಮತ್ತು ಎಲಿವೇಟೆಡ್ ಕಾರಿಡಾರ್ ಯೋಜನೆಗಳಿಗೆ ಬೆಂಗಳೂರು ಸ್ಮಾರ್ಟ್ ಇನ್‌ಫ್ರಾಸ್ಟ್ರಕ್ಚರ್ ಲಿಮಿಟೆಡ್ (ಬಿ–ಸ್ಮೈಲ್) ಮರು ಟೆಂಡರ್ ಆಹ್ವಾನಿಸಿದೆ. ಪ್ರಮಾಣಿತ ಗುತ್ತಿಗೆ ನಿಯಮಗಳ ಪಾಲನೆಗೆ ಸಂಬಂಧಿಸಿದಂತೆ ನಗರಾಭಿವೃದ್ಧಿ ಇಲಾಖೆ ಆಕ್ಷೇಪ ವ್ಯಕ್ತಪಡಿಸಿ ಬಿಡ್‌ಗಳನ್ನು ಪರಿಷ್ಕರಿಸುವಂತೆ ಸೂಚಿಸಿದ ಹಿನ್ನೆಲೆಯಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ಕೋಣನಕುಂಟೆ ಕ್ರಾಸ್, ಎಂಇಐ ಜಂಕ್ಷನ್, ಪೈಪ್‌ಲೈನ್ ರಸ್ತೆ, ಕೋಗಿಲು ಕ್ರಾಸ್ ಸೇರಿದಂತೆ ಆರು ಯೋಜನೆಗಳ ಒಟ್ಟು ಅಂದಾಜು ವೆಚ್ಚ ಸುಮಾರು ರೂ 2,564 ಕೋಟಿ. ಕನಕಪುರ ರಸ್ತೆಯ ಕೋಣನಕುಂಟೆ ಕ್ರಾಸ್‌ನಲ್ಲಿ ರೂ 76.76 ಕೋಟಿ ವೆಚ್ಚದ ಮೇಲ್ಸೇತುವೆ, ತುಮಕೂರು ರಸ್ತೆಯ ಎಂಇಐ ಜಂಕ್ಷನ್‌ನಲ್ಲಿ ರೂ 41.62 ಕೋಟಿ ವೆಚ್ಚದ ವಿಭಜಿತ ಮೇಲ್ಸೇತುವೆ ಹಾಗೂ ಪೈಪ್‌ಲೈನ್ ರಸ್ತೆಯಲ್ಲಿ ರೂ 315.28 ಕೋಟಿ ವೆಚ್ಚದ ಗ್ರೇಡ್ ಸೆಪರೇಟರ್ ನಿರ್ಮಾಣ ಯೋಜನೆಗಳು ಇದರಲ್ಲಿ ಸೇರಿವೆ.

ದೊಡ್ಡಬಳ್ಳಾಪುರ ರಸ್ತೆಯ ಕೋಗಿಲು ಕ್ರಾಸ್‌ನಲ್ಲಿ ರೂ 1,026.66 ಕೋಟಿ ವೆಚ್ಚದ ಎಲಿವೇಟೆಡ್ ಕಾರಿಡಾರ್, ಶೂಳೇ ಸರ್ಕಲ್‌ನಿಂದ ಸೇಂಟ್ ಜಾನ್ಸ್ ಆಸ್ಪತ್ರೆ ರಸ್ತೆಯವರೆಗೆ ರೂ 564 ಕೋಟಿ ಹಾಗೂ ಮಿನರ್ವ ಸರ್ಕಲ್‌ನಿಂದ ಹಡ್ಸನ್ ಸರ್ಕಲ್‌ವರೆಗೆ ರೂ 539.94 ಕೋಟಿ ವೆಚ್ಚದ ಕಾರಿಡಾರ್‌ಗಳಿಗೂ ಹೊಸದಾಗಿ ಟೆಂಡರ್ ಕರೆಯಲಾಗಿದೆ.

ರಾಜಧಾನಿಯ ಸಂಚಾರ ದಟ್ಟಣೆ ಕಡಿಮೆ ಮಾಡಲು ರಾಜ್ಯ ಸಚಿವ ಸಂಪುಟ ಏಪ್ರಿಲ್‌ನಲ್ಲಿ ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ 75.60 ಕಿ.ಮೀ. ಉದ್ದದ 11 ಮೇಲ್ಸೇತುವೆ ಮತ್ತು ಎಲಿವೇಟೆಡ್ ಕಾರಿಡಾರ್ ಯೋಜನೆಗಳಿಗೆ ಅನುಮೋದನೆ ನೀಡಿತ್ತು. ಈ ಯೋಜನೆಗಳ ಒಟ್ಟು ಅಂದಾಜು ವೆಚ್ಚ ರೂ 13,262 ಕೋಟಿ. ಇನ್ನೂ ಮೂರು ಯೋಜನೆಗಳಿಗೆ ಒಂದು ವಾರದೊಳಗೆ ಹೊಸದಾಗಿ ಟೆಂಡರ್ ಆಹ್ವಾನಿಸುವ ನಿರೀಕ್ಷೆಯಿದೆ. ಇನ್ನೊಂದೆಡೆ, ಇಂದಿರಾನಗರದ 100 ಅಡಿ ರಸ್ತೆಯ ಮೇಲ್ಸೇತುವೆ ಹಾಗೂ ರಾಗಿಗುಡ್ಡದಿಂದ ಕನಕಪುರ ಮುಖ್ಯ ರಸ್ತೆಯನ್ನು ಸಂಪರ್ಕಿಸುವ ಕಾರಿಡಾರ್ ಸೇರಿದಂತೆ ಕೆಲವು ಯೋಜನೆಗಳಿಗೆ ಸ್ಥಳೀಯ ನಿವಾಸಿಗಳು ವಿರೋಧ ವ್ಯಕ್ತಪಡಿಸಿದ್ದಾರೆ. ಯೋಜನೆಗಳನ್ನು ಕೈಬಿಡುವಂತೆ ಒತ್ತಾಯಿಸಿ ಮಾನವ ಸರಪಳಿ ರಚಿಸಿ ಪ್ರತಿಭಟನೆಯನ್ನೂ ನಡೆಸಿದ್ದಾರೆ. ಹೀಗಾಗಿ, ಟೆಂಡರ್ ಪ್ರಕ್ರಿಯೆಯಲ್ಲಿನ ತಾಂತ್ರಿಕ ಅಡೆತಡೆಗಳ ಜತೆಗೆ ಸ್ಥಳೀಯರ ವಿರೋಧವೂ ಯೋಜನೆಗಳ ಅನುಷ್ಠಾನಕ್ಕೆ ಸವಾಲಾಗಿದೆ.

## ಜಲಮಂಡಳಿಯಿಂದ 23ರಂದು ನೇರ ಫೋನ್–ಇನ್ ಕಾರ್ಯಕ್ರಮ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಕುಡಿಯುವ ನೀರು, ಒಳಚರಂಡಿ ಹಾಗೂ ನೀರಿನ ಬಿಲ್‌ಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ಉದ್ದೇಶದಿಂದ ಬೆಂಗಳೂರು ಜಲಮಂಡಳಿಯು ಅ.23ರಂದು ನೇರ ಫೋನ್–ಇನ್ ಕಾರ್ಯಕ್ರಮ ಆಯೋಜಿಸಿದೆ.

ಜಲಮಂಡಳಿ ಅಧ್ಯಕ್ಷೆ ಡಾ. ಮಂಜುಳ ಎನ್. ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ಬೆಳಿಗ್ಗೆ 9.30ರಿಂದ 10.30ರವರೆಗೆ ಕಾರ್ಯಕ್ರಮ ನಡೆಯಲಿದೆ. ಸಾರ್ವಜನಿಕರು ತಮ್ಮ ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ, ಒಳಚರಂಡಿ ಕೊಳವೆ ಹಾಗೂ ಇಳಿಗುಂಡಿಗಳಿಂದ ತ್ಯಾಜ್ಯ ನೀರು ಹೊರಬರುತ್ತಿರುವುದು, ಜಲಮಾಪನ ಮತ್ತು ನೀರಿನ ಬಿಲ್‌ಗಳಿಗೆ ಸಂಬಂಧಿಸಿದ ದೂರುಗಳನ್ನು ನೇರವಾಗಿ ಸಲ್ಲಿಸಬಹುದು.

ಸಾರ್ವಜನಿಕರು 080–22945119 ಮತ್ತು 080–22229639 ದೂರವಾಣಿ ಸಂಖ್ಯೆಗಳ ಮೂಲಕ ಸಂಪರ್ಕಿಸಿ ತಮ್ಮ ಸಮಸ್ಯೆಗಳನ್ನು ತಿಳಿಸಬಹುದು. ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ದೂರು ದಾಖಲಿಸುವಾಗ ತಮ್ಮ ಆರ್. ಆರ್. ಸಂಖ್ಯೆಯನ್ನು ಕಡ್ಡಾಯವಾಗಿ ತಿಳಿಸುವಂತೆ ಜಲಮಂಡಳಿ ಪ್ರಕಟಣೆ ತಿಳಿಸಿದೆ.

## ಭಾರತ–ಅಮೆರಿಕ ಆರ್ಥಿಕ, ಇಂಧನ ಸಹಕಾರ ಬಲಪಡಿಸುವುದು ಆದ್ಯತೆ

● ವಿಕ್ರಮ ವಾಹಿನಿ । ನವದೆಹಲಿ

ಭಾರತ ಮತ್ತು ಅಮೆರಿಕ ನಡುವಿನ ಆರ್ಥಿಕ ಪಾಲುದಾರಿಕೆ ಹಾಗೂ ಇಂಧನ ಭದ್ರತಾ ಸಹಕಾರವನ್ನು ಮತ್ತಷ್ಟು ಬಲಪಡಿಸುವುದು ತಮ್ಮ ಆದ್ಯತೆಯಾಗಿದೆ ಎಂದು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ತಿಳಿಸಿದ್ದಾರೆ. ಮೂರು ದಿನಗಳ ಭಾರತ ಪ್ರವಾಸ ಮುಗಿಸಿ ಸ್ವದೇಶಕ್ಕೆ ತೆರಳಿರುವ ರೂಬಿಯೊ, ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಸಂದೇಶ ಹಂಚಿಕೊಂಡಿದ್ದಾರೆ. ಅಕ್ಟೋಬರ್ 20ರಂದು ಭಾರತಕ್ಕೆ ಆಗಮಿಸಿದ್ದ ಅವರು, ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರೊಂದಿಗೆ ಇಂಧನ, ವ್ಯಾಪಾರ, ಹೂಡಿಕೆ, ರಕ್ಷಣೆ ಹಾಗೂ ನಿರ್ಣಾಯಕ ತಂತ್ರಜ್ಞಾನ ಸೇರಿದಂತೆ ಹಲವು ವಿಷಯಗಳ ಕುರಿತು ಚರ್ಚಿಸಿದ್ದರು.

ಮುಂಬೈ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟವರಿಗೆ ಗೌರವ ಸಲ್ಲಿಸಿದ ರೂಬಿಯೊ, ಭಯೋತ್ಪಾದನೆ ವಿರುದ್ಧದ ಹೋರಾಟದಲ್ಲಿ ಭಾರತದೊಂದಿಗೆ ಸಹಕಾರ ಮುಂದುವರಿಸುವ ಬದ್ಧತೆಯನ್ನು ವ್ಯಕ್ತಪಡಿಸಿದರು. ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹಾಗೂ ಪ್ರಮುಖ ಉದ್ಯಮ ಪ್ರತಿನಿಧಿಗಳೊಂದಿಗೂ ಮಾತುಕತೆ ನಡೆಸಿದ ಅವರು, ವ್ಯಾಪಾರ ಮತ್ತು ಹೂಡಿಕೆ ವಿಸ್ತರಣೆಯ ಅವಕಾಶಗಳ ಕುರಿತು ಚರ್ಚಿಸಿದರು. ಗುಜರಾತ್‌ನ ಜಾಮ್‌ನಗರದ ತೈಲ ಸಂಸ್ಕರಣಾಗಾರಕ್ಕೂ ಭೇಟಿ ನೀಡಿದ ಅವರ ಪ್ರವಾಸವು ಉಭಯ ದೇಶಗಳ ನಡುವಿನ ಆರ್ಥಿಕ ಮತ್ತು ಇಂಧನ ಸಹಕಾರದ ಮಹತ್ವವನ್ನು ಎತ್ತಿಹಿಡಿದಿದೆ.

# ಲಿಡಕರ್‌ನ ವಿಶೇಷ ವಸ್ತು ಪ್ರದರ್ಶನ ಮಳಿಗೆ ಉದ್ಘಾಟನೆ

● ವಿಕ್ರಮ ವಾಹಿನಿ । ಮೈಸೂರು



ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ಡಾ. ಬಾಬು ಜಗಜೀವನ್ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ (ಲಿಡಕರ್) ವತಿಯಿಂದ ಮೈಸೂರು ವಸ್ತುಪ್ರದರ್ಶನ ಆವರಣದಲ್ಲಿ ಸ್ಥಾಪಿಸಿರುವ ವಿಶೇಷ ಮಳಿಗೆಯನ್ನು ಸಮಾಜ ಕಲ್ಯಾಣ ಸಚಿವ ಕೆ.ಎಚ್. ಮುನಿಯಪ್ಪ ಉದ್ಘಾಟಿಸಿದರು.

ಲಿಡಕರ್ ಸಂಸ್ಥೆಯು ಅಕ್ಟೋಬರ್ 28ರಂದು 50 ವರ್ಷಗಳನ್ನು ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಮಳಿಗೆಯಲ್ಲಿ ಚರ್ಮ ಕುಶಲಕರ್ಮಿಗಳ ಪಾರಂಪರಿಕ ಇತಿಹಾಸ ಹಾಗೂ ಚರ್ಮದಿಂದ ತಯಾರಿಸಿದ ವಿವಿಧ ಉತ್ಪನ್ನಗಳನ್ನು ಪರಿಚಯಿಸಲಾಗಿದೆ. ಮಾರುಕಟ್ಟೆಯಲ್ಲಿ ಚರ್ಮದ ವಸ್ತುಗಳಿಗೆ ಉತ್ತಮ ಬೇಡಿಕೆಯಿದ್ದು, ಮಳಿಗೆಯಲ್ಲಿನ ಉತ್ಪನ್ನಗಳು ಗ್ರಾಹಕರ ಗಮನ ಸೆಳೆದವು.

ಸಂಸ್ಥೆಯ ಸುವರ್ಣ ಮಹೋತ್ಸವದ ಅಂಗವಾಗಿ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲು ಸಿದ್ಧತೆ ನಡೆಸಲಾಗುತ್ತಿದೆ.

ಮಳಿಗೆಯಲ್ಲಿ ಚರ್ಮದ ಪಾದರಕ್ಷೆಗಳು, ಚೀಲಗಳು ಹಾಗೂ ಇತರ ಉಪಯುಕ್ತ ವಸ್ತುಗಳನ್ನು ಪ್ರದರ್ಶಿಸುವ ಮೂಲಕ ಗ್ರಾಹಕರಿಗೆ ಉತ್ಪನ್ನಗಳ ವೈವಿಧ್ಯ ಪರಿಚಯಿಸಲಾಗುತ್ತಿದೆ. ಇಂತಹ ಪ್ರದರ್ಶನಗಳು ಸ್ಥಳೀಯ ಕುಶಲಕರ್ಮಿಗಳ ಉತ್ಪನ್ನಗಳಿಗೆ ಪ್ರಚಾರ ದೊರಕಿಸಲು ಮತ್ತು ಗ್ರಾಹಕರು ನೇರವಾಗಿ ಉತ್ಪನ್ನಗಳನ್ನು ವೀಕ್ಷಿಸಿ ಖರೀದಿಸಲು ಅವಕಾಶ ಕಲ್ಪಿಸುತ್ತವೆ.

ಸಂಸ್ಥೆಯ 50 ವರ್ಷಗಳ ಪಯಣವನ್ನು ಸ್ಮರಿಸುವ ಸುವರ್ಣ ಮಹೋತ್ಸವದ ಅಂಗವಾಗಿ ಚರ್ಮ ಕೈಗಾರಿಕೆಯ ಬೆಳವಣಿಗೆ, ಕುಶಲಕರ್ಮಿಗಳ ಕೊಡುಗೆ ಹಾಗೂ ಸಂಸ್ಥೆಯ ಸಾಧನೆಗಳನ್ನು ಜನರಿಗೆ ಪರಿಚಯಿಸಲು ವಿಶೇಷ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ.

ಈ ಮೂಲಕ ಸಾಂಪ್ರದಾಯಿಕ ಚರ್ಮ ಕೈಗಾರಿಕೆಗೆ ಉತ್ತೇಜನ ನೀಡುವುದರ ಜತೆಗೆ ಮುಂದಿನ ಪೀಳಿಗೆಯಲ್ಲಿಯೂ ಈ ವೃತ್ತಿಯ ಬಗ್ಗೆ ಆಸಕ್ತಿ ಬೆಳೆಸುವ ಪ್ರಯತ್ನ ಮಾಡಲಾಗುತ್ತಿದೆ.

ಈ ಸಂದರ್ಭದಲ್ಲಿ ಸಚಿವ ರಘುಮೂರ್ತಿ, ಸರ್ಕಾರದ ಕಾರ್ಯದರ್ಶಿ ಮೋಹನ್ ರಾಜ್, ಆಯುಕ್ತ ನಾಗರಾಜು, ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಮಪ್ಪ, ಆದಿಜಾಂಭವ ಅಭಿವೃದ್ಧಿ ನಿಗಮದ ಅಧ್ಯಕ್ಷ ಮಂಜುನಾಥ್, ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಅಶೋಕ ಸಾಲಪ್ಪ, ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಹಾಗೂ ಲಿಡಕರ್ ವ್ಯವಸ್ಥಾಪಕ ನಿರ್ದೇಶಕ ಡಾ. ಎಚ್. ನಟರಾಜ್ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಎಸ್.ಐ.ಆರ್ ಪ್ರಕ್ರಿಯೆ ಶುಕ್ರವಾರ ಪೂರ್ಣ: ಬೆಂಗಳೂರಿನಲ್ಲಿ 24 ಲಕ್ಷ ಮಂದಿಗೆ ನೋಟೀಸ್

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಶುಕ್ರವಾರ ಮುಕ್ತಾಯಗೊಳ್ಳಲಿದ್ದು, ನಗರದಲ್ಲಿ ಸುಮಾರು 58 ಲಕ್ಷ ಮಂದಿ ಮತದಾರರ ಪಟ್ಟಿಗೆ ಸೇರ್ಪಡೆಯಾಗುವ ನಿರೀಕ್ಷೆಯಿದೆ.

ಈಗಾಗಲೇ ಸುಮಾರು 57 ಲಕ್ಷ ಮಂದಿಯನ್ನು ಮತದಾರರ ಪಟ್ಟಿಗೆ ಸೇರ್ಪಡೆ ಮಾಡಲಾಗಿದ್ದು, ಮಾಹಿತಿ ಅಪೂರ್ಣವಾಗಿರುವುದು ಹಾಗೂ ಸರಿಯಾದ ಮಾಹಿತಿ ನೀಡದ ಹಿನ್ನೆಲೆಯಲ್ಲಿ 24 ಲಕ್ಷ ಮಂದಿಗೆ ನೋಟಿಸ್ ನೀಡಲಾಗಿದೆ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ.

ಎಸ್‌ಐಆರ್ ಪ್ರಕ್ರಿಯೆಯ ಕುರಿತು ಮಾಹಿತಿ ನೀಡಿದ ಅವರು, ಮತದಾರರ ಪಟ್ಟಿ ಪರಿಷ್ಕರಣೆಗಾಗಿ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ತೆರಳಿ ಪರಿಶೀಲನೆ ನಡೆಸಿದ್ದಾರೆ. ಮತದಾರರ ಮಾಹಿತಿಯನ್ನು ದೃಢೀಕರಿಸುವುದು ಹಾಗೂ ಪಟ್ಟಿಯಲ್ಲಿನ ಲೋಪದೋಷಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದರು.

ಮತದಾರರ ಪಟ್ಟಿ ಪರಿಷ್ಕರಣೆಗಾಗಿ ಒಟ್ಟು 5.43 ಲಕ್ಷ ಅರ್ಜಿಗಳು ಸಲ್ಲಿಕೆಯಾಗಿವೆ. ಈ ಪೈಕಿ ಹೊಸ ಮತದಾರರ ಸೇರ್ಪಡೆಗಾಗಿ ಫಾರ್ಮ್–6 ಮೂಲಕ 2.21 ಲಕ್ಷ ಅರ್ಜಿಗಳು ಬಂದಿವೆ. ಮತದಾರರ ಪಟ್ಟಿಯಿಂದ ಹೆಸರು ತೆಗೆದುಹಾಕಲು ಬಳಸುವ ಫಾರ್ಮ್–7 ಮೂಲಕ ಕೇವಲ 5 ಸಾವಿರ ಅರ್ಜಿಗಳು ಸಲ್ಲಿಕೆಯಾಗಿವೆ.

ಇನ್ನು, ಮತದಾರರ ವಿವರಗಳಲ್ಲಿ ತಿದ್ದುಪಡಿ ಮಾಡುವುದು ಹಾಗೂ ವಿಳಾಸ ಬದಲಾವಣೆಗೆ ಸಂಬಂಧಿಸಿದಂತೆ ಫಾರ್ಮ್–8 ಮೂಲಕ 3.12 ಲಕ್ಷ ಅರ್ಜಿಗಳು ಸಲ್ಲಿಕೆಯಾಗಿವೆ. ಈ ಅರ್ಜಿಗಳ ಪರಿಶೀಲನೆ ಬಳಿಕ ಸುಮಾರು 2 ಲಕ್ಷ ಹೊಸ ಮತದಾರರು ಪಟ್ಟಿಗೆ ಸೇರ್ಪಡೆಯಾಗುವ ನಿರೀಕ್ಷೆಯಿದೆ.

ಈಗಾಗಲೇ ಎಎಸ್‌ಡಿಡಿಒ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಮತದಾರರಿಗೂ ತಮ್ಮ ದಾಖಲೆಗಳನ್ನು ಸಲ್ಲಿಸಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಲು ಅವಕಾಶ ಕಲ್ಪಿಸಲಾಗಿದೆ. ಇದಕ್ಕಾಗಿ ವಿಶೇಷ ಎಸ್‌ಎಸ್‌ಎಸ್ ಅಭಿಯಾನದ ಮೂಲಕ ಸೇರ್ಪಡೆ ಪ್ರಕ್ರಿಯೆ ನಡೆಸಲು ವ್ಯವಸ್ಥೆ ಮಾಡಲಾಗುವುದು ಎಂದು ಮಹೇಶ್ವರ್ ರಾವ್ ತಿಳಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಿಂದ ಯಾವುದೇ ಮತದಾರರಿಗೆ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಪ್ರತಿಯೊಂದು ಹಂತದಲ್ಲಿಯೂ ಮಾಹಿತಿ ಹಾಗೂ ದಾಖಲೆಗಳ ಪರಿಶೀಲನೆ ನಡೆಸುವ ಜವಾಬ್ದಾರಿ ಚುನಾವಣಾ ಆಯೋಗದ್ದಾಗಿದೆ.

ಅರ್ಜಿಗಳ ಪರಿಶೀಲನೆ ಮತ್ತು ದೃಢೀಕರಣದ ಬಳಿಕ ಅರ್ಹ ಮತದಾರರನ್ನು ಪಟ್ಟಿಗೆ ಸೇರ್ಪಡೆಗೊಳಿಸುವ ಪ್ರಕ್ರಿಯೆ ನಡೆಯಲಿದೆ ಎಂದು ಅವರು ಹೇಳಿದರು.

ಮತದಾರರು ತಮಗೆ ನೋಟಿಸ್ ಬಂದಿದ್ದರೆ ಅದರಲ್ಲಿ ಸೂಚಿಸಿರುವ ಅವಧಿಯೊಳಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಮಾಹಿತಿ ದೃಢೀಕರಿಸಿಕೊಳ್ಳಬೇಕು. ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿ ಅಥವಾ ವಿಳಾಸ ಬದಲಾವಣೆಗೆ ಸಂಬಂಧಿಸಿದ ಅರ್ಜಿಗಳ ಸ್ಥಿತಿಯನ್ನು ಪರಿಶೀಲಿಸಿ, ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# 25ರಂದು ಮಧ್ವ ಜಯಂತಿ: ಬೃಹತ್ ಶೋಭಾಯಾತ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಜಗದ್ಗುರು ಶ್ರೀ ಮಧ್ವಾಚಾರ್ಯರ ದ್ವೈತ ವೇದಾಂತ ತತ್ವದ ಪ್ರಚಾರ ಹಾಗೂ ಧಾರ್ಮಿಕ, ಆಧ್ಯಾತ್ಮಿಕ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರನ್ನು ಗೌರವಿಸುವ ಉದ್ದೇಶದಿಂದ ವಿಶ್ವ ಮಧ್ವಮತ ವೆಲ್ಫೇರ್ ಫೌಂಡೇಶನ್ ವತಿಯಿಂದ ಅ. 25ರಂದು ಬೆಂಗಳೂರಿನಲ್ಲಿ ಮಧ್ವ ಜಯಂತಿ ಆಚರಿಸಲಾಗುತ್ತಿದೆ.

ಭಾನುವಾರ ಸಂಜೆ 4 ಗಂಟೆಗೆ ಬಸವನಗುಡಿಯ ದೊಡ್ಡ ಗಣಪತಿ ದೇವಸ್ಥಾನದ ಎದುರಿನ ನವ ಮಂತ್ರಾಲಯ ಮಠದಿಂದ ಉತ್ತರಾದಿ ಮಠದವರೆಗೆ ವಿವಿಧ ಭಜನಾ ಮಂಡಳಿಗಳ ಸಾಮೂಹಿಕ ಭಜನೆ ಹಾಗೂ ವಾದ್ಯಘೋಷಗಳೊಂದಿಗೆ ಬೃಹತ್ ಶೋಭಾಯಾತ್ರೆ ನಡೆಯಲಿದೆ. ಸಂಜೆ 6 ಗಂಟೆಗೆ ನ್ಯಾಷನಲ್ ಕಾಲೇಜು ಎದುರಿನ ಉತ್ತರಾದಿ ಮಠದಲ್ಲಿ ಸಾಧಕರಿಗೆ 'ಮಧ್ವ ವಿಜಯ' ಮತ್ತು 'ಹನುಮ ಮಧ್ವೇಶ' ಪ್ರಶಸ್ತಿ ಪ್ರದಾನ ಸಮಾರಂಭ ಜರುಗಲಿದೆ.

ಭುವನಗಿರಿ ಆಶ್ರಮದ ಶ್ರೀ ಸುವಿದ್ಯೇಂದ್ರ ತೀರ್ಥ ಶ್ರೀಪಾದರು ದಿವ್ಯ ಸಾನ್ನಿಧ್ಯ ವಹಿಸಲಿದ್ದು, ಜಯತೀರ್ಥ ವಿದ್ಯಾಪೀಠದ ಪ್ರಾಂಶುಪಾಲ ಡಾ. ಸತ್ಯಧ್ಯಾನಾಚಾರ್ಯ ಕಟ್ಟಿ, ಸಿ.ಎ. ಮುರಳಿ, ಶ್ರೀರಾಮ ಸೇನೆಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಹಾಗೂ ಸಂಸ್ಕೃತಿ ಚಿಂತಕ ಡಾ. ಗುರುರಾಜ ಪೋಶೆಟ್ಟಿಹಳ್ಳಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಫೌಂಡೇಶನ್‌ನ ಕರ್ನಾಟಕ ರಾಜ್ಯಾಧ್ಯಕ್ಷ ಕೃಷ್ಣ ಎ.ಪಿ. ಅಧ್ಯಕ್ಷತೆ ವಹಿಸಲಿದ್ದಾರೆ.

ಫೌಂಡೇಶನ್ ವತಿಯಿಂದ ವರ್ಷಪೂರ್ತಿ ವಿವಿಧ ಧಾರ್ಮಿಕ ಜಯಂತಿಗಳ ಸಂದರ್ಭದಲ್ಲಿ ಸಾಧಕರನ್ನು ಗುರುತಿಸಿ ಗೌರವಿಸುವ ಪರಂಪರೆಯನ್ನು ಬೆಳೆಸಿಕೊಂಡು ಬರಲಾಗಿದೆ.

ಚೈತ್ರ ಮಾಸದ ಹನುಮ ಜಯಂತಿಯಂದು ಹನುಮ–ಮಧ್ವ ಪ್ರಶಸ್ತಿ, ಆಶ್ವಯುಜ ಮಾಸದ ಮಧ್ವ ಜಯಂತಿಯಂದು ಮಧ್ವ ವಿಜಯ ಪ್ರಶಸ್ತಿ ಹಾಗೂ ಮಾಘ ಮಾಸದ ಮಧ್ವ ನವಮಿಯಂದು ಅರ್ಚಕರಿಗೆ ಮಧ್ವೇಶಾನುಗ್ರಹ ಗೌರವ ಮತ್ತು ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

ಭೀಮಸೇನ ದೇವರ ಜಯಂತಿಯ ಸಂದರ್ಭದಲ್ಲಿ ಪಾಕಶಾಸ್ತ್ರ ಸೇವಕರನ್ನು ಗುರುತಿಸಿ 'ಭೀಮ ಮಧ್ವೇಶ' ಗೌರವ ಹಾಗೂ ಪ್ರಶಸ್ತಿ ನೀಡಿ ಸನ್ಮಾನಿಸಲಾಗುತ್ತದೆ. ಧಾರ್ಮಿಕ ಕ್ಷೇತ್ರದಲ್ಲಿ ತೆರೆಮರೆಯಲ್ಲಿ ಸೇವೆ ಸಲ್ಲಿಸುವವರ ಕೊಡುಗೆಯನ್ನು ಗುರುತಿಸುವ ಮೂಲಕ ಅವರ ಸೇವೆಗೆ ಗೌರವ ನೀಡುವುದು ಈ ಕಾರ್ಯಕ್ರಮಗಳ ಪ್ರಮುಖ ಆಶಯವಾಗಿದೆ.

ಮಧ್ವಾಚಾರ್ಯರ ತತ್ವಾದರ್ಶಗಳನ್ನು ಜನರಿಗೆ ಪರಿಚಯಿಸುವುದರ ಜತೆಗೆ ವಿವಿಧ ಸಂಘಸಂಸ್ಥೆಗಳ ನಡುವೆ ಸಹಕಾರ ಮತ್ತು ಪರಸ್ಪರ ವಿಶ್ವಾಸವನ್ನು ವೃದ್ಧಿಸುವ ಕಾರ್ಯಕ್ಕೂ ಫೌಂಡೇಶನ್ ಆದ್ಯತೆ ನೀಡುತ್ತಿದೆ. ಸಮಾಜದ ದುರ್ಬಲ ವರ್ಗದವರಿಗೆ ನೆರವು ನೀಡುವುದು, ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಒದಗಿಸುವುದು ಹಾಗೂ ಧಾರ್ಮಿಕ ಮತ್ತು ಸಾಮಾಜಿಕ ಸೇವಾ ಚಟುವಟಿಕೆಗಳಲ್ಲಿ ಯುವಜನರ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸುವುದು ಸಂಸ್ಥೆಯ ಉದ್ದೇಶವಾಗಿದೆ ಎಂದು ಸಂಸ್ಥಾಪಕ ಅಧ್ಯಕ್ಷ ವೆಂಕೋಬ ರಾವ್ ಬುಕ್ಕಸಾಗರ, ಅಧ್ಯಕ್ಷ ಶ್ರೀನಿವಾಸ ಜೋಶಿ ಹಾಗೂ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಜೋಯಿಸ್ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗೆ: 96069 46622, 96069 42223, 96069 42224.

## ಸಾಧಕರಿಗೆ ಪ್ರಶಸ್ತಿ ಪ್ರದಾನ



ಧಾರ್ಮಿಕ ಕ್ಷೇತ್ರದ ಸಾಧಕರಾದ ವಿದ್ವಾನ್ ಪವಮಾನಾಚಾರ್ಯ ಕಲ್ಲಾಪುರ, ಡಾ. ಪ್ರಸನ್ನಾಚಾರ್ಯ ಕಟ್ಟಿ, ಪ್ರಮೋದಾಚಾರ್ಯ ಹನಮಸಾಗರ್, ಅನುಮಾನತೀರ್ಥ ಆಚಾರ್ಯ ಹಾಗೂ ಸತ್ಯಪ್ರಮೋದಾಚಾರ್ಯ ಕಟ್ಟಿ ಅವರಿಗೆ 'ಮಧ್ವ ವಿಜಯ' ಪ್ರಶಸ್ತಿ ನೀಡಲಾಗುವುದು. ಹೃದ್ರೋಗ ತಜ್ಞ ಡಾ. ವೇಣುಗೋಪಾಲ ರಾಮರಾವ್, ಉದ್ಯಮಿ ಬಿ.ಎಸ್. ವೇದವ್ಯಾಸ, ಡಾ. ಶಚೀಂದ್ರ ಎಲ್. ನರಗುಂದ ಹಾಗೂ ಹಿರಿಯ ಪತ್ರಕರ್ತ, 'ಕೋಲಾರ ವಾಣಿ' ಸಂಪಾದಕ ಬಿ.ಎನ್. ಮುರಳಿಪ್ರಸಾದ್ ಅವರಿಗೆ 'ಹನುಮ ಮಧ್ವೇಶ' ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಮಾಧ್ವ ಸಮುದಾಯದ ಕ್ಷೇಮಾಭಿವೃದ್ಧಿ, ದ್ವೈತ ಸಿದ್ಧಾಂತದ ಪ್ರಚಾರ, ಸಾಮಾಜಿಕ ಸಾಮರಸ್ಯ ಹಾಗೂ ಸೇವಾ ಮನೋಭಾವದ ಉತ್ತೇಜನ ಫೌಂಡೇಶನ್‌ನ ಪ್ರಮುಖ ಉದ್ದೇಶಗಳಾಗಿವೆ. ವ್ಯಾಸ ಮತ್ತು ದಾಸ ಸಾಹಿತ್ಯ ಕ್ಷೇತ್ರದ ಸಾಧಕರನ್ನು ಗೌರವಿಸುವುದರ ಜತೆಗೆ ವಿದ್ಯಾಪೀಠಗಳಲ್ಲಿ ಅಧ್ಯಯನ ಮಾಡುತ್ತಿರುವ ಆಯ್ದ ವಿದ್ಯಾರ್ಥಿಗಳಿಗೆ ವೇದವ್ಯಾಸ ಗೌರವ ಪುರಸ್ಕಾರ ನೀಡಲಾಗುತ್ತದೆ. ಮಠಗಳಲ್ಲಿ ವಿವಿಧ ಸೇವೆ ಸಲ್ಲಿಸುವವರನ್ನೂ ಗುರುತಿಸಿ ಗೌರವಿಸಲಾಗುತ್ತದೆ ಎಂದು ಸಂಸ್ಥೆಯ ಪದಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ವಿಕ್ರಮ ವಾಹಿನಿ

## ಜಂಬೂಸವಾರಿ ವೀಕ್ಷಿಸಿ ವಾಪಸ್ ಬರುವಾಗ ಕೆಂಗೇರಿ ಬಳಿ ದ್ವಿಚಕ್ರ ವಾಹನ ಅಪಘಾತ: ಇಬ್ಬರು ಸಾವು

● ವಿಕ್ರಮ ವಾಹಿನಿ । ಬೆಂಗಳೂರು

ಮೈಸೂರು ದಸರಾ ಜಂಬೂ ಸವಾರಿ ನೋಡಿಕೊಂಡು ವಾಪಸ್ ಬೈಕ್‌ನಲ್ಲಿ ಹಿಂದಿರುಗುತ್ತಿದ್ದಾಗ ನಿಯಂತ್ರಣ ತಪ್ಪಿ ರಸ್ತೆ ಬದಿಯ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಯುವಕರು ಮೃತಪಟ್ಟಿರುವ ಘಟನೆ ಕೆಂಗೇರಿ ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.ಗೊರಗುಂಟೆಪಾಳ್ಯದ ನಿವಾಸಿ ರಜತ್ (21) ಹಾಗೂ ಇವರ ಸಂಬಂಧಿ ಶಿವಮೊಗ್ಗ ಮೂಲದ ನಾಗೇಂದ್ರ (20) ಮೃತಪಟ್ಟ ಯುವಕರು.

ರಜತ್ ಅವರು ದಿನಸಿ ಅಂಗಡಿ ಇಟ್ಟುಕೊಂಡಿದ್ದು ಇವರ ಸಂಬಂಧಿ ಶಿವಮೊಗ್ಗ ಮೂಲದ ನಾಗೇಂದ್ರ ಅವರು ಡಿಪ್ಲೊಮಾ ವ್ಯಾಸಂಗ ಮಾಡಿದ್ದು, ಇಂಟರ್ನ್‌ಶಿಪ್ ಮಾಡುವ ಸಲುವಾಗಿ ನಗರಕ್ಕೆ ಬಂದು ಇವರ ಮನೆಯಲ್ಲಿ ಉಳಿದುಕೊಂಡಿದ್ದರು. ಇವರಿಬ್ಬರೂ ಮೈಸೂರು ದಸರಾ ಜಂಬೂ ಸವಾರಿ ನೋಡಲು ಬೈಕ್‌ನಲ್ಲಿ ಮೈಸೂರಿಗೆ ಹೋಗಿದ್ದರು. ರಾತ್ರಿ ವಾಪಸ್ ಮನೆಗೆ ಹಿಂದಿರುಗುತ್ತಿದ್ದಾಗ ಇಂದು ಬೆಳಗಿನ ಜಾವ 2.30ರ ಸುಮಾರಿನಲ್ಲಿ ಮೈಸೂರು ರಸ್ತೆಯ ಮೈಲಸಂದ್ರ ಜಂಕ್ಷನ್ ಬಳಿ ಬೈಕ್ ನಿಯಂತ್ರಣ ತಪ್ಪಿ ವಿದ್ಯುತ್ ಕಂಬಕ್ಕೆ ಅಪ್ಪಳಿಸಿದೆ.

ಪರಿಣಾಮ ಇಬ್ಬರೂ ರಸ್ತೆಗುರುಳಿದ್ದು ಸವಾರ ರಜತ್ ಅವರಿಗೆ ಗಂಭೀರ ಪೆಟ್ಟಾಗಿ ಸ್ಥಳದಲ್ಲೆ ಮೃತಪಟ್ಟಿದ್ದಾರೆ. ಹಿಂಬದಿ ಸವಾರ ನಾಗೇಂದ್ರ ಅವರನ್ನು ಆಸ್ಪತ್ರೆಗೆ ಕರೆದೊಯ್ಯುತ್ತಿದ್ದಾಗ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ.

ಸುದ್ದಿ ತಿಳಿದು ಕೆಂಗೇರಿ ಸಂಚಾರಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಇಬ್ಬರ ಮೃತದೇಹಗಳನ್ನು ಆರ್‌ಆರ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆಗೊಳಪಡಿಸಿದ್ದಾರೆ.

ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಏಳೇ ದಿನಕ್ಕೆ ರೂ 576 ಕೋಟಿ ಗಳಿಸಿದ 'ಜೈಲರ್ 2'

● ವಿಕ್ರಮ ವಾಹಿನಿ । ಚೆನ್ನೈ

ಸೂಪರ್‌ಸ್ಟಾರ್ ರಜನಿಕಾಂತ್ ಅಭಿನಯದ 'ಜೈಲರ್ 2' ಚಿತ್ರ ವಿಶ್ವಾದ್ಯಂತ ಏಳು ದಿನಗಳಲ್ಲಿ ರೂ 576.45 ಕೋಟಿ ಗಳಿಸುವ ಮೂಲಕ ಬಾಕ್ಸ್‌ಆಫೀಸ್‌ನಲ್ಲಿ ಹೊಸ ದಾಖಲೆ ಬರೆದಿದೆ. ಭಾರತದಲ್ಲಿ ಕೇವಲ ಏಳು ದಿನಗಳಲ್ಲಿ ರೂ 300 ಕೋಟಿ ನಿವ್ವಳ ಗಳಿಕೆ ಮಾಡಿದ ಮೊದಲ ತಮಿಳು ಚಿತ್ರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ನೆಲ್ಸನ್ ದಿಲೀಪ್‌ಕುಮಾರ್ ನಿರ್ದೇಶನದ ಈ ಚಿತ್ರ ಭಾರತದಲ್ಲಿ ರೂ 371.45 ಕೋಟಿ ಒಟ್ಟು ಗಳಿಕೆ ಮಾಡಿದ್ದು, ನಿವ್ವಳ ಗಳಿಕೆ ರೂ 317.20 ಕೋಟಿಯಾಗಿದೆ. ವಿದೇಶಿ ಮಾರುಕಟ್ಟೆಯಲ್ಲಿ ರೂ 205 ಕೋಟಿ ಗಳಿಸಿದೆ. ಈ ಮೂಲಕ '2.0', 'ಲಿಯೋ' ಹಾಗೂ ಮೊದಲ 'ಜೈಲರ್' ಚಿತ್ರಗಳು ಭಾರತದಲ್ಲಿ ರೂ 300 ಕೋಟಿ ನಿವ್ವಳ ಗಳಿಕೆ ತಲುಪಲು ತೆಗೆದುಕೊಂಡ ಸಮಯವನ್ನು ಮೀರಿಸಿದೆ.

ಚಿತ್ರದಲ್ಲಿ ರಜನಿಕಾಂತ್ ಜತೆಗೆ ಶಿವರಾಜ್‌ಕುಮಾರ್, ಮೋಹನ್‌ಲಾಲ್, ವಿದ್ಯಾ ಬಾಲನ್, ಮಿಥುನ್ ಚಕ್ರವರ್ತಿ, ಜಾಕಿ ಶ್ರಾಫ್ ಸೇರಿದಂತೆ ಹಲವು ಕಲಾವಿದರು ನಟಿಸಿದ್ದಾರೆ. ಅನಿರುದ್ಧ್ ರವಿಚಂದರ್ ಸಂಗೀತ ಸಂಯೋಜಿಸಿದ್ದು, ಚಿತ್ರವು ಬಹುಭಾಷೆಗಳಲ್ಲಿ ಬಿಡುಗಡೆಯಾಗಿ ಉತ್ತಮ ಪ್ರದರ್ಶನ ಮುಂದುವರಿಸಿದೆ.

# ಬರ ಪರಿಹಾರಕ್ಕೆ ರೂ 20,585 ಕೋಟಿ ಬಿಡುಗಡೆಗೆ ಪರಮೇಶ್ವರ ಆಗ್ರಹ

**ರಾಜ್ಯದಲ್ಲಿ ಶೇ.35ರಷ್ಟು ಮಳೆ ಕೊರತೆಯಿಂದ 226 ತಾಲೂಕುಗಳು ಬರಪೀಡಿತವಾಗಿದ್ದು, 57.93 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ಒಟ್ಟು ರೂ 62,481.88 ಕೋಟಿ ಆರ್ಥಿಕ ನಷ್ಟ ಉಂಟಾಗಿರುವ ಹಿನ್ನೆಲೆಯಲ್ಲಿ, ರೈತರ ಜೀವನೋಪಾಯ ರಕ್ಷಣೆ, ಕುಡಿಯುವ ನೀರು, ಜಾನುವಾರುಗಳ ಸಂರಕ್ಷಣೆ ಹಾಗೂ ಬೆಳೆ ಹಾನಿ ಪರಿಹಾರಕ್ಕಾಗಿ ಎನ್‌ಡಿಆರ್‌ಎಫ್ ಅಡಿಯಲ್ಲಿ ರೂ 20,585.73 ಕೋಟಿ ನೆರವನ್ನು ತುರ್ತಾಗಿ ಬಿಡುಗಡೆ ಮಾಡುವಂತೆ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಪರಿಹಾರ ನಿರ್ಧಾರಕ್ಕೆ ರಾಜ್ಯದ ನವೀಕೃತ ಫ್ರೂಟ್ಸ್ ದತ್ತಾಂಶ ಪರಿಗಣಿಸುವಂತೆಯೂ ಮನವಿ ಮಾಡಿದ್ದಾರೆ.**

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ತೀವ್ರ ಬರದಿಂದ ಉಂಟಾಗಿರುವ ಕೃಷಿ ನಷ್ಟ ಹಾಗೂ ರೈತರ ಸಂಕಷ್ಟವನ್ನು ಎದುರಿಸಲು ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ (ಎನ್‌ಡಿಆರ್‌ಎಫ್) ಅಡಿಯಲ್ಲಿ ರೂ 20,585.73 ಕೋಟಿ ಪರಿಹಾರವನ್ನು ತುರ್ತಾಗಿ ಬಿಡುಗಡೆ ಮಾಡುವಂತೆ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದು ಒತ್ತಾಯಿಸಿದ್ದಾರೆ.

2026ರ ನೈಋತ್ಯ ಮುಂಗಾರು ಅವಧಿಯಲ್ಲಿ ರಾಜ್ಯದಲ್ಲಿ ವಾಡಿಕೆಯ 852 ಮಿ.ಮೀ. ಮಳೆಗೆ ಬದಲಾಗಿ 551 ಮಿ.ಮೀ. ಮಳೆಯಾಗಿದ್ದು, ಶೇ.35ರಷ್ಟು ಮಳೆ ಕೊರತೆಯಾಗಿದೆ. ಇದರಿಂದಾಗಿ ರಾಜ್ಯ ಸರ್ಕಾರ 226 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ. ಒಟ್ಟು 57.93 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ಕೃಷಿ ವೆಚ್ಚದ ಆಧಾರದಲ್ಲಿ ಅಂದಾಜಿಸಿರುವ ಒಟ್ಟು ಆರ್ಥಿಕ ನಷ್ಟ ರೂ 62,481.88 ಕೋಟಿಯಾಗಿದೆ ಎಂದು ಪತ್ರದಲ್ಲಿ ವಿವರಿಸಿದ್ದಾರೆ.

ರಾಜ್ಯ ಸರ್ಕಾರ ಸಲ್ಲಿಸಿರುವ ಬರ ಪರಿಹಾರದ ಪ್ರಸ್ತಾವನೆಯಲ್ಲಿ ಬೆಳೆ ಹಾನಿ ಪರಿಹಾರಕ್ಕೆ ರೂ 6,128.70 ಕೋಟಿ, 61.91 ಲಕ್ಷ ಸಣ್ಣ ಮತ್ತು ಅತಿಸಣ್ಣ ರೈತರ ಜೀವನೋಪಾಯ ಪರಿಹಾರಕ್ಕೆ ರೂ 12,146.99 ಕೋಟಿ, ಕುಡಿಯುವ ನೀರಿನ ಪೂರೈಕೆಗೆ ರೂ 1,727 ಕೋಟಿ ಹಾಗೂ ಪಶುಸಂಗೋಪನೆ ಮತ್ತು ಜಾನುವಾರುಗಳ ಸಂರಕ್ಷಣೆಗೆ ರೂ 583.04 ಕೋಟಿ ನೆರವು ಕೋರಲಾಗಿದೆ.



**"ರಾಜ್ಯದಲ್ಲಿ ತೀವ್ರ ಬರದಿಂದಾಗಿ 226 ತಾಲೂಕುಗಳು ಬರಪೀಡಿತವಾಗಿದ್ದು, 57.93 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದೆ. ರೈತರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸಲು ಎನ್‌ಡಿಆರ್‌ಎಫ್ ಅಡಿಯಲ್ಲಿ 20,585.73 ಕೋಟಿ ಪರಿಹಾರ ಬಿಡುಗಡೆ ಮಾಡಬೇಕು. ಹಳೆಯ ಕೃಷಿ ಗಣತಿಯ ಬದಲಿಗೆ ರಾಜ್ಯದ ನವೀಕೃತ ಫ್ರೂಟ್ಸ್ ದತ್ತಾಂಶವನ್ನು ಪರಿಗಣಿಸಿ, ರೈತರಿಗೆ ಸಮರ್ಪಕ ಪರಿಹಾರ ಒದಗಿಸಬೇಕು. ಕೇಂದ್ರ ಸರ್ಕಾರ ವಿಳಂಬ ಮಾಡದೆ ನೆರವು ಬಿಡುಗಡೆ ಮಾಡಿ, ರೈತರ ಜೀವನೋಪಾಯ ಮತ್ತು ಜಾನುವಾರುಗಳ ಸಂರಕ್ಷಣೆಗೆ ಸಹಕರಿಸಬೇಕು." – ಡಾ. ಜಿ. ಪರಮೇಶ್ವರ, ಉಪ ಮುಖ್ಯಮಂತ್ರಿ**

ಬರದಿಂದ ಜೀವನೋಪಾಯ ಕಳೆದುಕೊಂಡಿರುವ ರೈತರಿಗೆ ತಕ್ಷಣ ಆರ್ಥಿಕ ನೆರವು ನೀಡುವ ಅಗತ್ಯವಿದೆ. ದಿನಕ್ಕೆ ರೂ 327ರಂತೆ 60 ದಿನಗಳ ಅವಧಿಗೆ ಜೀವನೋಪಾಯ ಪರಿಹಾರವನ್ನು ಲೆಕ್ಕಹಾಕಲಾಗಿದೆ. ಜಾನುವಾರುಗಳ ರಕ್ಷಣೆಗಾಗಿ 476 ಗೋಶಾಲೆ ಹಾಗೂ 583 ಮೇವು ಬ್ಯಾಂಕ್‌ಗಳನ್ನು ಸ್ಥಾಪಿಸಲು ಕೇಂದ್ರದ ನೆರವು ಕೋರಲಾಗಿದೆ ಎಂದು ತಿಳಿಸಿದ್ದಾರೆ.

**ಫ್ರೂಟ್ಸ್ ದತ್ತಾಂಶ ಪರಿಗಣಿಸಲು ಮನವಿ:** ಬೆಳೆ ಹಾನಿ ಪರಿಹಾರ ನಿರ್ಧರಿಸಲು 2015–16ರ ಹಳೆಯ ಕೃಷಿ ಗಣತಿಯ ಅಂಕಿಅಂಶಗಳನ್ನು ಬಳಸುತ್ತಿರುವುದರಿಂದ ರಾಜ್ಯಕ್ಕೆ ಸುಮಾರು ರೂ 1,669.50 ಕೋಟಿ ನೆರವು ಕಡಿಮೆಯಾಗುವ ಸಾಧ್ಯತೆಯಿದೆ ಎಂದು ಪರಮೇಶ್ವರ ಕಳವಳ ವ್ಯಕ್ತಪಡಿಸಿದ್ದಾರೆ. ರೈತರನ್ನು ನಿಖರವಾಗಿ ಗುರುತಿಸಿ ಪರಿಹಾರದ ಮೊತ್ತವನ್ನು ಸಮರ್ಪಕವಾಗಿ ನಿರ್ಧರಿಸಲು ಕರ್ನಾಟಕ ಸರ್ಕಾರದ ನವೀಕೃತ ಫ್ರೂಟ್ಸ್ (FRUITS) ದತ್ತಾಂಶವನ್ನು ಬಳಸುವಂತೆ ಕೇಂದ್ರಕ್ಕೆ ಮನವಿ ಮಾಡಿದ್ದಾರೆ.

ಇದಲ್ಲದೆ, ಬರಪೀಡಿತ ಪ್ರದೇಶಗಳ ಶಾಲಾ ಮಕ್ಕಳಿಗೆ ಬೇಸಿಗೆ ರಜೆಯಲ್ಲಿಯೂ ಪೌಷ್ಟಿಕ ಆಹಾರ ಒದಗಿಸಲು ಪಿಎಂ ಪೋಷಣ್ ಯೋಜನೆಯಡಿ ರೂ 427.20 ಕೋಟಿ ಹಾಗೂ ಪೂರಕ ಪೌಷ್ಟಿಕಾಂಶ ಕಾರ್ಯಕ್ರಮದಡಿ ರೂ 70.96 ಕೋಟಿ ಹೆಚ್ಚುವರಿ ನೆರವು ನೀಡುವಂತೆ ಕೋರಿದ್ದಾರೆ. ಕೃಷಿ ಉತ್ಪಾದನಾ ವೆಚ್ಚ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಬೆಳೆ ಹಾನಿ ಪರಿಹಾರದ ಪ್ರಸ್ತುತ ಮಾನದಂಡಗಳನ್ನು ಪರಿಷ್ಕರಿಸುವ ಅಗತ್ಯವನ್ನೂ ಪ್ರಸ್ತಾಪಿಸಿದ್ದಾರೆ.

**ಶೀಘ್ರ ನೆರವು ಬಿಡುಗಡೆಗೆ ಒತ್ತಾಯ:** ಕೇಂದ್ರದ ಅಂತರ ಸಚಿವಾಲಯಗಳ ಅಧ್ಯಯನ ತಂಡವು ಅ. 3ರಿಂದ 6ರವರೆಗೆ ರಾಜ್ಯಕ್ಕೆ ಭೇಟಿ ನೀಡಿ ಬರ ಪರಿಸ್ಥಿತಿಯನ್ನು ಪರಿಶೀಲಿಸಿರುವುದನ್ನು ಉಲ್ಲೇಖಿಸಿರುವ ಅವರು, ಅಧ್ಯಯನ ತಂಡದ ಶಿಫಾರಸುಗಳನ್ನು ಉನ್ನತ ಮಟ್ಟದ ಸಮಿತಿಗೆ ಶೀಘ್ರ ಸಲ್ಲಿಸಿ, ಪರಿಹಾರ ಪ್ರಸ್ತಾವನೆಯನ್ನು ತ್ವರಿತವಾಗಿ ಪರಿಶೀಲಿಸುವಂತೆ ಆಗ್ರಹಿಸಿದ್ದಾರೆ.

ರೈತರ ಕಲ್ಯಾಣ ರಾಜಕೀಯ ಮತ್ತು ಆಡಳಿತಾತ್ಮಕ ಗಡಿಗಳನ್ನು ಮೀರಿದ ಮಹತ್ವದ ವಿಚಾರವಾಗಿದೆ. ಸಹಕಾರಿ ಒಕ್ಕೂಟ ವ್ಯವಸ್ಥೆಯ ಆಶಯದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ, ಕೃಷಿ ಆಧಾರಿತ ಜೀವನೋಪಾಯವನ್ನು ರಕ್ಷಿಸಲು ಹಾಗೂ ಬರ ಸಂಕಷ್ಟದಿಂದ ರೈತರನ್ನು ಪಾರು ಮಾಡಲು ಅಗತ್ಯ ಆರ್ಥಿಕ ನೆರವನ್ನು ವಿಳಂಬವಿಲ್ಲದೆ ಬಿಡುಗಡೆ ಮಾಡಬೇಕು ಎಂದು ಪರಮೇಶ್ವರ ಒತ್ತಾಯಿಸಿದ್ದಾರೆ.

## ನವೆಂಬರ್‌ನಿಂದ ಯೂನಿಟ್‌ಗೆ 50 ಪೈಸೆ ದರ ಏರಿಕೆ ಸಾಧ್ಯತೆ?

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದಲ್ಲಿ ಕಳೆದ ಸೆಪ್ಟೆಂಬರ್ ತಿಂಗಳಿನಲ್ಲಿ ಉಂಟಾಗಿದ್ದ ತೀವ್ರ ವಿದ್ಯುತ್ ಬಿಕ್ಕಟ್ಟನ್ನು ನಿಭಾಯಿಸಲು ಉಂಟಾದ ಹೆಚ್ಚುವರಿ ವೆಚ್ಚವನ್ನು ಸರಿದೂಗಿಸಲು, ಅಕ್ಟೋಬರ್ ಮತ್ತು ನವೆಂಬರ್ ಅವಧಿಯಲ್ಲಿ ವಿದ್ಯುತ್ ದರವನ್ನು ಪ್ರತಿ ಯೂನಿಟ್‌ಗೆ 40 ರಿಂದ 50 ಪೈಸೆಯಷ್ಟು ಹೆಚ್ಚಿಸಲು ರಾಜ್ಯ ಸರ್ಕಾರ ಹಾಗೂ ಇಂಧನ ಇಲಾಖೆ ಮುಂದಾಗಿದೆ.

ಮುಂಬರುವ ನವೆಂಬರ್ 1 ರಿಂದಲೇ ನೂತರ ದರ ಪರಿಷ್ಕರಣೆಯಾಗುವ ಸಂಭವವಿದೆ. ಈ ದರ ಏರಿಕೆಯು ಇಂಧನ ಮತ್ತು ವಿದ್ಯುತ್ ಖರೀದಿ ವೆಚ್ಚ ಹೊಂದಾಣಿಕೆ ನಿಯಮಾವಳಿಗಳ ಅಡಿಯಲ್ಲಿ ಬರಲಿದ್ದು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ಅಂತಿಮ ಅನುಮೋದನೆಯೊಂದಿಗೆ ಜಾರಿಗೆ ಬರಲಿದೆ. ಉಚಿತ ವಿದ್ಯುತ್ ಒದಗಿಸುವ ಗೃಹ ಜ್ಯೋತಿ ಯೋಜನೆಯ ವ್ಯಾಪ್ತಿಗೆ ಬಾರದ ಗ್ರಾಹಕರು ಮತ್ತು ವಾಣಿಜ್ಯ ಬಳಕೆಯ ಗ್ರಾಹಕರು ಈ ಹೆಚ್ಚುವರಿ ದರವನ್ನು ತಮ್ಮ ಮಾಸಿಕ ಬಿಲ್‌ನಲ್ಲಿ ಪಾವತಿಸಬೇಕಾಗುತ್ತದೆ.

ಸೆಪ್ಟೆಂಬರ್ ತಿಂಗಳಿನಲ್ಲಿ ನೈಋತ್ಯ ಮುಂಗಾರು ಮಳೆಯ ಅಭಾವ ಮತ್ತು ಒಣ ಹವೆಯ ವಾತಾವರಣದಿಂದಾಗಿ ರಾಜ್ಯದಾದ್ಯಂತ ವಿದ್ಯುತ್‌ಗೆ ಅಭೂತಪೂರ್ವ ಬೇಡಿಕೆ ಸೃಷ್ಟಿಯಾಗಿತ್ತು. ರಾಜ್ಯದ ಇತಿಹಾಸದಲ್ಲೇ ಮೊದಲ ಬಾರಿಗೆ ವಿದ್ಯುತ್ ಬೇಡಿಕೆಯು ಬರೋಬ್ಬರಿ 20,000 ಮೆಗಾವ್ಯಾಟ್ ದಾಟಿ ಹೊಸ ದಾಖಲೆ ಬರೆದಿದೆ.

ರಾಜ್ಯದಲ್ಲಿ ಜಲ, ಉಷ್ಣ, ಸೌರ ಮತ್ತು ಪವನ ಶಕ್ತಿಯ ಮೂಲಗಳಿಂದ ಒಟ್ಟು 22,000 ಮೆಗಾವ್ಯಾಟ್‌ವರೆಗೆ



ಬೇಡಿಕೆ ಪೂರೈಸುವ ಸಾಮರ್ಥ್ಯವಿದ್ದರೂ, ಗಾಳಿಯ ವೇಗ ಕಡಿಮೆಯಾದ ಕಾರಣ ಪವನ ವಿದ್ಯುತ್ ಉತ್ಪಾದನೆ ತೀವ್ರವಾಗಿ ಕುಸಿಯಿತು. ದೈನಂದಿನ 2,500 3,000 ಮೆಗಾವ್ಯಾಟ್ ತಲುಪುತ್ತಿದ್ದ ಪವನ ವಿದ್ಯುತ್ ಉತ್ಪಾದನೆ ಕೇವಲ 200 – 300 ಮೆಗಾವ್ಯಾಟ್‌ಗೆ ಕುಸಿಯಿತು.ರಾತ್ರಿಯ ಸಮಯದಲ್ಲಿ ಸೌರ ವಿದ್ಯುತ್ ಲಭ್ಯವಿಲ್ಲದಿರುವುದರಿಂದ ಮತ್ತು ಪವನ ವಿದ್ಯುತ್ ಉತ್ಪಾದನೆಯೂ ಇಳಿಕೆಯಾದ್ದರಿಂದ ಪವರ್ ಗ್ರಿಡ್ ಮೇಲಿನ ಒತ್ತಡ ತೀವ್ರವಾಗಿ ಹೆಚ್ಚಾಯಿತು.

ರಾಜ್ಯದಲ್ಲಿದ್ದ ತುರ್ತು ಪರಿಸ್ಥಿತಿಯನ್ನು ನಿಭಾಯಿಸಲು ಮತ್ತು ಪದೇ ಪದೇ ಉಂಟಾಗುತ್ತಿದ್ದ ವಿದ್ಯುತ್ ಕಡಿತವನ್ನು ತಡೆಯಲು ಸರ್ಕಾರವು ಮುಕ್ತ ಮಾರುಕಟ್ಟೆಯಿಂದ ಹೆಚ್ಚಿನ ದರ ನೀಡಿ ವಿದ್ಯುತ್ ಖರೀದಿಸಬೇಕಾಯಿತು. ಸಾಮಾನ್ಯವಾಗಿ ನಾವು ಪ್ರತಿ ಯೂನಿಟ್‌ಗೆ ಸುಮಾರು 6 ರಂತೆ ವಿದ್ಯುತ್ ಖರೀದಿಸುತ್ತೇವೆ. ಮಾರುಕಟ್ಟೆಯಲ್ಲಿ ಗರಿಷ್ಠ ಎಂದರೆ 7 ರಿಂದ 8 ಇರುತ್ತದೆ. ಆದರೆ ಸೆಪ್ಟೆಂಬರ್‌ನಲ್ಲಿ ದಕ್ಷಿಣ ಭಾರತದ ಇತರ ರಾಜ್ಯಗಳಲ್ಲೂ ತೀವ್ರ ವಿದ್ಯುತ್ ಅಭಾವವಿದ್ದ ಕಾರಣ ತೀವ್ರ ಪೈಪೋಟಿ ಏರ್ಪಟ್ಟಿತ್ತು. ಕೆಲವು ರಾಜ್ಯಗಳು ಹಗಲಿನ ವೇಳೆಯಲ್ಲೇ ಪ್ರತಿ ಯೂನಿಟ್‌ಗೆ 25 ರಿಂದ 30 ಪಾವತಿಸಿ ವಿದ್ಯುತ್ ಖರೀದಿಸಿದವು ಎಂದು ಇಂಧನ ಇಲಾಖೆಯ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

**ಗ್ರಾಹಕರಿಗೆ ವಿದ್ಯುತ್ ವಿವೇಕಯುತ ಬಳಕೆ ಸಲಹೆ:** ರಾತ್ರಿ ವೇಳೆಯ ಗ್ರಿಡ್ ಒತ್ತಡವನ್ನು ಕಡಿಮೆ ಮಾಡಲು ಮತ್ತು ವಿದ್ಯುತ್ ಬಳಕೆಯನ್ನು ನಿಯಂತ್ರಿಸಲು ಬೆಸ್ಕಾಂ ಸೇರಿದಂತೆ ವಿವಿಧ ಎಸ್ಕಾಂಗಳು ಗ್ರಾಹಕರಲ್ಲಿ ಜಾಗೃತಿ ಮೂಡಿಸಲು ನಿರ್ಧರಿಸಿವೆ.

**ಹಗಲಿನ ಬಳಕೆ ಹೆಚ್ಚಿಸಿ:** ವಾಷಿಂಗ್ ಮೆಷಿನ್‌ಗಳು, ಹೈ–ಹಾರ್ಸ್‌ಪವರ್ ವಾಟರ್ ಪಂಪ್‌ಗಳು ಸೇರಿದಂತೆ ಹೆಚ್ಚು ವಿದ್ಯುತ್ ಎಳೆಯುವ ಉಪಕರಣಗಳನ್ನು ಸೌರಶಕ್ತಿ ಲಭ್ಯವಿರುವ ಹಗಲಿನ ವೇಳೆಯಲ್ಲೇ ಬಳಸಿ ಎಂದು ಅಧಿಕಾರಿಗಳು ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ.

**ವಾಣಿಜ್ಯ ಸಂಸ್ಥೆಗಳ ಸವಾಲು:** ವಾಣಿಜ್ಯ ಸಂಸ್ಥೆಗಳ ಕಾರ್ಯಾಚರಣೆ ನಿಯಂತ್ರಿಸಲು ಸಾಧ್ಯವಿಲ್ಲದಿದ್ದರೂ, ಗೃಹ ಬಳಕೆಯ ಗ್ರಾಹಕರು ಸ್ವಯಂಪ್ರೇರಿತವಾಗಿ ರಾತ್ರಿ ವೇಳೆಯ ಬಳಕೆಯನ್ನು ಯೋಜಿಸಿದರೆ ಜಾಲದ ಮೇಲಿನ ಒತ್ತಡ ಕಡಿಮೆಯಾಗಲಿದೆ.ಕರ್ನಾಟಕವು ಈಗಾಗಲೇ 3 ವರ್ಷಗಳ ಅವಧಿಯ ದರ ನಿಗದಿ ವ್ಯವಸ್ಥೆಯನ್ನು ಅಳವಡಿಸಿಕೊಂಡಿದ್ದು, 2025ರ ದರ ಪರಿಷ್ಕರಣೆಯು 2028ರವರೆಗೆ ಜಾರಿಯಲ್ಲಿರುತ್ತದೆ. ಆದಾಗ್ಯೂ, ಸೆಪ್ಟೆಂಬರ್‌ನಲ್ಲಾದ ಅಸಾಧಾರಣ ವೆಚ್ಚವನ್ನು ಭರಿಸಲು ಎಫ್.ಪಿ.ಪಿ.ಸಿ.ಎ ಅಡಿಯಲ್ಲಿ ಈ ತಾತ್ಕಾಲಿಕ ಅಲ್ಪಾವಧಿ ಹೆಚ್ಚಳವನ್ನು ಕೈಗೊಳ್ಳಲಾಗುತ್ತಿದ್ದು, ಇದು ಮುಂಬರುವ ತಿಂಗಳಿಗೆ ಮಾತ್ರ ಅನ್ವಯಿಸಲಿದೆ ಎಂದು ಇಂಧನ ಇಲಾಖೆಯ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

## ಕೆಪಿಎಸ್‌ಸಿ ಸದಸ್ಯೆ ಶಾಂತಾ ಹೊಸಮನಿಗೆ ನಿರೀಕ್ಷಣಾ ಜಾಮೀನು ನಿರಾಕರಣೆ

● ವಿಕ್ರಮ ವಾಹಿನಿ । ಬೆಂಗಳೂರು

ಕೆಎಎಸ್ ಪರೀಕ್ಷೆಯ ಸಂದರ್ಶನದಲ್ಲಿ ಅಭ್ಯರ್ಥಿಯೊಬ್ಬರಿಗೆ ಅನುಕೂಲ ಮಾಡಿಕೊಡಲು ಲಂಚ ಸ್ವೀಕರಿಸಿದ ಆರೋಪ ಎದುರಿಸುತ್ತಿರುವ ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ಸದಸ್ಯೆ ಡಾ. ಶಾಂತಾ ಹೊಸಮನಿ ಅವರಿಗೆ ನಿರೀಕ್ಷಣಾ ಜಾಮೀನು ನೀಡಲು ಕರ್ನಾಟಕ ಹೈಕೋರ್ಟ್ ನಿರಾಕರಿಸಿದೆ.

ನ್ಯಾಯಮೂರ್ತಿ ಎಸ್. ವಿಶ್ವಜಿತ್ ಶೆಟ್ಟಿ ಅವರ ಏಕಸದಸ್ಯ ಪೀಠ, ವಿಚಾರಣಾ ನ್ಯಾಯಾಲಯದ ಆದೇಶ ಪ್ರಶ್ನಿಸಿ ಶಾಂತಾ ಹೊಸಮನಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದೆ. ಉನ್ನತ ಹುದ್ದೆಯಲ್ಲಿರುವವರು ಅಧಿಕಾರ ದುರುಪಯೋಗಪಡಿಸಿಕೊಂಡರೆ ಸಾರ್ವಜನಿಕರ ವಿಶ್ವಾಸ ಕುಗ್ಗುತ್ತದೆ. ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗುವ ಇಂತಹ ಪ್ರಕರಣಗಳಲ್ಲಿ ಆರೋಪದ ಮೂಲವನ್ನು ಪತ್ತೆಹಚ್ಚಲು ಸಮಗ್ರ ತನಿಖೆ ಅಗತ್ಯ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ಪ್ರಾಸಿಕ್ಯೂಷನ್ ಸಲ್ಲಿಸಿರುವ ದಾಖಲೆಗಳು ಹುದ್ದೆಯ ದುರುಪಯೋಗ ಮತ್ತು ಅಕ್ರಮ ಲಾಭ ಪಡೆದಿರುವುದನ್ನು ಪ್ರಾಥಮಿಕವಾಗಿ ಸೂಚಿಸುತ್ತವೆ ಎಂದು ನ್ಯಾಯಾಲಯ ಹೇಳಿದೆ.

ಆರೋಪಿಯ ಪರ ವಕೀಲರು, ತಮ್ಮ ಕಕ್ಷಿದಾರರು ತನಿಖೆಗೆ ಸಹಕರಿಸಿದ್ದು, ಪೊಲೀಸ್ ವಶಕ್ಕೆ ಪಡೆದು ವಿಚಾರಣೆ ನಡೆಸುವ ಅಗತ್ಯವಿಲ್ಲ ಎಂದು ವಾದಿಸಿದ್ದರು. ಆದರೆ, ತನಿಖೆಗೆ ಸಮರ್ಪಕ ಸಹಕಾರ ನೀಡಿಲ್ಲ ಹಾಗೂ ಹೇಳಿಕೆಗಳಲ್ಲಿ ವ್ಯತ್ಯಾಸಗಳಿವೆ ಎಂದು ಸರ್ಕಾರಿ ಪರ ವಕೀಲರು ಆಕ್ಷೇಪಿಸಿದ್ದರು.

ನಿರೀಕ್ಷಣಾ ಜಾಮೀನು ನಿರಾಕರಿಸಿದ ಮಾತ್ರಕ್ಕೆ ಆರೋಪಿಯನ್ನು ಕಡ್ಡಾಯವಾಗಿ ಪೊಲೀಸ್ ವಶಕ್ಕೆ ಪಡೆಯಬೇಕಿಲ್ಲ. ವಶಕ್ಕೆ ಪಡೆಯುವ ಅಗತ್ಯವನ್ನು ತನಿಖಾಧಿಕಾರಿಗಳು ಸಾಕ್ಷ್ಯ ಮತ್ತು ಪ್ರಕರಣದ ಸನ್ನಿವೇಶಗಳ ಆಧಾರದಲ್ಲಿ ನಿರ್ಧರಿಸಬಹುದು ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.

## ಭಕ್ತಿಭಾವದಲ್ಲಿ ಸಂಪನ್ನಗೊಂಡ ಶ್ರೀನಿವಾಸ ಕಲ್ಯಾಣೋತ್ಸವ

● ವಿಕ್ರಮ ವಾಹಿನಿ । ಬೆಂಗಳೂರು

ವಿಜಯದಶಮಿಯ ಶುಭ ಸಂದರ್ಭದಲ್ಲಿ ಶ್ರೀನಿವಾಸ ಉತ್ಸವ ಬಳಗದ ವತಿಯಿಂದ ಚಿಕ್ಕಲಸಂದ್ರದ ಬೃಂದಾವನ ಗೋಶಾಲೆಯಲ್ಲಿ ಶ್ರೀನಿವಾಸ ಕಲ್ಯಾಣೋತ್ಸವವನ್ನು ಭಕ್ತಿಭಾವದಿಂದ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ವೇದಮಂತ್ರಗಳ ಪಠಣ, ದಾಸಸಾಹಿತ್ಯದ ಗಾಯನ ಹಾಗೂ ಭಕ್ತಿಪೂರ್ಣ ನಿರೂಪಣೆಯ ಮೂಲಕ ಶ್ರೀನಿವಾಸ ಸ್ವಾಮಿ ಮತ್ತು ಪದ್ಮಾವತಿ ಅಮ್ಮನವರ ದಿವ್ಯ ಕಲ್ಯಾಣದ ಮಹಿಮೆಯನ್ನು ಸ್ಮರಿಸಲಾಯಿತು. ವಿದುಷಿ ಶುಭ ಸಂತೋಷ್ ಮತ್ತು ಅಪೂರ್ವ ಲಕ್ಷ್ಮಿ ಅವರ ಸುಮಧುರ ಗಾಯನ ಕಾರ್ಯಕ್ರಮಕ್ಕೆ ಮೆರುಗು ನೀಡಿತು. ಸಂಸ್ಕೃತಿ ಚಿಂತಕ ಡಾ. ಗುರುರಾಜ ಪೋಶೆಟ್ಟಿಹಳ್ಳಿ ನಿರೂಪಣೆ ಮಾಡಿದರು.

ಸನಾತನ ಧಾರ್ಮಿಕ ಪರಂಪರೆ, ದಾಸಸಾಹಿತ್ಯ



ಹಾಗೂ ಆಧ್ಯಾತ್ಮಿಕ ಮೌಲ್ಯಗಳ ಮಹತ್ವವನ್ನು ಸಾರಿದ ಈ ಕಲ್ಯಾಣೋತ್ಸವ ಭಕ್ತರಲ್ಲಿ ಶ್ರದ್ಧೆ ಮತ್ತು ಭಕ್ತಿಭಾವವನ್ನು ಮೂಡಿಸಿತು. ಇಂತಹ ಕಾರ್ಯಕ್ರಮಗಳು ಭಾರತೀಯ ಸಂಸ್ಕೃತಿ ಮತ್ತು ಆಧ್ಯಾತ್ಮಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಸಹಕಾರಿಯಾಗಿವೆ ಎಂದು ಶ್ರೀನಿವಾಸ ಉತ್ಸವ ಬಳಗದ ಸಂಸ್ಥಾಪಕ ಅಧ್ಯಕ್ಷ ಡಾ. ವಾದಿರಾಜ ತಾಯಲೂರು ತಿಳಿಸಿದರು.

## ಕಾಶಿ ತಮಿಳು ಸಂಗಮ 5.0 ನೋಂದಣಿ ಪೋರ್ಟಲ್‌ಗೆ ಚಾಲನೆ

● ವಿಕ್ರಮ ವಾಹಿನಿ । ನವದೆಹಲಿ

ತಮಿಳುನಾಡು ಮತ್ತು ಕಾಶಿ ನಡುವಿನ ಪ್ರಾಚೀನ ಸಾಂಸ್ಕೃತಿಕ ಹಾಗೂ ನಾಗರಿಕತೆಯ ಸಂಬಂಧವನ್ನು ಬಲಪಡಿಸುವ ಉದ್ದೇಶದ 'ಕಾಶಿ ತಮಿಳು ಸಂಗಮ 5.0' ಕಾರ್ಯಕ್ರಮದ ನೋಂದಣಿ ಪೋರ್ಟಲ್‌ಗೆ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಚಾಲನೆ ನೀಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ 'ಏಕ್ ಭಾರತ್ ಶ್ರೇಷ್ಠ ಭಾರತ್' ಪರಿಕಲ್ಪನೆಯನ್ನು ಸಾಕಾರಗೊಳಿಸುವಲ್ಲಿ ಕಾಶಿ ತಮಿಳು ಸಂಗಮ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಅವರು ತಿಳಿಸಿದರು. ಈ ಬಾರಿಯ ಐದನೇ ಆವೃತ್ತಿಯು ನವೆಂಬರ್ 28ರಿಂದ ಡಿಸೆಂಬರ್ 12ರವರೆಗೆ ವಾರಣಾಸಿಯಲ್ಲಿ ನಡೆಯಲಿದ್ದು, ಪ್ರತಿನಿಧಿಗಳು ಪ್ರಯಾಗ್‌ರಾಜ್ ಮತ್ತು ಅಯೋಧ್ಯೆಗೂ ಭೇಟಿ ನೀಡಲಿದ್ದಾರೆ.

'ತಿರುಕ್ಕುರಲ್ ಪಯಿಲ್ವೋಮ್, ತಿರುಕ್ಕುರಲ್ ಅಭ್ಯಾಸ್ ಕರೇನ್' ಎಂಬುದು ಈ ವರ್ಷದ ಮಹೋತ್ಸವದ ವಿಷಯವಾಗಿದೆ. ತಿರುಕ್ಕುರಲ್‌ನಲ್ಲಿರುವ ನೈತಿಕತೆ, ಸದಾಚಾರ ಮತ್ತು ಜವಾಬ್ದಾರಿಯುತ ಜೀವನದ ಮೌಲ್ಯಗಳನ್ನು



ಯುವಜನರಿಗೆ ಪರಿಚಯಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ತಮಿಳುನಾಡಿನಿಂದ ಏಳು ವಿಭಾಗಗಳಲ್ಲಿ ಸುಮಾರು 1,400 ಪ್ರತಿನಿಧಿಗಳು ಭಾಗವಹಿಸಲಿದ್ದು, ವಿದ್ಯಾರ್ಥಿ ಕಾರ್ಯಕ್ರಮಗಳು, ಶೈಕ್ಷಣಿಕ ಸಂವಾದಗಳು ಹಾಗೂ ತಿರುಕ್ಕುರಲ್ ತಜ್ಞರೊಂದಿಗೆ ಚರ್ಚೆಗಳು ನಡೆಯಲಿವೆ.

ರಾಷ್ಟ್ರೀಯ ಶಿಕ್ಷಣ ನೀತಿ–2020ರ ಆಶಯದಂತೆ ಭಾರತೀಯ ಜ್ಞಾನ ಪರಂಪರೆ ಮತ್ತು ಸಾಂಸ್ಕೃತಿಕ ಕಲಿಕೆಯನ್ನು ಉತ್ತೇಜಿಸುವ ಈ ಕಾರ್ಯಕ್ರಮವು ದೇಶದ ಭಾಷಾ ವೈವಿಧ್ಯತೆ ಹಾಗೂ ಏಕತೆಯನ್ನು ಬಲಪಡಿಸಲಿದೆ ಎಂದು ಪ್ರಲ್ಹಾದ ಜೋಶಿ ವಿಶ್ವಾಸ ವ್ಯಕ್ತಪಡಿಸಿದರು.

# ಶರಾವತಿ, ಮೇಕೆದಾಟು ಯೋಜನೆಗಳಿಗೆ ಅನುಮೋದನೆ ನೀಡಿ: ಡಿಕೆಶಿ ಮನವಿ

## ಕಸ್ತೂರಿ ರಂಗನ್ ವರದಿ: ಭೌತಿಕ ಸಮೀಕ್ಷೆ ಪೂರ್ಣಗೊಳ್ಳುವವರೆಗೆ ಕರಡು ಅಧಿಸೂಚನೆ ಅಂತಿಮಗೊಳಿಸದಂತೆ ಆಗ್ರಹ

● ವಿಕ್ರಮ ವಾಹಿನಿ । ನವದೆಹಲಿ

ಕರ್ನಾಟಕದ ಮಹತ್ವಾಕಾಂಕ್ಷಿ ಶರಾವತಿ ಪಂಪ್ಡ್ ಸ್ಟೋರೇಜ್ ಹಾಗೂ ಮೇಕೆದಾಟು ಯೋಜನೆಗಳಿಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿ ಅನುಮೋದನೆ ನೀಡಬೇಕು ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಇದೇ ವೇಳೆ, ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ಪ್ರದೇಶ ಘೋಷಣೆಗೆ ಸಂಬಂಧಿಸಿದ ಕಸ್ತೂರಿ ರಂಗನ್ ವರದಿಯ ಏಳನೇ ಕರಡು ಅಧಿಸೂಚನೆಯನ್ನು ಭೌತಿಕ ಸಮೀಕ್ಷೆ ಪೂರ್ಣಗೊಳ್ಳುವವರೆಗೆ ಅಂತಿಮಗೊಳಿಸಬಾರದು ಎಂದು ಮನವಿ ಮಾಡಿದ್ದಾರೆ.

ನವದೆಹಲಿಯ ಪರಿಸರ ಭವನದಲ್ಲಿ ಗುರುವಾರ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿಯಾದ ಶಿವಕುಮಾರ್, ರಾಜ್ಯದ ಪ್ರಮುಖ ಯೋಜನೆಗಳು ಹಾಗೂ ಪರಿಸರ ಸೂಕ್ಷ್ಮ ಪ್ರದೇಶದ ಅಧಿಸೂಚನೆಗೆ ಸಂಬಂಧಿಸಿದಂತೆ ವಿವರವಾದ ಮನವಿ ಸಲ್ಲಿಸಿದರು.

**ಶರಾವತಿ ಯೋಜನೆಗೆ ಅಗತ್ಯ ದಾಖಲೆ ಸಲ್ಲಿಕೆ**

ಶರಾವತಿ ಪಂಪ್ಡ್ ಸ್ಟೋರೇಜ್ ಯೋಜನೆಯ



**ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ನವದೆಹಲಿಯ ಪರಿಸರ ಭವನದಲ್ಲಿ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಅವರನ್ನು ಗುರುವಾರ ಭೇಟಿ ಮಾಡಿ ಕಸ್ತೂರಿ ರಂಗನ್ ವರದಿ ಸೇರಿದಂತೆ ರಾಜ್ಯಕ್ಕೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಿದರು.**

ಪ್ರಸ್ತಾವನೆಯನ್ನು 2026ರ ಫೆಬ್ರವರಿ 28ರಂದು ನಡೆದ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿಯ 89ನೇ ಸಭೆಯಲ್ಲಿ ಚರ್ಚಿಸಲಾಗಿತ್ತು. ತಾಂತ್ರಿಕ ಸಮಿತಿ ಎತ್ತಿದ್ದ ಪ್ರಶ್ನೆಗಳಿಗೆ ಸ್ಪಷ್ಟನೆ ಹಾಗೂ ಬೆಂಗಳೂರಿನ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಅಡ್ವಾನ್ಸ್ಡ್ ಸ್ಟಡೀಸ್ (ಎನ್‌ಐಎಎಸ್) ತಾಂತ್ರಿಕ ವರದಿ ಸಲ್ಲಿಸುವಂತೆ ಸೂಚಿಸಲಾಗಿತ್ತು. ಅದರಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ, ಸಮಿತಿ ಕೇಳಿದ್ದ ಪ್ರಶ್ನೆಗಳಿಗೆ ರಾಜ್ಯ ಸರ್ಕಾರ ಉತ್ತರಿಸಿದೆ. ಹೀಗಾಗಿ ಯೋಜನೆಗೆ ಶೀಘ್ರ ಅನುಮೋದನೆ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಶಿವಕುಮಾರ್ ಮನವಿ ಮಾಡಿದ್ದಾರೆ.

**ಮೇಕೆದಾಟು ಸಮೀಕ್ಷೆಗೆ ಅನುಮತಿ ಕೋರಿಕೆ**

ಮೇಕೆದಾಟು ಸಮತೋಲನ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ ಕಾವೇರಿ ವನ್ಯಜೀವಿ ಅಭಯಾರಣ್ಯದಲ್ಲಿ ಭೂ–ತಾಂತ್ರಿಕ ಸಮೀಕ್ಷೆ ನಡೆಸಲು 20 ಬೋರ್‌ಹೋಲ್‌ಗಳನ್ನು ಕೊರೆಯುವ ಪ್ರಸ್ತಾವನೆಯನ್ನು 2026ರ ಜುಲೈ 1ರಂದು ಕೇಂದ್ರ ಪರಿಸರ ಸಚಿವಾಲಯಕ್ಕೆ ಸಲ್ಲಿಸಲಾಗಿದೆ. ಇದಕ್ಕಾಗಿ ಕೇವಲ 0.0000352 ಹೆಕ್ಟೇರ್ ಪ್ರದೇಶದ ಅಗತ್ಯವಿದೆ ಎಂದು ಪತ್ರದಲ್ಲಿ ವಿವರಿಸಲಾಗಿದೆ.

ಈ ಪ್ರಸ್ತಾವನೆಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಅರ್ಜಿಗಳ ಸ್ಥಿತಿಗತಿ ಕುರಿತು ಕೇಂದ್ರ ಸಚಿವಾಲಯ ಹೆಚ್ಚುವರಿ ದಾಖಲೆಗಳನ್ನು ಕೇಳಿದ್ದು, ಅವುಗಳನ್ನು ಶೀಘ್ರದಲ್ಲೇ ಸಲ್ಲಿಸಲಾಗುವುದು. ಈ ಪ್ರಸ್ತಾವನೆಯು ಸಮೀಕ್ಷೆ ಮತ್ತು ತನಿಖಾ ಚಟುವಟಿಕೆಗಳಿಗೆ ಮಾತ್ರ ಸೀಮಿತವಾಗಿದ್ದು, ಸಂರಕ್ಷಿತ ಪ್ರದೇಶದ ಭೂಮಿಯನ್ನು ಯೋಜನೆಗಾಗಿ ಬಳಸಿಕೊಳ್ಳುವ ಅನುಮತಿಯನ್ನು ಈಗ ಕೋರಿಲ್ಲ. ಹೀಗಾಗಿ ಎರಡೂ ಯೋಜನೆಗಳ ಪ್ರಸ್ತಾವನೆಗಳನ್ನು ತ್ವರಿತವಾಗಿ ಪರಿಶೀಲಿಸಿ ಶಿಫಾರಸು ಮಾಡುವಂತೆ ಶಿವಕುಮಾರ್ ಕೋರಿದ್ದಾರೆ.

**ಭೌತಿಕ ಸಮೀಕ್ಷೆ ಬಳಿಕವೇ ಅಂತಿಮ ಅಧಿಸೂಚನೆ**

ಕಸ್ತೂರಿ ರಂಗನ್ ವರದಿಯ ಆಧಾರದ ಮೇಲೆ ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ಪ್ರದೇಶ ಘೋಷಿಸಲು ಕೇಂದ್ರ ಸರ್ಕಾರ 2026ರ ಜುಲೈ 27ರಂದು ಏಳನೇ ಕರಡು ಅಧಿಸೂಚನೆ ಹೊರಡಿಸಿದೆ. ರಾಜ್ಯ ಸರ್ಕಾರ ರಚಿಸಿರುವ ಉನ್ನತ ಮಟ್ಟದ ಸಮಿತಿಯ ವರದಿ ಸಲ್ಲಿಕೆಯಾದ ಬಳಿಕ ಒಂದು ವರ್ಷದ ಅವಧಿಯಲ್ಲಿ ಭೌತಿಕ ಸಮೀಕ್ಷೆ ಪೂರ್ಣಗೊಳಿಸಲು ಅವಕಾಶ ನೀಡಬೇಕು. ಅಲ್ಲಿಯವರೆಗೆ ಅಧಿಸೂಚನೆಯನ್ನು ಅಂತಿಮಗೊಳಿಸದೆ, ರಾಜ್ಯ ಸರ್ಕಾರದೊಂದಿಗೆ ಸಮಾಲೋಚಿಸಿ ಮುಂದಿನ ಕ್ರಮ ಕೈಗೊಳ್ಳಬೇಕು ಎಂದು ಶಿವಕುಮಾರ್ ಮನವಿ ಮಾಡಿದ್ದಾರೆ.

ಈ ಸಂಬಂಧ ಸೆಪ್ಟೆಂಬರ್ 25ರಂದು ಪ್ರಧಾನಿ ನರೇಂದ್ರ ಮೋದಿ ಅವರಿಗೂ ಪತ್ರ ಬರೆದು ಮನವಿ ಸಲ್ಲಿಸಿರುವುದಾಗಿ ತಿಳಿಸಿದ್ದಾರೆ.

**ಸಕ್ಕರೆ ಕಾರ್ಖಾನೆಯನ್ನು ಕೈಬಿಡಲು ಮನವಿ**

ಬೆಳಗಾವಿಯ ಎಕೊ ಕೇನ್ ಶುಗರ್ ಅಂಡ್ ಎನರ್ಜಿ ಲಿಮಿಟೆಡ್ ಸಕ್ಕರೆ ಕಾರ್ಖಾನೆ 2016ಕ್ಕೂ ಮುನ್ನವೇ ಆರಂಭವಾಗಿರುವುದರಿಂದ ಅದನ್ನು ಪರಿಸರ ಸೂಕ್ಷ್ಮ ಪ್ರದೇಶದ ವ್ಯಾಪ್ತಿಯಿಂದ ಹೊರಗಿಡಬೇಕು ಎಂದು ಶಿವಕುಮಾರ್ ಕೋರಿದ್ದಾರೆ.

ಕಾರ್ಖಾನೆಯಲ್ಲಿ ಸುಮಾರು 500 ಮಂದಿ ಕೆಲಸ ಮಾಡುತ್ತಿದ್ದು, ಸುಮಾರು 5,000 ಕುಟುಂಬಗಳು ಅದನ್ನು ಅವಲಂಬಿಸಿವೆ. ಹೀಗಾಗಿ ಕಾರ್ಖಾನೆಯ ಉದ್ಯೋಗ ಹಾಗೂ ಜೀವನೋಪಾಯದ ಹಿತದೃಷ್ಟಿಯಿಂದ ಅದನ್ನು ಪರಿಸರ ಸೂಕ್ಷ್ಮ ಪ್ರದೇಶದ ವ್ಯಾಪ್ತಿಯಿಂದ ಕೈಬಿಡುವಂತೆ ಕೇಂದ್ರ ಸಚಿವರಿಗೆ ಮನವಿ ಮಾಡಿದ್ದಾರೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 195,